BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ

ಬಾಲಿವುಡ್ ನಟಿ ಮತ್ತು ಸಂಸದೆ ಕಂಗನಾ ರಣಾವತ್ ಮುಖ್ಯ ಭೂಮಿಕೆಯಲ್ಲಿ ನಟಿಸಿರುವ ಬಹುನಿರೀಕ್ಷಿತ 'ಭಾರತ್ ಭಾಗ್ಯ ವಿಧಾತ' ಸಿನಿಮಾದ ಟ್ರೇಲರ್ ಬಿಡುಗಡೆಯಾಗಿದೆ. 26/11 ಮುಂಬೈ ಭೀಕರ ಭಯೋತ್ಪಾದನಾ ದಾಳಿಯ ಸಮಯದಲ್ಲಿ ತಮ್ಮ ಪ್ರಾಣವನ್ನು ಪಣಕ್ಕಿಟ್ಟು ನೂರಾರು ರೋಗಿಗಳನ್ನು ರಕ್ಷಿಸಿದ ಮುಂಬೈನ 'ಕಾಮಾ ಮತ್ತು ಅಲ್ಬೆಸ್' ಆಸ್ಪತ್ರೆಯ ಧೀರ ನರ್ಸ್‌ಗಳು ಹಾಗೂ ವೈದ್ಯಕೀಯ ಸಿಬ್ಬಂದಿಯ ನೈಜ ಶೌರ್ಯದ ಕಥೆಯನ್ನು ಈ ಸಿನಿಮಾ ಒಳಗೊಂಡಿದೆ.



ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ




# ಬಂಡೆಗೆ ಸಿಎಂ ಪಟ್ಟ

ಯು.ಟಿ. ಖಾದರ್ ಮತ್ತು ಡಾ. ಯತೀಂದ್ರ ಹೊಸದಾಗಿ ಸೇರ್ಪಡೆಗೊಂಡಿದ್ದರೂ, ಉಳಿದವರು ಈ ಹಿಂದೆ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಅವರಲ್ಲಿ ನಾಲ್ವರು ಶಾಸಕರು ಬೆಂಗಳೂರಿನವರು.ಗ್ಲಾಸ್ ಹೌಸ್‌ಅನ್ನು ಕೆಂಪು ಮತ್ತು ಹಳದಿ ಬಣ್ಣಗಳಲ್ಲಿ ಅಲಂಕರಿಸಲಾಗಿತ್ತು, ಇದು ಕರ್ನಾಟಕದ ಧ್ವಜದ ಬಣ್ಣಗಳನ್ನು ಪ್ರತಿಬಿಂಬಿಸುತ್ತದೆ. ಜ್ಯೋತಿಷಿಯ ಸಲಹೆಯಂತೆ ವೇದಿಕೆಯನ್ನು ಪೂರ್ವಕ್ಕೆ ಮುಖ ಮಾಡಿ ಇರಿಸಲಾಗಿತ್ತು, ಇದನ್ನು ಶುಭವೆಂದು ಪರಿಗಣಿಸಲಾಗಿದೆ. ವೇದಿಕೆಗೆ ಹೋಗುವ ಮೊದಲು, ಶಿವಕುಮಾರ್ ಪ್ರಮಾಣವಚನ ಸಮಾರಂಭಕ್ಕಾಗಿ ನೆರೆದಿದ್ದ ವಿವಿಧ ಧಾರ್ಮಿಕ ನಾಯಕರ ಆಶೀರ್ವಾದ ಪಡೆದರು. ಅವರಲ್ಲಿ ಕೆಲವರು ಅವರ ಮೇಲೆ ಹೂದಳಗಳನ್ನು ಸುರಿಸಿದರೆ, ಇತರರು ಆಶೀರ್ವಾದ ಮತ್ತು ಸದ್ಭಾವನೆಯ ಸಂಕೇತವಾಗಿ 'ರುದ್ರಾಕ್ಷ ಮಾಲೆ' ನೀಡಿದರು.

ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣ ಸ್ವೀಕಾರ ಮಾಡಿದ ಡಿ.ಕೆ.ಶಿವಕುಮಾರ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಶುಭಾಶಯ ತಿಳಿಸಿದ್ದಾರೆ. ತಮ್ಮ ಅಧಿಕೃತ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಳ್ಳುವ ಮೂಲಕ ಶುಭಾಶಯ ತಿಳಿಸಿದ್ದಾರೆ. ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಡಿ.ಕೆ.ಶಿವಕುಮಾರ್ ಅವರಿಗೆ ಅಭಿನಂದನೆಗಳು. ಅವರ ಅಧಿಕಾರಾವಧಿಗೆ ಶುಭಾಶಯಗಳು. ಕೇಂದ್ರವು ಕರ್ನಾಟಕ ಸರ್ಕಾರದೊಂದಿಗೆ ಜನರ ಕಲ್ಯಾಣಕ್ಕಾಗಿ ನಿಕಟವಾಗಿ ಕಾರ್ಯನಿರ್ವಹಿಸಲಿದೆ ಎಂದು ಎಕ್ಸ್ ಖಾತೆಯಲ್ಲಿ ತಿಳಿಸಿದ್ದಾರೆ. ಇನ್ನೂ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ, ರಾಜ್ಯದ ನೂತನ ಮುಖ್ಯಮಂತ್ರಿಗಳಾಗಿ ಪ್ರಮಾಣ ವಚನ ಸ್ವೀಕರಿಸಿರುವ ಡಿ.ಕೆ. ಶಿವಕುಮಾರ್ ಅವರಿಗೆ ಅಭಿನಂದನೆಗಳು. ತಮಗೆ ದೊರೆತಿರುವ ಈ ಅವಕಾಶವನ್ನ ಜನಪರ ಕೆಲಸಗಳಿಗೆ ಹಾಗೂ ಕರ್ನಾಟಕದ ಅಭಿವೃದ್ಧಿಗೆ ಉಪಯೋಗ ಮಾಡಿಕೊಳ್ಳಿ ಎಂದು ಆಶಿಸುತ್ತೇನೆ ಎಂದು ಎಕ್ಸ್‌ನಲ್ಲಿ ತಿಳಿಸಿದ್ದಾರೆ.ತಳಮಟ್ಟದ ಹೋರಾಟದಿಂದ ಪಕ್ಷವನ್ನು ಕಟ್ಟಿ ಬೆಳೆಸಿದ ಕನಕಪುರ ಬಂಡೆ ಡಿ.ಕೆ. ಶಿವಕುಮಾರ್ ಅವರು ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಅಧಿಕಾರದ ಚುಕ್ಕಾಣಿ ಹಿಡಿದಿದ್ದಾರೆ. ಇಂದು ಲೋಕಭವನದ ಗಾಜಿನ ಮನೆಯಲ್ಲಿ ನಡೆದ ಪ್ರಮಾಣವಚನ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಡಿಕೆ ಶಿವಕುಮಾರ್ ಅವರಿಗೆ ಪ್ರಮಾಣವಚನ ಬೋಧಿಸಿದರು. ಸಂವಿಧಾನ ಪುಸ್ತಕ ಹಿಡಿದ ಡಿಕೆ ಶಿವಕುಮಾರ್ ಅವರು ವೀರ ಗಂಗಾಧರ ಅಜ್ಜನ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಬೆಂಗಳೂರು: ಅರವತ್ತನಾಲ್ಕು ವರ್ಷದ ದೊಡ್ಡಲಹಳ್ಳಿ ಕೆಂಪೇಗೌಡ ಶಿವಕುಮಾರ್ (ಡಿಕೆ ಶಿವಕುಮಾರ್) ಬುಧವಾರ ಕರ್ನಾಟಕದ 18 ನೇ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಎಂಟು ಬಾರಿ ಶಾಸಕರಾಗಿರುವ ಅವರು, ಇತರ 13 ಹಿರಿಯ ಶಾಸಕರೊಂದಿಗೆ, ಕರ್ನಾಟಕದ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಏತನ್ಮಧ್ಯೆ, ಹಿರಿಯ ಕಾಂಗ್ರೆಸ್ ನಾಯಕ ಜಿ ಪರಮೇಶ್ವರ ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ನೂರಾರು ಜನರ ಸಮ್ಮುಖದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು.

ಶಿವಕುಮಾರ್ ವೀರ ಗಂಗಾಧರ ಅಜ್ಜಯ್ಯ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಪ್ರಮಾಣ ವಚನ ಸ್ವೀಕರಿಸುವ ಮೊದಲು, ಅವರು ನೆರದಿದ್ದವರಿಗೆ ನಮಸ್ಕರಿಸಿ ಅಜ್ಜಯ್ಯ ಅವರಿಗೆ ಪುಷ್ಪ ನಮನ ಸಲ್ಲಿಸಿದರು. ಭಾರತೀಯ ಸಂವಿಧಾನದ ಪ್ರತಿಯನ್ನು ಹಿಡಿದುಕೊಂಡು, ಶಿವಕುಮಾರ್ ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಹಿರಿಯ ಶಾಸಕರಾದ ಕೆ.ಎಚ್. ಮುನಿಯಪ್ಪ, ಕೆ.ಜೆ. ಜಾರ್ಜ್, ಎಂ.ಬಿ. ಪಾಟೀಲ್, ರಾಮಲಿಂಗ ರೆಡ್ಡಿ, ಸತೀಶ್ ಜಾರಕಿಹೊಳಿ, ಕೃಷ್ಣ ಬೈರೇಗೌಡ, ಪ್ರಿಯಾಂಕ್ ಖರ್ಗೆ, ಯು.ಟಿ. ಖಾದರ್, ಈಶ್ವರ್ ಖಂಡ್ರೆ, ಡಾ. ಯತೀಂದ್ರ ಸಿದ್ದರಾಮಯ್ಯ, ಬೈರತಿ ಸುರೇಶ್ ಮತ್ತು ಶರಣ್ ಪ್ರಕಾಶ್ ಪಾಟೀಲ್ ಕೂಡ ಪ್ರಮಾಣ ವಚನ ಸ್ವೀಕರಿಸಿದರು.

ಯು.ಟಿ. ಖಾದರ್ ಮತ್ತು ಡಾ. ಯತೀಂದ್ರ ಹೊಸದಾಗಿ ಸೇರ್ಪಡೆಗೊಂಡಿದ್ದರೂ, ಉಳಿದವರು ಈ ಹಿಂದೆ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಅವರಲ್ಲಿ ನಾಲ್ವರು ಶಾಸಕರು ಬೆಂಗಳೂರಿನವರು.

ಗ್ಲಾಸ್ ಹೌಸ್‌ಅನ್ನು ಕೆಂಪು ಮತ್ತು ಹಳದಿ ಬಣ್ಣಗಳಲ್ಲಿ ಅಲಂಕರಿಸಲಾಗಿತ್ತು, ಇದು ಕರ್ನಾಟಕದ ಧ್ವಜದ ಬಣ್ಣಗಳನ್ನು ಪ್ರತಿಬಿಂಬಿಸುತ್ತದೆ. ಜ್ಯೋತಿಷಿಯ ಸಲಹೆಯಂತೆ ವೇದಿಕೆಯನ್ನು ಪೂರ್ವಕ್ಕೆ ಮುಖ ಮಾಡಿ ಇರಿಸಲಾಗಿತ್ತು, ಇದನ್ನು ಶುಭವೆಂದು ಪರಿಗಣಿಸಲಾಗಿದೆ.



ವೇದಿಕೆಗೆ ಹೋಗುವ ಮೊದಲು, ಶಿವಕುಮಾರ್ ಪ್ರಮಾಣವಚನ ಸಮಾರಂಭಕ್ಕಾಗಿ ನೆರೆದಿದ್ದ ವಿವಿಧ ಧಾರ್ಮಿಕ ನಾಯಕರ ಆಶೀರ್ವಾದ ಪಡೆದರು. ಅವರಲ್ಲಿ ಕೆಲವರು ಅವರ ಮೇಲೆ ಹೂದಳಗಳನ್ನು ಸುರಿಸಿದರೆ, ಇತರರು ಆಶೀರ್ವಾದ ಮತ್ತು ಸದ್ಭಾವನೆಯ ಸಂಕೇತವಾಗಿ 'ರುದ್ರಾಕ್ಷ ಮಾಲೆ' ನೀಡಿದರು.

ಶಿವಕುಮಾರ್ ಅವರು ಕಂದು ಬಣ್ಣದ ರೇಷ್ಮೆ ಜುಬ್ಬಾ ಮತ್ತು ಕಾಂಗ್ರೆಸ್ ಪಕ್ಷದ ತ್ರಿವರ್ಣ ಧ್ವಜವನ್ನು ಹೊಂದಿರುವ ಶಾಲು ಧರಿಸಿದ್ದರು. ಪ್ರಮಾಣ ವಚನ ಸ್ವೀಕರಿಸುವ ಮೊದಲು ಶಿವಕುಮಾರ್ ಗಣ್ಯರನ್ನು ಸ್ವಾಗತಿಸಿದರು.

ಶಿವಕುಮಾರ್ ಅವರ ಪತ್ನಿ ಉಷಾ, ಮಗಳು ಐಶ್ವರ್ಯ ಡಿಕೆಎಸ್ ಹೆಗ್ಡೆ ಮತ್ತು ಇತರ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ನಿರ್ಗಮಿತ ಸಿಎಂ ಸಿದ್ದರಾಮಯ್ಯ, ಮಾಜಿ ಸಿಎಂ ವೀರಪ್ಪ ಮೊಯ್ಲಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಕರ್ನಾಟಕ ಉಸ್ತುವಾರಿ) ರಣದೀಪ್ ಸಿಂಗ್ ಸುರ್ಜೇವಾಲಾ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಮತ್ತು ರಾಜ್ಯಸಭಾ ಸದಸ್ಯ ಕೆ.ಸಿ. ವೇಣುಗೋಪಾಲ್, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಕೇರಳ ಸಿಎಂ ವಿ.ಡಿ. ಸತೀಶನ್, ಹಿಮಾಚಲ ಪ್ರದೇಶ ಸಿಎಂ ಸುಖವಿಂದರ್ ಸಿಂಗ್ ಸುಖು ಮತ್ತು ಇತರರು ಸಮಾರಂಭದಲ್ಲಿ ಭಾಗವಹಿಸಿದ್ದರು.

ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸಿದ್ದ ಗಣ್ಯರಲ್ಲಿ ಕರ್ನಾಟಕದ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು, ಇನ್ಫೋಸಿಸ್ ಸಹ-ಸಂಸ್ಥಾಪಕ ನಾರಾಯಣ ಮೂರ್ತಿ ಮತ್ತು ಅವರ ಪತ್ನಿ ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ; ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ನಿರ್ಮಲಾನಂದನಾಥ ಸ್ವಾಮಿ, ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ ಅಧ್ಯಕ್ಷ ವೆಂಕಟೇಶ್ ಪ್ರಸಾದ್, ಮಾಜಿ ಭಾರತೀಯ ಕ್ರಿಕೆಟಿಗರಾದ ಮೊಹಮ್ಮದ್ ಅಜರುದ್ದೀನ್, ಅನಿಲ್ ಕುಂಬ್ಳೆ, ಖ್ಯಾತ ನಟ ಧನಂಜಯ, ಸಂಗೀತ ನಿರ್ದೇಶಕರಾದ ಅರ್ಜುನ್ ಜನ್ಯ ಮತ್ತು ಗುರುಕಿರಣ್ ಮತ್ತು ನಟಿ-ರಾಜಕಾರಣಿ ರಮ್ಯಾ ಸೇರಿದ್ದಾರೆ.

## 13 ಶಾಸಕರು ಸಚಿವರಾಗಿ ಪ್ರಮಾಣ

ಬೆಂಗಳೂರು: ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ ಶಿವಕುಮಾರ್ ಅವರಿಂದು ಪ್ರಮಾಣ ವಚನ ಸ್ವೀಕರಿಸಿದರು. ಇದರೊಂದಿಗೆ 13 ಶಾಸಕರು (ಓರ್ವ ಎಂ.ಎಲ್‌ಸಿ ಸೇರಿ) ನೂತನ ಸಚಿವರಾಗಿ ಪ್ರಮಾಣ ವಚನ ಸ್ವೀಕಾರ ಮಾಡಿದರು.

ಲೋಕಭವನದ ಗಾಜಿನ ಮನೆಯಲ್ಲಿ ನಡೆದ ಸಮಾರಂಭದಲ್ಲಿ 13 ಶಾಸಕರು ಸಚಿವರಾಗಿ ಪ್ರಮಾಣ ಸ್ವೀಕಾರ ಮಾಡಿದರು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಪ್ರಮಾಣವಚನ ಬೋಧಿಸಿದರು.

ಜಿ. ಪರಮೇಶ್ವರ್ ರಾಜ್ಯದ ಡಿಸಿಎಂ ಆಗಿ ಡಾ. ಬಿ.ಆರ್ ಅಂಬೇಡ್ಕರ್ ಹೆಸರಿನಲ್ಲಿ ಪ್ರಮಾಣ ಸ್ವೀಕರಿಸಿದರು.

ಸಂಪುಟ ದರ್ಜೆ ಸಚಿವರಾಗಿ ಕೆ.ಹೆಚ್ ಮುನಿಯಪ್ಪ, ಕೆ.ಜೆ ಜಾರ್ಜ್, ಬೈರತಿ ಸುರೇಶ್, ಶರಣಪ್ರಕಾಶ್ ಪಾಟೀಲ್ ದೇವರ ಹೆಸರಿನಲ್ಲಿ ಪ್ರಮಾಣ ಸ್ವೀಕರಿಸಿದ್ರೆ, ಎಂ.ಬಿ ಪಾಟೀಲ್ ಅವರು ವಿಶ್ವಗುರು ಬಸವಣ್ಣ, ಬಸವಾದಿ ಶರಣರು, ಲಿಂಗೈಕ್ಯ ಸಿದ್ದೇಶ್ವರ ಮಹಾಸ್ವಾಮಿಗಳ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕಾರ ಮಾಡಿದ್ರು.

ಇನ್ನುಳಿದಂತೆ ರಾಮಲಿಂಗಾ ರೆಡ್ಡಿ, ಸತೀಶ್ ಜಾರಕಿಹೊಳಿ, ಕೃಷ್ಣಭೈರೇಗೌಡ, ಪ್ರಿಯಾಂಕ್ ಖರ್ಗೆ, ಯು.ಟಿ ಖಾದರ್, ಈಶ್ವರ್ ಖಂಡ್ರೆ, ಡಾ.ಯತೀಂದ್ರ ಸಿದ್ದರಾಮಯ್ಯ ಅವರು ಶ್ರದ್ಧಾ ಪೂರ್ವಕವಾಗಿ ಪ್ರತಿಜ್ಞೆ ಸ್ವೀಕರಿಸಿದರು. ಶೀಘ್ರದಲ್ಲೇ ಎಲ್ಲಾ ಸಂಪುಟ ಸಚಿವರಿಗೆ ಖಾತೆ ನಿಗದಿ ಮಾಡಲಾಗುತ್ತದೆ.

ವೇದಿಕೆಗೆ ಹೋಗುವ ಮೊದಲು, ಶಿವಕುಮಾರ್ ಪ್ರಮಾಣವಚನ ಸಮಾರಂಭಕ್ಕಾಗಿ ನೆರೆದಿದ್ದ ವಿವಿಧ ಧಾರ್ಮಿಕ ನಾಯಕರ ಆಶೀರ್ವಾದ ಪಡೆದರು.









# ವರುಣನ ಆರ್ಭಟ: ಯೆಲ್ಲೋ ಅಲರ್ಟ್ ಘೋಷಣೆ

ಬೆಂಗಳೂರು: ಕರ್ನಾಟಕದಾದ್ಯಂತ ಮುಂದಿನ ಕೆಲವು ದಿನಗಳ ಕಾಲ ವರುಣನ ಅಬ್ಬರ ಜೋರಾಗಲಿದ್ದು, ಪ್ರಮುಖ ಜಿಲ್ಲೆಗಳಿಗೆ ಭಾರತೀಯ ಹವಾಮಾನ ಇಲಾಖೆ ಭಾರಿ ಮಳೆಯ ಮುನ್ನೆಚ್ಚರಿಕೆ ನೀಡಿದೆ. ರಾಜ್ಯದ ವಿವಿಧ ಭಾಗಗಳಲ್ಲಿ ಗುಡುಗು, ಮಿಂಚು ಹಾಗೂ ಬಿರುಗಾಳಿ ಸಹಿತ ಭಾರಿ ಮಳೆಯಾಗುವ ಸಾಧ್ಯತೆ ಇರುವುದರಿಂದ ಪ್ರಮುಖ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ದಕ್ಷಿಣ ಕನ್ನಡ, ಉಡುಪಿ, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ಚಾಮರಾಜನಗರ, ಹಾಸನ, ಕೊಡಗು, ಮೈಸೂರು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆಯಿದ್ದು, ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಒಂದೆರಡು



ಕಡೆಗಳಲ್ಲಿ ಭಾರಿ ಮಳೆ ಹಾಗೂ ಗುಡುಗು ಸಹಿತ ಸಿಡಿಲು ಸಂಭವಿಸುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಈ ಭಾಗಗಳಲ್ಲಿ ಕಟ್ಟೆಚ್ಚರ ವಹಿಸಲು ಸೂಚಿಸಲಾಗಿದೆ. ಇನ್ನು ಉತ್ತರ ಕನ್ನಡ ಜಿಲ್ಲೆಯ ಬಹುತೇಕ ಭಾಗಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಹೀಗಾಗಿ ಮೀನುಗಾರರು ಸಮುದ್ರಕ್ಕಿಳಿಯದಂತೆ ಸೂಚಿಸಲಾಗಿದೆ. ಉತ್ತರ ಒಳನಾಡಿನ ಜಿಲ್ಲೆಗಳಾದ ಧಾರವಾಡ, ಗದಗ, ಹಾವೇರಿ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಗಂಟೆಗೆ 40 ರಿಂದ 50 ಕಿಲೋಮೀಟರ್ ವೇಗದಲ್ಲಿ ಬೀಸಲಿರುವ ಬಲವಾದ ಬಿರುಗಾಳಿಯೊಂದಿಗೆ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಉಳಿದಂತೆ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ವಿಜಯಾಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ಹಲವೆಡೆ ಬಿರುಗಾಳಿ ಸಹಿತ ಹಗುರದಿಂದ ಸಾಧಾರಣ ಮಳೆಯಾಗುವ ಮುನ್ಸೂಚನೆ ಇದೆ.

ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಭಾರಿ ಮಳೆ ಹಾಗೂ ಗುಡುಗು ಸಹಿತ ಸಿಡಿಲು ಸಂಭವಿಸುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಈ ಭಾಗಗಳಲ್ಲಿ ಕಟ್ಟೆಚ್ಚರ ವಹಿಸಲು ಸೂಚಿಸಲಾಗಿದೆ. ಇನ್ನು ಉತ್ತರ ಕನ್ನಡ ಜಿಲ್ಲೆಯ ಬಹುತೇಕ ಭಾಗಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಹೀಗಾಗಿ ಮೀನುಗಾರರು ಸಮುದ್ರಕ್ಕಿಳಿಯದಂತೆ ಸೂಚಿಸಲಾಗಿದೆ.

ದಕ್ಷಿಣ ಒಳನಾಡಿನ ಪ್ರಮುಖ ಜಿಲ್ಲೆಗಳಾದ ಕೊಡಗು, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಗುಡುಗು, ಸಿಡಿಲು ಹಾಗೂ ಗಂಟೆಗೆ 30 ರಿಂದ 40 ಕಿಲೋಮೀಟರ್ ವೇಗದ ಬಿರುಗಾಳಿಯೊಂದಿಗೆ ಭಾರಿ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಇಲ್ಲಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬಳ್ಳಾರಿ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಮಂಡ್ಯ, ಕೋಲಾರ, ರಾಮನಗರ, ಶಿವಮೊಗ್ಗ, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳ ಹಲವು ಪ್ರದೇಶಗಳಲ್ಲಿ ಗಾಳಿ ಸಹಿತ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಯೆಲ್ಲೋ ಅಲರ್ಟ್ ಘೋಷಿಸಲಾಗಿರುವ ಜಿಲ್ಲೆಗಳ ಸಾರ್ವಜನಿಕರು ಹಾಗೂ ರೈತರು ಗುಡುಗು-ಸಿಡಿಲಿನ ಸಂದರ್ಭದಲ್ಲಿ ಸುರಕ್ಷಿತ ಸ್ಥಳಗಳಲ್ಲಿ ಆಶ್ರಯ ಪಡೆಯಬೇಕು ಮತ್ತು ಮರದ ಕೆಳಗೆ ನಿಲ್ಲುವುದನ್ನು ತಪ್ಪಿಸಬೇಕು ಎಂದು ಸೂಚಿಸಲಾಗಿದೆ.

ಭಾರತ ಸಾರಥಿ
04/06/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ‘ಜನನ ಮರಣ ನೋಂದಣಿಯನ್ನು ಶೇಕಡ ನೂರರಷ್ಟು ಸಾಧಿಸಿ’

ರಾಮನಗರ

ಜಿಲ್ಲೆಯಲ್ಲಿ ಜನನ – ಮರಣ ನೋಂದಣಿಯನ್ನು ಶೇ. 100ರಷ್ಟು ಸಾಧಿಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಸೂಚಿಸಿದರು.

ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನನ ಮರಣ ನೋಂದಣಿ ಕುರಿತು ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾನತಾಡಿದರು.

ಜನನ, ಮರಣ ಘಟನೆಗಳನ್ನು ಘಟಿಸಿದ 21 ದಿನಗಳೊಳಗಾಗಿ ವಿಳಂಬಕ್ಕೆ ಆಸ್ಪದವಿಲ್ಲದಂತೆ ನೋಂದಾಯಿಸಿಕೊಳ್ಳಲು



ಪಟ್ಟಣ ಹಾಗೂ ಗ್ರಾಮೀಣ ಪ್ರದೇಶದ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದವರು ತಾಕೀತು ಮಾಡಿದರು.

ಜಿಲ್ಲೆಯಲ್ಲಿ 2024ರ ಸಾಲಿನಲ್ಲಿ 9,493 ಜನನ ಘಟನೆಗಳು 10,486 ಮರಣ ಘಟನೆಗಳು 2025 ಸಾಲಿನಲ್ಲಿ 10,207 ಜನನ ಘಟನೆಗಳು, 10,514 ಮರಣ ಘಟನೆಗಳು ಹಾಗೂ 2026ರ ಜನವರಿಯಿಂದ ಏಪ್ರಿಲ್ ಮಾಹೆಯವರೆಗೆ 3,153 ಜನನ ಘಟನೆಗಳು, 3,393 ಮರಣ ಘಟನೆಗಳಾಗಿವೆ ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಸುನೀಲ್ ಕುಮಾರ್ ಅವರು ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ 2025ನೇ ಸಾಲಿನಲ್ಲಿ 1,722 ಹಾಗೂ 2026 ಜನವರಿಯಿಂದ ಮಾರ್ಚ್ ವರೆಗೆ 312 ಜನನ ಘಟನೆಗಳು ತಡವಾಗಿ ನೋಂದಣಿಯಾಗಿದೆ. 2025ನೇ ಸಾಲಿನಲ್ಲಿ 3,378 ಹಾಗೂ 2026 ಜನವರಿಯಿಂದ ಮಾರ್ಚ್ ವರೆಗೂ 674 ಮರಣ ಘಟನೆಗಳು ತಡವಾಗಿ ನೋಂದಣಿ ಆಗಿವೆ. ಜನನ–ಮರಣ ಘಟನೆಗಳು ತಡವಾಗಿ ನೋಂದಣಿಯಾಗದಂತೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು, ಆರೋಗ್ಯ ಇಲಾಖೆ ಸಿಬ್ಬಂದಿ, ಗ್ರಾಮ ಲೆಕ್ಕಾಧಿಕಾರಿಗಳು, ಸಾಂಖಿಕ ನಿರೀಕ್ಷಕರು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಯವರು ಸೂಚಿಸಿದರು.

ಸರ್ಕಾರಿ ಆಸ್ಪತ್ರೆಗಳು, ಖಾಸಗಿ ಆಸ್ಪತ್ರೆಗಳ ವೈದ್ಯಾಧಿಕಾರಿಗಳು ತಮ್ಮ ಆಸ್ಪತ್ರೆಗಳಲ್ಲಿ ಘಟಿಸುವ ಜನನ, ಮರಣ ಘಟನೆಗಳನ್ನು ಕಡ್ಡಾಯವಾಗಿ ನೋಂದಾಯಿಸಿಕೊಳ್ಳಲು ಅಗತ್ಯ ಕ್ರಮವಹಿಸಬೇಕು, ಈ ಸಂದರ್ಭದಲ್ಲಿ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದಂತೆ ಎಚ್ಚರಿಕೆ ವಹಿಸಬೇಕು, ಜಿಲ್ಲೆಯ ಎಲ್ಲಾ ತಹಶೀಲ್ದಾರರು ಜನನ–ಮರಣ ಘಟನೆಗಳ ನೋಂದಣಿಯ ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ ಸಭೆಗಳನ್ನು ನಿಯಮಿತವಾಗಿ ನಡೆಸುವಂತೆ ಸೂಚಿಸಿದರು.

ಮಾಗಡಿ ತಾಲೂಕು ಯೋಜನಾಧಿಕಾರಿ ವೆಂಕಟರಾಮು, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯ ಸಹಾಯಕ ನಿರ್ದೇಶಕರಾದ ಮಹೇಶ್, ಕಾವ್ಯ, ಸಂಬಂಧಿಸಿದ ಅಧಿಕಾರಿಗಳು ಸಭೆಯಲ್ಲಿದ್ದರು.

# ಭಾರತ–ಅಮೆರಿಕ ಕೃಷಿ ಸಹಕಾರಕ್ಕೆ ಹೊಸ ಚೈತನ್ಯ

ಬೆಂಗಳೂರು

ಭಾರತ ಮತ್ತು ಅಮೆರಿಕ ನಡುವಿನ ಕೃಷಿ ಸಹಕಾರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ನಡೆದ ಮಹತ್ವದ ಸಂವಾದಕ್ಕೆ ಅಮೆರಿಕ–ಭಾರತ ವಾಣಿಜ್ಯ ಮಂಡಳಿ ಮೆಚ್ಚುಗೆ ವ್ಯಕ್ತಪಡಿಸಿದೆ. ಇಫ್ಕೋ ಅಧ್ಯಕ್ಷ ದಿಲೀಪ್ ಸಂಘಾಣಿ ಅವರ ನೇತೃತ್ವದ ನಿಯೋಗದೊಂದಿಗೆ ನಡೆದ ಸಭೆಯು ಉಭಯ ರಾಷ್ಟ್ರಗಳ ಕೃಷಿ ಕ್ಷೇತ್ರದ ಸಹಕಾರಕ್ಕೆ ಹೊಸ ಚೈತನ್ಯ ನೀಡಲಿದೆ ಎಂದು ಮಂಡಳಿ ತಿಳಿಸಿದೆ.



ಅಮೆರಿಕದ ವಾಷಿಂಗ್ಟನ್‌ನಲ್ಲಿ ನಡೆದ ಸಭೆಯಲ್ಲಿ ಕೃಷಿ ನವೋದ್ಯಮ, ಸುಸ್ಥಿರ ಕೃಷಿ ಅಭಿವೃದ್ಧಿ, ಆಹಾರ ಮತ್ತು ಪೌಷ್ಟಿಕ ಭದ್ರತೆ, ಮಣ್ಣಿನ ಆರೋಗ್ಯ ಸುಧಾರಣೆ ಹಾಗೂ ರೈತರ ಸಮೃದ್ಧಿಗೆ ಸಂಬಂಧಿಸಿದ ಹಲವು ಮಹತ್ವದ ವಿಷಯಗಳ ಕುರಿತು ವ್ಯಾಪಕ ಚರ್ಚೆಗಳು ನಡೆದವು. ಕೃಷಿ ಉತ್ಪಾದಕತೆ ಹೆಚ್ಚಿಸುವುದು, ಆಧುನಿಕ ತಂತ್ರಜ್ಞಾನಗಳ ಬಳಕೆಯನ್ನು ಉತ್ತೇಜಿಸುವುದು ಹಾಗೂ ರೈತರಿಗೆ ತಾಂತ್ರಿಕ ನೆರವು ಒದಗಿಸುವ ವಿಚಾರಗಳಿಗೂ ಆದ್ಯತೆ ನೀಡಲಾಯಿತು.

ಸಭೆಯ ಬಳಿಕ ಅಮೆರಿಕ–ಭಾರತ ವಾಣಿಜ್ಯ ಮಂಡಳಿ ತನ್ನ ಅಧಿಕೃತ ಸಾಮಾಜಿಕ ಜಾಲತಾಣಗಳಲ್ಲಿ ಈ ಸಂವಾದವನ್ನು ಭಾರತ–ಅಮೆರಿಕ ಕೃಷಿ ಸಹಕಾರವನ್ನು ಬಲಪಡಿಸುವ ಪ್ರಮುಖ ಪ್ರಯತ್ನವೆಂದು ಬಣ್ಣಿಸಿದೆ. ಎರಡೂ ರಾಷ್ಟ್ರಗಳ ನಡುವೆ ಜ್ಞಾನ, ತಂತ್ರಜ್ಞಾನ ಮತ್ತು ಉತ್ತಮ ಕೃಷಿ ಪದ್ಧತಿಗಳ ವಿನಿಮಯವು ರೈತರಿಗೆ ದೀರ್ಘಕಾಲೀನ ಲಾಭ ತರುವ ಸಾಧ್ಯತೆ ಇದೆ ಎಂದು ಮಂಡಳಿ ಅಭಿಪ್ರಾಯಪಟ್ಟಿದೆ.

ಅಮೆರಿಕದ ಪ್ರಮುಖ ವ್ಯಾಪಾರ ಮತ್ತು ಕೈಗಾರಿಕಾ ಸಂಸ್ಥೆಗಳಲ್ಲಿ ಒಂದಾದ ಮಂಡಳಿಯ ಈ ಮೆಚ್ಚುಗೆ ಭಾರತೀಯ ಸಹಕಾರ ಚಳವಳಿಗೆ ಜಾಗತಿಕ ಮಟ್ಟದಲ್ಲಿ ದೊರೆಯುತ್ತಿರುವ ಮಾನ್ಯತೆಯನ್ನು ಪ್ರತಿಬಿಂಬಿಸುತ್ತದೆ ಎಂದು ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ.

ಜೊತೆಗೆ, ಇಫ್ಕೋದ ಅಂತರರಾಷ್ಟ್ರೀಯ ಖ್ಯಾತಿ ಹಾಗೂ ಜಾಗತಿಕ ವೇದಿಕೆಗಳಲ್ಲಿ ಭಾರತೀಯ ರೈತರ ಹಿತಾಸಕ್ತಿಗಳನ್ನು ಪರಿಣಾಮಕಾರಿಯಾಗಿ ಪ್ರತಿನಿಧಿಸುತ್ತಿರುವ ದಿಲೀಪ್ ಸಂಘಾಣಿ ಅವರ ನಾಯಕತ್ವಕ್ಕೂ ಇದು ಸಾಕ್ಷಿಯಾಗಿದೆ ಎಂದು ಹೇಳಿದ್ದಾರೆ.

# ಫಿಸಿಕ್ಸ್‌ವಾಲಾ ವಿದ್ಯಾರ್ಥಿಗಳ ಜೆಇಇ ಅಡ್ವಾನ್ಸ್ಡ್ 2026 ಸಾಧನೆಗೆ ಸಂಭ್ರಮ

ಬೆಂಗಳೂರು

ಶೈಕ್ಷಣಿಕ ಸಂಸ್ಥೆಯಾದ ಫಿಸಿಕ್ಸ್‌ವಾಲಾ ತನ್ನ ವಿದ್ಯಾರ್ಥಿಗಳ ಜಾಯಿಂಟ್ ಎಂಟ್ರನ್ಸ್ ಎಗ್ಸಾಮಿನೇಶನ್ (ಜೆಇಇ) ಅಡ್ವಾನ್ಸ್ಡ್ 2026 ಪರೀಕ್ಷೆಯಲ್ಲಿನ ಅತ್ಯುತ್ತಮ ಸಾಧನೆಯನ್ನು ಸಂಭ್ರಮಿಸಿದೆ. ಬೆಂಗಳೂರಿನ ಅನುಕೃತಿ ಜೈನ್ ಮತ್ತು ನಯನಶ್ರೀ ಎ. ಸಿ. ಸೇರಿದಂತೆ ಹಲವು ವಿದ್ಯಾರ್ಥಿಗಳು ರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಸಾಧನೆ ಮಾಡಿ ಸಂಸ್ಥೆಗೆ ಕೀರ್ತಿ ತಂದಿದ್ದಾರೆ.



ಪರೀಕ್ಷೆಯನ್ನು ಆಯೋಜಿಸಿದ್ದ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಬಿಡುಗಡೆ ಮಾಡಿದ ಅಧಿಕೃತ ಮಾಹಿತಿಯ ಪ್ರಕಾರ, ಜೆಇಇ ಅಡ್ವಾನ್ಸ್ಡ್ 2026ರ ಪೇಪರ್ 1 ಮತ್ತು ಪೇಪರ್ 2 ಎರಡಕ್ಕೂ ಒಟ್ಟು 1,79,694 ಅಭ್ಯರ್ಥಿಗಳು ಹಾಜರಾಗಿದ್ದು, ಅವರಲ್ಲಿ 56,880 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ.

ಫಿಸಿಕ್ಸ್‌ವಾಲಾದ ವಿದ್ಯಾರ್ಥಿನಿ ಅನುಕೃತಿ ಜೈನ್ ಆಲ್ ಇಂಡಿಯಾ ರ್‍ಯಾಂಕ್ 4617 ಹಾಗೂ ನಯನಶ್ರೀ ಎ. ಸಿ. ಆಲ್ ಇಂಡಿಯಾ ರ್‍ಯಾಂಕ್ 4596 ಪಡೆದು ಗಮನಾರ್ಹ ಸಾಧನೆ ಮಾಡಿದ್ದಾರೆ.

ಈ ಕುರಿತು ಮಾತನಾಡಿದ ಫಿಸಿಕ್ಸ್‌ವಾಲಾದ ಸಂಸ್ಥಾಪಕ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಲಖ್ ಪಾಂಡೆ, “ಜೆಇಇ ಅಡ್ವಾನ್ಸ್ಡ್ 2026ರಲ್ಲಿ ತಮ್ಮ ಪರಿಶ್ರಮ ಮತ್ತು ದೃಢಸಂಕಲ್ಪದ ಮೂಲಕ ಯಶಸ್ಸು ಸಾಧಿಸಿದ ಪ್ರತಿಯೊಬ್ಬ ವಿದ್ಯಾರ್ಥಿಗೂ ಹೃತ್ಪೂರ್ವಕ ಅಭಿನಂದನೆಗಳು. ನಿರೀಕ್ಷಿತ ಫಲಿತಾಂಶ ಸಿಗದ ವಿದ್ಯಾರ್ಥಿಗಳು ನಿರಾಶರಾಗಬಾರದು. ಒಂದು ಪರೀಕ್ಷೆ ಮಾತ್ರ ವ್ಯಕ್ತಿಯ ಸಾಮರ್ಥ್ಯ ಅಥವಾ ಭವಿಷ್ಯವನ್ನು ನಿರ್ಧರಿಸುವುದಿಲ್ಲ. ಶಿಕ್ಷಣವು ದೀರ್ಘ ಪ್ರಯಾಣವಾಗಿದ್ದು, ಇದು ಅದರಲ್ಲಿನ ಒಂದು ಹಂತ ಮಾತ್ರ” ಎಂದು ಹೇಳಿದರು.

ಫಿಸಿಕ್ಸ್‌ವಾಲಾ ಸಂಸ್ಥೆ ಜೆಇಇ, ನೀಟ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ತರಬೇತಿ ಕೋರ್ಸ್‌ಗಳನ್ನು ಮತ್ತು ಶಾಲಾ ಪಠ್ಯಕ್ರಮಕ್ಕೆ ಸಂಬಂಧಿಸಿದ ಶೈಕ್ಷಣಿಕ ಸಹಾಯವನ್ನು ಒದಗಿಸುತ್ತಿದೆ. ಸಂಸ್ಥೆಯು ದೇಶದಾದ್ಯಂತ ಆನ್‌ಲೈನ್ ವೇದಿಕೆಗಳು, ಹೈಬ್ರಿಡ್ ಕೇಂದ್ರಗಳು ಮತ್ತು ಆಫ್‌ಲೈನ್ ಕೋಚಿಂಗ್ ಸಂಸ್ಥೆಗಳ ಮೂಲಕ ಸೇವೆಗಳನ್ನು ವಿಸ್ತರಿಸಿದೆ.

ನಗರದ ಪಿಡಬ್ಲ್ಯು ವಿದ್ಯಾಪೀಠ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ವ್ಯವಸ್ಥಿತ ಪರೀಕ್ಷಾ ತಯಾರಿ, ನಿಯಮಿತ ಮೌಲ್ಯಮಾಪನ ಮತ್ತು ಸಂದೇಹ ನಿವಾರಣಾ ಸಹಾಯವನ್ನು ನೀಡಲಾಗುತ್ತಿದ್ದು, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರಿಣಾಮಕಾರಿ ತರಬೇತಿ ಒದಗಿಸಲಾಗುತ್ತಿದೆ.

# ಕಡಲೆಕಾಯಿ ಎಣ್ಣೆಯೇ ಅತ್ಯುತ್ತಮ ಆಯ್ಕೆ ಏಕೆ?

ಬೆಂಗಳೂರು

ಭಾರತದಲ್ಲಿ ಬೇಸಿಗೆ ಕಾಲ ಬಂದರೆ ಮನೆಮನೆಗಳಲ್ಲಿ ಉಪ್ಪಿನಕಾಯಿ ತಯಾರಿಕೆ ಒಂದು ಸಂಪ್ರದಾಯದ ಹಬ್ಬದಂತೆಯೇ ನಡೆಯುತ್ತದೆ. ವಿಶೇಷವಾಗಿ ಹಸಿ ಮಾವಿನಕಾಯಿಯಿಂದ ತಯಾರಿಸುವ ಸಾಂಪ್ರದಾಯಿಕ ಆವಕಾಯ ಅಥವಾ ಮಾವಿನ ಉಪ್ಪಿನಕಾಯಿ ತನ್ನ ವಿಶಿಷ್ಟ ರುಚಿಗೆ ಹೆಸರುವಾಸಿಯಾಗಿದೆ. ಈ ರುಚಿಯ ಹಿಂದೆ ಪ್ರಮುಖ ಪಾತ್ರ ವಹಿಸುವುದು ಬಳಸುವ ಎಣ್ಣೆ ಅದರಲ್ಲಿಯೇ ಕಡಲೆಕಾಯಿ ಎಣ್ಣೆ ಅತ್ಯುತ್ತಮ ಆಯ್ಕೆಯಾಗಿ ಪರಿಗಣಿಸಲಾಗುತ್ತದೆ.

ಕಡಲೆಕಾಯಿ ಎಣ್ಣೆಯ ಪ್ರಮುಖ ವಿಶೇಷತೆ ಎಂದರೆ ಅದರ ಸೌಮ್ಯ ಮತ್ತು ನೈಸರ್ಗಿಕ ರುಚಿ. ಇದು ಮಸಾಲೆಗಳ ತೀಕ್ಷ್ಣತೆಯನ್ನು ಕಡಿಮೆ ಮಾಡದೇ, ಅವುಗಳ ನೈಸರ್ಗಿಕ ಸುವಾಸನೆ ಮತ್ತು ಹುಳಿಯನ್ನು ಇನ್ನಷ್ಟು ಎತ್ತಿ ತೋರಿಸುತ್ತದೆ. ಮಾವಿನಕಾಯಿ, ಮೆಣಸಿನಪುಡಿ, ಸಾಸಿವೆ, ಬೆಳ್ಳುಳ್ಳಿ ಮೊದಲಾದ ಪದಾರ್ಥಗಳ ಮೂಲ




ರುಚಿ ಬದಲಾಗದೇ ಉಳಿಯುವುದಕ್ಕೆ ಇದು ಸಹಾಯಕವಾಗುತ್ತದೆ.

ಇದಕ್ಕೆ ಜೊತೆಗೆ ಕಡಲೆಕಾಯಿ ಎಣ್ಣೆ ಒಂದು ನೈಸರ್ಗಿಕ ಸಂರಕ್ಷಕವಾಗಿ ಕೆಲಸ ಮಾಡುತ್ತದೆ. ಉಪ್ಪಿನಕಾಯಿ ಮಿಶ್ರಣವನ್ನು ಗಾಳಿಯಿಂದ ರಕ್ಷಿಸಿ, ತೇವಾಂಶ ಪ್ರವೇಶವನ್ನು ತಡೆಯುವ ಮೂಲಕ ಬೂಷ್ಟು ಮತ್ತು ಹಾಳಾಗುವಿಕೆಯನ್ನು ಕಡಿಮೆ ಮಾಡುತ್ತದೆ. ಇದರಿಂದ ಉಪ್ಪಿನಕಾಯಿ ಹೆಚ್ಚು ದಿನಗಳ ಕಾಲ ಸುರಕ್ಷಿತವಾಗಿ ಉಳಿಯುತ್ತದೆ.

ಸಾಂಪ್ರದಾಯಿಕವಾಗಿ ದಕ್ಷಿಣ ಭಾರತದಲ್ಲಿವಿಶೇಷವಾಗಿ ಕರ್ನಾಟಕ, ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲಿ ಆವಕಾಯ ಉಪ್ಪಿನಕಾಯಿ ತಯಾರಿಕೆಗೆ ಕಡಲೆಕಾಯಿ ಎಣ್ಣೆಯನ್ನು ಮಾತ್ರ ಬಳಸುವ ಪದ್ಧತಿ ಇದೆ. ಅಜ್ಜಿಯಂದಿರ ಪಾಕವಿಧಾನಗಳಲ್ಲಿ ಈ ಎಣ್ಣೆ ಅವಿಭಾಜ್ಯ ಭಾಗವಾಗಿದ್ದು, ಪೀಳಿಗೆಯಿಂದ ಪೀಳಿಗೆಗೆ ಬಂದಿರುವ ರುಚಿ ಮತ್ತು ಪರಂಪರೆಯನ್ನು ಉಳಿಸಿಕೊಂಡಿದೆ.

ಉಪ್ಪಿನಕಾಯಿ ತಯಾರಿಕೆ ಕೇವಲ ಅಡುಗೆ ಮಾತ್ರವಲ್ಲ, ಅದು ಒಂದು ಕುಟುಂಬ ಸಂಪ್ರದಾಯವೂ ಹೌದು. ಮಾವಿನಕಾಯಿ ಸೀಸನ್‌ನಲ್ಲಿ ಕುಟುಂಬ ಸದಸ್ಯರೆಲ್ಲ ಸೇರಿ ಮಸಾಲೆ ತಯಾರಿಸಿ, ಉಪ್ಪಿನಕಾಯಿ ಹಾಕುವ ಪ್ರಕ್ರಿಯೆ ಹಳೆಯ ನೆನಪುಗಳನ್ನು ಮರುಕಳಿಸುವಂತೆ ಮಾಡುತ್ತದೆ. ಹೀಗಾಗಿ, ರುಚಿ, ಸಂರಕ್ಷಣೆ ಮತ್ತು ಸಂಪ್ರದಾಯ ಈ ಮೂರು ಕಾರಣಗಳಿಂದ ಕಡಲೆಕಾಯಿ ಎಣ್ಣೆ ಮಾವಿನ ಉಪ್ಪಿನಕಾಯಿಗೆ ಅತ್ಯುತ್ತಮ ಆಯ್ಕೆಯಾಗಿ ಪರಿಗಣಿಸಲಾಗುತ್ತದೆ.

# ನಾರಾಯಣ ಒಲಿಂಪಿಯಾಡ್ ಶಾಲೆಯ ವಿದ್ಯಾರ್ಥಿಗಳಿಗೆ ಸನ್ಮಾನ

ಬೆಂಗಳೂರು

ಬೆಂಗಳೂರು ಸಹಕಾರ ನಗರದಲ್ಲಿರುವ ನಾರಾಯಣ ಒಲಿಂಪಿಯಾಡ್ ಶಾಲೆಯ ವಿದ್ಯಾರ್ಥಿಗಳು ಜೆಇಇ ಅಡ್ವಾನ್ಸ್ಡ್ 2026 ಪರೀಕ್ಷೆಯಲ್ಲಿ ದಾಖಲೆಯ ಸಾಧನೆ ಮಾಡಿದ್ದು, ಕ್ಯಾಂಪಸ್‌ನಲ್ಲಿ ಅದ್ದೂರಿ ಅಭಿನಂದನಾ ಸಮಾರಂಭ ನಡೆಯಿತು. ಅಖಿಲ ಭಾರತ ಮಟ್ಟದಲ್ಲಿ ಉನ್ನತ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳು, ಅವರ ಪೋಷಕರು ಹಾಗೂ ಶಿಕ್ಷಕರನ್ನು ವೇದಿಕೆಯಲ್ಲಿ ಸನ್ಮಾನಿಸಲಾಯಿತು.

ಈ ವರ್ಷದ ಪ್ರಮುಖ ಸಾಧಕರಾಗಿ ಮನು ಪರಮೇಶ್ವರನ್ ಅಖಿಲ ಭಾರತ ಮಟ್ಟದಲ್ಲಿ 13ನೇ ರ್‍ಯಾಂಕ್ ಪಡೆದು ಕರ್ನಾಟಕ ರಾಜ್ಯ ಟಾಪರ್ ಆಗಿ ಹೊರಹೊಮ್ಮಿದ್ದಾರೆ. ಇದೇ ವೇಳೆ ಯಶ್ವಿನ್ ಕೋಟಾ ಅವರು ಎಐಆರ್ 54 ರ್‍ಯಾಂಕ್ ಪಡೆದು ಗಮನ ಸೆಳೆದಿದ್ದಾರೆ. ಮನು 360ಕ್ಕೆ 310 ಅಂಕಗಳನ್ನು ಹಾಗೂ ಯಶ್ವಿನ್ 286 ಅಂಕಗಳನ್ನು ಪಡೆದು ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಇದೇ ಕ್ಯಾಂಪಸ್‌ನಿಂದ ಟಾಪ್ 1000ರೊಳಗೆ 10 ವಿದ್ಯಾರ್ಥಿಗಳು ಹಾಗೂ ಟಾಪ್




10,000ರೊಳಗೆ 60 ವಿದ್ಯಾರ್ಥಿಗಳು ಸ್ಥಾನ ಪಡೆದಿದ್ದು, ಸಂಸ್ಥೆಯ ಶೈಕ್ಷಣಿಕ ಸಾಧನೆಗೆ ಮತ್ತಷ್ಟು ಕೀರ್ತಿ ತಂದಿದೆ.

ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಸಂಸ್ಥೆಯ ಎಕ್ಸಿಕ್ಯೂಟಿವ್ ಡೀನ್ ಬಿ.ಎನ್. ನಾಗರಾಜು ಅವರು, ಈ ವರ್ಷ ನಾರಾಯಣ ಸಂಸ್ಥೆಯು ರಾಷ್ಟ್ರಮಟ್ಟದಲ್ಲಿ ಅತ್ಯುತ್ತಮ ಫಲಿತಾಂಶ ದಾಖಲಿಸಿದೆ ಎಂದು ಹೇಳಿದರು. ಟಾಪ್ 100ರೊಳಗೆ 35 ರ್‍ಯಾಂಕ್‌ಗಳು ಹಾಗೂ 1000ರೊಳಗೆ 219 ಓಪನ್ ಕ್ಯಾಟಗರಿ ರ್‍ಯಾಂಕ್‌ಗಳು ಬಂದಿವೆ ಎಂದು ಅವರು ತಿಳಿಸಿದರು. ಕರ್ನಾಟಕದಲ್ಲಿ 30 ಶಾಲೆಗಳು ಮತ್ತು 28 ಪಿಯು ಹಾಗೂ ಸಿಬಿಎಸ್ ಕಾಲೇಜುಗಳ ಮೂಲಕ ಸುಮಾರು 50,000 ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ ಎಂದರು. 2022ರಲ್ಲಿ ಎಐಆರ್ 1 ಪಡೆದ ಆರ್. ಕೆ. ಶಿಶಿರ್ ಸಹ ಇದೇ ಸಹಕಾರ ನಗರ ಕ್ಯಾಂಪಸ್‌ನ ವಿದ್ಯಾರ್ಥಿಯಾಗಿದ್ದರು ಎಂಬುದನ್ನು ಅವರು ನೆನಪಿಸಿದರು.

ಈ ವರ್ಷವೂ ಈ ಕ್ಯಾಂಪಸ್‌ನಿಂದ ಸುಮಾರು 150 ಐಐಟಿ ಮತ್ತು ಸೀಟುಗಳು ದೊರೆಯುವ ನಿರೀಕ್ಷೆ ಇದೆ ಎಂದು ಹೇಳಿದರು. ಕ್ಯಾಂಪಸ್ ಪ್ರಾಂಶುಪಾಲ ಫಣೀಂಧರ್ ಮಾತನಾಡಿ, ಸಂಸ್ಥೆಯ ತರಬೇತಿ ಮಾದರಿ, ಮಾಕ್ ಟೆಸ್ಟ್ ವ್ಯವಸ್ಥೆ, ಶಿಕ್ಷಕರ ಮಾರ್ಗದರ್ಶನ ಮತ್ತು ವಿದ್ಯಾರ್ಥಿಗಳ ಶ್ರಮವೇ ಈ ಸಾಧನೆಗೆ ಕಾರಣ ಎಂದು ಹೇಳಿದರು. ಕಳೆದ ಎಂಟು ವರ್ಷಗಳಲ್ಲಿ ಟಾಪ್ 100 ರ್‍ಯಾಂಕ್‌ಗಳಲ್ಲಿ ಬಹುಪಾಲು ಸಾಧನೆ ಈ ಕ್ಯಾಂಪಸ್‌ನಿಂದಲೇ ಬಂದಿದೆ.

# 50ಕ್ಕೂ ಹೆಚ್ಚು ಉತ್ಪನ್ನಗಳೊಂದಿಗೆ ಭಾರತಕ್ಕೆ ಪಾದಾರ್ಪಣೆ ಮಾಡಿದ ಕಿವೋಕ್

ಬೆಂಗಳೂರು

ಜರ್ಮನ್ ಎಂಜಿನಿಯರಿಂಗ್ ನಿಖರತೆ ಮತ್ತು ಆಧುನಿಕ ವಿನ್ಯಾಸದ ಸಂಯೋಜನೆಯೊಂದಿಗೆ ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿರುವ ಕಿವೋಕ್ ಬ್ರ್ಯಾಂಡ್ ಇದೀಗ ಭಾರತೀಯ ಮಾರುಕಟ್ಟೆಗೆ ಅಧಿಕೃತವಾಗಿ ಪ್ರವೇಶಿಸಿದೆ.




ಬೆಂಗಳೂರುದಲ್ಲಿ ನಡೆದ ಅದ್ದೂರಿ ಕಾರ್ಯಕ್ರಮದಲ್ಲಿ ಕಂಪನಿಯು 50ಕ್ಕೂ ಹೆಚ್ಚು ಉತ್ಪನ್ನಗಳನ್ನು ಒಳಗೊಂಡ ವಿಶಾಲ ಪೋರ್ಟ್ಫೋಲಿಯೊವನ್ನು ಅನಾವರಣಗೊಳಿಸಿದೆ.

ತಂತ್ರಜ್ಞಾನ ಪರಿಕರಗಳ ಕ್ಷೇತ್ರದಲ್ಲಿ ಹೊಸ ಅನುಭವ ನೀಡುವ ಉದ್ದೇಶ ಹೊಂದಿರುವ ಕಿವೋಕ್, ಮ್ಯಾಗ್‌ಸೇಫ್ ಐಫೋನ್ ಕೇಸ್‌ಗಳು, ಐಪ್ಯಾಡ್ ಕವರ್‌ಗಳು, ಲ್ಯಾಪ್‌ಟಾಪ್ ಬ್ಯಾಗ್‌ಗಳು, ಯುಎಸ್‌ಬಿ–ಸಿ ಹಬ್‌ಗಳು, ವೇಗದ ಚಾರ್ಜಿಂಗ್ ಜಿಎಎನ್ ಚಾರ್ಜರ್‌ಗಳು, ವೈರ್‌ಲೆಸ್ ಚಾರ್ಜರ್‌ಗಳು ಹಾಗೂ ಮ್ಯಾಗ್ನೆಟಿಕ್ ಕಾರ್ ಮೌಂಟ್‌ಗಳವರೆಗೆ ವಿವಿಧ ವಿಭಾಗಗಳಲ್ಲಿ ಉತ್ಪನ್ನಗಳನ್ನು ಪರಿಚಯಿಸಿದೆ. ಕಂಪನಿಯ ಪ್ರಕಾರ, ಕಿವೋಕ್ ಕೇವಲ ಸಾಧನ ಪರಿಕರಗಳ ಬ್ರ್ಯಾಂಡ್ ಅಲ್ಲ; ಅದು ಜೀವನಶೈಲಿಯೊಂದಿಗಿನ ಹೊಸ ತತ್ವವನ್ನು ಪ್ರತಿನಿಧಿಸುತ್ತದೆ. ತಂತ್ರಜ್ಞಾನ ಸಾಧನಗಳನ್ನು ತಮ್ಮ ವೈಯಕ್ತಿಕ ಗುರುತಿನ ಭಾಗವಾಗಿ ನೋಡುವ ಹೊಸ ಪೀಳಿಗೆಯ ಗ್ರಾಹಕರನ್ನು ಗಮನದಲ್ಲಿಟ್ಟುಕೊಂಡು ಉತ್ಪನ್ನಗಳನ್ನು ವಿನ್ಯಾಸಗೊಳಿಸಲಾಗಿದೆ ಎಂದು ಸಂಸ್ಥೆ ತಿಳಿಸಿದೆ.

ಬಿಡುಗಡೆಗೊಂಡ ಉತ್ಪನ್ನಗಳ ಪೈಕಿ ಐಫೋನ್ 17 ಸರಣಿಗೆ ಹೊಂದುವ ಸ್ಕ್ರೀನ್ ಪ್ರೊಟೆಕ್ಟರ್‌ಗಳು ಮತ್ತು ಪ್ರೀಮಿಯಂ ಕೇಸ್‌ಗಳು, ಇತ್ತೀಚಿನ ಐಪ್ಯಾಡ್ ಮಾದರಿಗಳಿಗೆ ಫೋಲಿಯೊ ಕವರ್‌ಗಳು, 13 ಇಂಚಿನಿಂದ 15.6 ಇಂಚಿನ ಸಾಧನಗಳಿಗೆ ಹೊಂದುವ ಲ್ಯಾಪ್‌ಟಾಪ್ ಬ್ಯಾಗ್‌ಗಳು ಮತ್ತು ಸ್ಲೀವ್‌ಗಳು ಪ್ರಮುಖವಾಗಿವೆ.

# ವಿಶ್ವ ಪರಿಸರ ದಿನದಂದು ‘ನೀಲಗಿರಿ: ಹಂಚಿಕೆಯ ಕಾಡುಪ್ರದೇಶ’ ಸಾಕ್ಷ್ಯಚಿತ್ರ ಪ್ರದರ್ಶನ

ಮುಂಬೈ: ವಿಶ್ವ ಪರಿಸರ ದಿನದ ಅಂಗವಾಗಿ ನ್ಯಾಷನಲ್ ಜಿಯೋಗ್ರಾಫಿಕ್ ಇಂಡಿಯಾ ತನ್ನ ಹೊಸ ವನ್ಯಜೀವಿ ಸಾಕ್ಷ್ಯಚಿತ್ರ ‘ನೀಲಗಿರಿ: ಹಂಚಿಕೆಯ ಕಾಡುಪ್ರದೇಶ’ವನ್ನು ಪ್ರದರ್ಶಿಸುತ್ತಿದೆ. ನ್ಯಾಟ್ ಜಿಯೋ ಫೆಲೋ ಹಾಗೂ ಪ್ರಶಸ್ತಿ ವಿಜೇತ ಚಲನಚಿತ್ರ ನಿರ್ಮಾಪಕ ಸಂದೇಶ್ ಕಡೂರ್ ನಿರ್ದೇಶಿಸಿರುವ ಈ ವಿಶೇಷ ಸಾಕ್ಷ್ಯಚಿತ್ರವು ಜೂನ್ 5ರಂದು ಮಧ್ಯಾಹ್ನ 12 ಗಂಟೆ ಮತ್ತು ರಾತ್ರಿ 9 ಗಂಟೆಗೆ ನ್ಯಾಷನಲ್ ಜಿಯೋಗ್ರಾಫಿಕ್ ವಾಹಿನಿಯಲ್ಲಿ ಪ್ರಸಾರವಾಗಲಿದೆ.



ಭಾರತದ ಮೊದಲ ಯುನೆಸ್ಕೋ ಮಾನ್ಯತೆ ಪಡೆದ ಜೀವಗೋಳ ಮೀಸಲು ಪ್ರದೇಶವಾದ ನೀಲಗಿರಿ ಜೀವಗೋಳ ಮೀಸಲು ಪ್ರದೇಶದ ಹಿನ್ನೆಲೆಯಲ್ಲೇ ಈ ಚಿತ್ರ ನಿರ್ಮಾಣವಾಗಿದೆ. ಪ್ರಕೃತಿ, ಮಾನವ ಜೀವನ ಮತ್ತು ವನ್ಯಜೀವಿಗಳ ನಡುವಿನ ಅಪರೂಪದ ಸಹಬಾಳ್ವೆಯನ್ನು ಚಿತ್ರವು ಸಂವೇದನಾತ್ಮಕವಾಗಿ ಅನಾವರಣಗೊಳಿಸುತ್ತದೆ.

ಸಾಮಾನ್ಯವಾಗಿ ಮಾನವ ಅಭಿವೃದ್ಧಿ ಮತ್ತು ಕಾಡುಪ್ರಕೃತಿಯನ್ನು ಪರಸ್ಪರ ವಿರುದ್ಧ ಶಕ್ತಿಗಳಂತೆ ಚಿತ್ರಿಸಲಾಗುತ್ತದೆ. ಆದರೆ ‘ನೀಲಗಿರಿ: ಹಂಚಿಕೆಯ ಕಾಡುಪ್ರದೇಶ’ ಸಾಕ್ಷ್ಯಚಿತ್ರವು ಶತಮಾನಗಳಿಂದ ನೀಲಿ ಪರ್ವತಗಳಲ್ಲಿ ರೂಪುಗೊಂಡಿರುವ ಮಾನವ ಮತ್ತು ಪ್ರಕೃತಿಯ ಸಹಜ ಸಂಬಂಧವನ್ನು ಅನ್ವೇಷಿಸುತ್ತದೆ.

ಪ್ರಾಚೀನ ಶೋಲಾ ಕಾಡುಗಳು, ವಿಸ್ತಾರವಾದ ಚಹಾ ತೋಟಗಳು, ಪರ್ವತ ರೈಲು ಮಾರ್ಗಗಳು ಮತ್ತು ವನ್ಯಜೀವಿ ಕಾರಿಡಾರ್‌ಗಳ ಪಕ್ಕದಲ್ಲಿರುವ ಪಟ್ಟಣಗಳ ಮೂಲಕ ಸಾಗುವ ದೃಶ್ಯಗಳು, ಪ್ರಕೃತಿ ಮತ್ತು ಮಾನವ ಜೀವನ ಹೇಗೆ ಪರಸ್ಪರ ಬೆಸೆದುಕೊಂಡಿವೆ ಎಂಬುದನ್ನು ಜೀವಂತವಾಗಿ ತೋರಿಸುತ್ತವೆ.

ಚಿತ್ರದಲ್ಲಿ ಕಾಣಿಸಿಕೊಳ್ಳುವ ಅಸ್ಪಷ್ಟ ಹಾಗೂ ಅಪರೂಪದ ಜೀವಜಾತಿಗಳು ತಮ್ಮ ಆವಾಸಸ್ಥಾನಗಳ ಕುಗ್ಗುವಿಕೆಯ ನಡುವೆಯೂ ಹೇಗೆ ಹೊಂದಿಕೊಳ್ಳುತ್ತಿವೆ ಮತ್ತು ಬದುಕುಳಿಯುತ್ತಿವೆ ಎಂಬುದನ್ನು ಮನಮುಟ್ಟುವ ರೀತಿಯಲ್ಲಿ ಚಿತ್ರಿಸಲಾಗಿದೆ.

ಸುಶೀಲಾ ರಾಮನ್, ಸ್ಯಾಮ್ ಮಿಲ್ಸ್ ಮತ್ತು ನೀಲ್ ಅಧಿಕಾರಿ ಸಂಯೋಜಿಸಿರುವ ಹಿನ್ನೆಲೆ ಸಂಗೀತ ಚಿತ್ರಕ್ಕೆ ಮತ್ತಷ್ಟು ಭಾವನಾತ್ಮಕ ಆಳತೆಯನ್ನು ನೀಡಿದ್ದು, ಪ್ರಕೃತಿಯ ಶಾಂತಿ ಮತ್ತು ಪರಿಸರದ ತುರ್ತುತೆಯನ್ನು ಒಂದೇ ವೇಳೆ ಅನುಭವಿಸುವಂತೆ ಮಾಡುತ್ತದೆ.

# ‘ದೇಶಕ್ಕೆ 12ನೇ ರ್‍ಯಾಂಕ್, ಕರ್ನಾಟಕದ ಟಾಪರ್ ಆಗಿ ಹೊರಹೊಮ್ಮಿದ ಎಲೆನ್ ಬೆಂಗಳೂರಿನ ಆರ್ಯನ್ ರಘುಪತಿ’

ಬೆಂಗಳೂರು

ಭಾರತೀಯ ತಂತ್ರಜ್ಞಾನ ಸಂಸ್ಥೆ ರೂರ್ಕಿ ಪ್ರಕಟಿಸಿರುವ ಜೆಇಇ ಅಡ್ವಾನ್ಸ್ಡ್ 2026ರ ಫಲಿತಾಂಶದಲ್ಲಿ ಎಲೆನ್ ಬೆಂಗಳೂರು ಸಂಸ್ಥೆಯ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿದ್ದು, ಆರ್ಯನ್ ರಘುಪತಿ ಅವರು ಅಖಿಲ ಭಾರತ ಮಟ್ಟದಲ್ಲಿ 12ನೇ ರ್‍ಯಾಂಕ್ ಗಳಿಸುವ ಮೂಲಕ ಕರ್ನಾಟಕ ರಾಜ್ಯದ ಟಾಪರ್ ಆಗಿ ಹೊರಹೊಮ್ಮಿದ್ದಾರೆ.

ಫಲಿತಾಂಶ ಪ್ರಕಟವಾಗುತ್ತಿದ್ದಂತೆಯೇ ಎಲೆನ್ ಬೆಂಗಳೂರು ಕೇಂದ್ರದಲ್ಲಿ ಸಂಭ್ರಮಾಚರಣೆ ನಡೆಯಿತು. ಶಿಕ್ಷಕರು ಸಾಧನೆ ಮಾಡಿದ ವಿದ್ಯಾರ್ಥಿಗಳು ಹಾಗೂ ಅವರ ಪೋಷಕರಿಗೆ ಸಿಹಿ ಹಂಚಿ ಅಭಿನಂದನೆ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಎಲೆನ್ ದಕ್ಷಿಣ ವಲಯದ ಮುಖ್ಯಸ್ಥ ಮಹೇಶ್ ಯಾದವ್, “ಅತ್ಯುತ್ತಮ ಫಲಿತಾಂಶಗಳನ್ನು ನೀಡುವ ಪರಂಪರೆಯನ್ನು ಎಲೆನ್ ಸಂಸ್ಥೆ ನಿರಂತರವಾಗಿ ಮುಂದುವರಿಸಿಕೊಂಡು ಬಂದಿದೆ. ಈ ವರ್ಷವೂ ನಮ್ಮ ವಿದ್ಯಾರ್ಥಿಗಳು ಅದ್ಭುತ ಸಾಧನೆ ಮಾಡಿದ್ದಾರೆ.




ಆರ್ಯನ್ ರಘುಪತಿ ಅವರು ಜೆಇಇ ಅಡ್ವಾನ್ಸ್ಡ್ 2026ರಲ್ಲಿ ಅಖಿಲ ಭಾರತ ಮಟ್ಟದಲ್ಲಿ 12ನೇ ರ್‍ಯಾಂಕ್ ಗಳಿಸಿ ಕರ್ನಾಟಕದ ಟಾಪರ್ ಆಗಿರುವುದು ನಮಗೆ ಹೆಮ್ಮೆಯ ವಿಷಯವಾಗಿದೆ. ಈ ಯಶಸ್ಸು ವಿದ್ಯಾರ್ಥಿಗಳು ಮತ್ತು ಪೋಷಕರು ನಮ್ಮ ಮೇಲೆ ಇಟ್ಟಿರುವ ವಿಶ್ವಾಸಕ್ಕೆ ಸಾಕ್ಷಿಯಾಗಿದೆ” ಎಂದು ಹೇಳಿದರು.

ಅವರು ಮುಂದುವರಿದು, “ಎಲೆನ್ ಬೆಂಗಳೂರಿನ 37 ವಿದ್ಯಾರ್ಥಿಗಳು ಅಖಿಲ ಭಾರತ ರ್‍ಯಾಂಕ್ ಪಟ್ಟಿಯಲ್ಲಿ ಮೊದಲ 100ರಿಂದ 1000ರೊಳಗೆ ಸ್ಥಾನ ಪಡೆದಿದ್ದಾರೆ.

ಇದು ಸಂಸ್ಥೆಯ ಗುಣಮಟ್ಟದ ತರಬೇತಿ ಮತ್ತು ವಿದ್ಯಾರ್ಥಿಗಳ ಪರಿಶ್ರಮದ ಪ್ರತಿಫಲವಾಗಿದೆ” ಎಂದು ತಿಳಿಸಿದರು.

ಜೆಇಇ ಅಡ್ವಾನ್ಸ್ಡ್ 2026ರ ರಾಷ್ಟ್ರೀಯ ಫಲಿತಾಂಶದಲ್ಲಿಯೂ ಕೋಟಾದ ಎಲೆನ್ ಕೆರಿಯರ್ ಇನ್‌ಸ್ಟಿಟ್ಯೂಟ್ ಐತಿಹಾಸಿಕ ಸಾಧನೆ ಮಾಡಿದೆ. ಸತತ ಮೂರನೇ ವರ್ಷ ಅಖಿಲ ಭಾರತ ಪ್ರಥಮ ರ್‍ಯಾಂಕ್ ಗಳಿಸುವ ಮೂಲಕ ಹೊಸ ದಾಖಲೆ ನಿರ್ಮಿಸಿದೆ.

ಈ ಸಾಧನೆಯೊಂದಿಗೆ ಎಲೆನ್ ಸಂಸ್ಥೆಯು ಐಐಟಿ–ಜೆಇಇ ಪರೀಕ್ಷೆಯಲ್ಲಿ ಒಟ್ಟು ಏಳು ಬಾರಿ ದೇಶದ ಮೊದಲ ರ್‍ಯಾಂಕ್ ಪಡೆದ ಹೆಗ್ಗಳಿಕೆಗೆ ಪಾತ್ರವಾಗಿದೆ. ಇದಲ್ಲದೆ, ಸಂಸ್ಥೆಯ ಇತಿಹಾಸದಲ್ಲೇ ಎರಡನೇ ಬಾರಿಗೆ ಜೆಇಇ ಅಡ್ವಾನ್ಸ್ಡ್ ಪರೀಕ್ಷೆಯ ಮೊದಲ ಮೂರು ಅಖಿಲ ಭಾರತ ರ್‍ಯಾಂಕ್‌ಗಳನ್ನು ಒಂದೇ ಸಂಸ್ಥೆಯ ವಿದ್ಯಾರ್ಥಿಗಳು ಪಡೆಯುವ ಮೂಲಕ ಗಮನ ಸೆಳೆದಿದೆ. ಈ ಹಿಂದೆ 2016ರಲ್ಲಿಯೂ ಎಲೆನ್ ಇದೇ ಸಾಧನೆ ಮಾಡಿತ್ತು.

## ಮುಖ್ಯಮಂತ್ರಿಯಾಗಿ ಆಯ್ಕೆಯಾದ ಡಿ.ಕೆ. ಶಿವಕುಮಾರ್ ಅವರಿಗೆ ಡಾ.ಭಾರ್ಗವ್ ಮಲ್ಲಪ್ಪ ಅಭಿನಂದನೆ

ನವದೆಹಲಿ/ ಬೆಂಗಳೂರು

ಅಖಿಲ ಸೇವಕ್ ಸಮಾಜ್ ಕೌನ್ಸಿಲ್ ಅಧ್ಯಕ್ಷ ಡಾ. ಭಾರ್ಗವ್ ಮಲ್ಲಪ್ಪ ಅವರು ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಕರ್ನಾಟಕದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಕರ್ನಾಟಕ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಮತ್ತು ರಾಜ್ಯದ ಮುಂದಿನ ಮುಖ್ಯಮಂತ್ರಿಯಾಗಿ ಆಯ್ಕೆಯಾಗಿರುವುದಕ್ಕೆ ಹೃದಯಪೂರ್ವಕ ಅಭಿನಂದನೆ ಸಲ್ಲಿಸಿದ್ದಾರೆ. ಡಿ.ಕೆ. ಶಿವಕುಮಾರ್ ಅವರನ್ನು ಈ ಉನ್ನತ ಹುದ್ದೆಗೆ ಆಯ್ಕೆ ಮಾಡಿರುವುದು ಅವರ ನಾಯಕತ್ವ ಕೌಶಲ್ಯ, ಸಂಘಟನಾ ಶಕ್ತಿ ಮತ್ತು ಸಾರ್ವಜನಿಕ ಸೇವೆಗೆ ಹೊಂದಿರುವ ದೀರ್ಘಕಾಲದ ಬದ್ಧತೆಯ ಪ್ರತೀಕವಾಗಿದೆ ಎಂದು ಅವರು ತಿಳಿಸಿದ್ದಾರೆ. ಶಿವಕುಮಾರ್ ಅವರ ನಾಯಕತ್ವದಲ್ಲಿ ಕರ್ನಾಟಕವು ಎಲ್ಲರನ್ನು ಒಳಗೊಂಡ ಪ್ರಗತಿ, ಸಾಮಾಜಿಕ ಕಲ್ಯಾಣ ಮತ್ತು ಆರ್ಥಿಕ ಅಭಿವೃದ್ಧಿಯ ದಿಕ್ಕಿನಲ್ಲಿ ಮತ್ತಷ್ಟು ಮುನ್ನಡೆಯಲಿದೆ ಎಂಬ ವಿಶ್ವಾಸವನ್ನೂ ವ್ಯಕ್ತಪಡಿಸಿದ್ದಾರೆ.



ಕಾಂಗ್ರೆಸ್ ಪಕ್ಷದ ಬೇರುಮಟ್ಟದ ಸಂಘಟನಾ ಕಾರ್ಯಗಳಲ್ಲಿ ತಮ್ಮದೇ ಸಹಯೋಗವನ್ನು ನೆನಪಿಸಿಕೊಂಡ ಡಾ. ಮಲ್ಲಪ್ಪ ಅವರು, ಡಿ.ಕೆ. ಶಿವಕುಮಾರ್ ಅವರ ರಾಜಕೀಯ ಪಯಣವನ್ನು ಸಮೀಪದಿಂದ ಕಂಡಿರುವುದಾಗಿ ಹೇಳಿದರು.

# ಏಜೆಂಟ್‌ಫೋರ್ಸ್ ಧ್ವನಿ ವಿಸ್ತರಣೆ

ಬೆಂಗಳೂರು

ಸೇಲ್ಸ್‌ಫೋರ್ಸ್ ತನ್ನ ಏಜೆಂಟ್‌ಫೋರ್ಸ್ ವಾಯ್ಸ್ ಅನ್ನು ಹಿಂದಿ ಭಾಷಾ ಬೆಂಬಲದೊಂದಿಗೆ ವಿಸ್ತರಿಸಿರುವುದಾಗಿ ಘೋಷಿಸಿದೆ. ಈ ಹೆಜ್ಜೆಯಿಂದ ಏಜೆಂಟಿಕ್ ಎಂಟರ್‌ಪ್ರೈಸ್‌ಗಳು ಹೆಚ್ಚು ಸ್ವಾಭಾವಿಕ, ಬಹುಭಾಷಾ ಹಾಗೂ ಒಳಗೊಂಡಿರುವ ಗ್ರಾಹಕ ಅನುಭವಗಳನ್ನು ದೊಡ್ಡ ಮಟ್ಟದಲ್ಲಿ ಒದಗಿಸಲು ಸಾಧ್ಯವಾಗುತ್ತದೆ.

ಕೃತಕ ಬುದ್ಧಿಮತ್ತೆ ಆಧಾರಿತ ಸಿಆರ್‌ಎಂ ಕ್ಷೇತ್ರದಲ್ಲಿ ಜಾಗತಿಕ ಮುಂಚೂಣಿಯಲ್ಲಿರುವ ಸೇಲ್ಸ್‌ಫೋರ್ಸ್, ಭಾರತದ ವೈವಿಧ್ಯಮಯ ಮತ್ತು ಬಹುಭಾಷಾ ಪರಿಸರಕ್ಕೆ ಅನುಗುಣವಾಗಿ ಏಜೆಂಟ್‌ಫೋರ್ಸ್ ತಂತ್ರಜ್ಞಾನವನ್ನು ಇನ್ನಷ್ಟು ಸುಲಭವಾಗಿ ಬಳಸಲು ಈ ಹೊಸ ವೈಶಿಷ್ಟ್ಯವನ್ನು ಪರಿಚಯಿಸಿದೆ. ಹಿಂದಿ ಭಾಷಾ ಬೆಂಬಲದ ಮೂಲಕ, ಭಾರತದ ಅತಿ ಹೆಚ್ಚು ಮಾತನಾಡಲಾಗುವ ಭಾಷೆಗಳಲ್ಲಿ ಒಂದಾದ ಹಿಂದಿಯಲ್ಲಿ ವ್ಯವಹಾರಗಳು ಗ್ರಾಹಕರೊಂದಿಗೆ ಉತ್ತಮವಾಗಿ ಸಂಪರ್ಕ ಸಾಧಿಸಬಹುದು. ಜೊತೆಗೆ, ನಿರ್ದಿಷ್ಟ ನಿಯಂತ್ರಣ ವ್ಯವಸ್ಥೆಗಳ ಮೂಲಕ ಕೃತಕ ಬುದ್ಧಿಮತ್ತೆ ಏಜೆಂಟ್‌ಗಳ ಕ್ರಿಯೆಗಳ ಮೇಲೆ ಸಂಸ್ಥೆಗಳಿಗೆ ಹೆಚ್ಚಿನ ನಿಯಂತ್ರಣ ದೊರೆಯುತ್ತದೆ.

ಸಾಂಪ್ರದಾಯಿಕ ಧ್ವನಿ ಸೇವಾ ವ್ಯವಸ್ಥೆಗಳು ನಿಗದಿತ ನಿರ್ಧಾರ ಮರಗಳ ಮೇಲೆ ಅವಲಂಬಿತವಾಗಿದ್ದರೆ, ಹಿಂದಿಯಲ್ಲಿನ ಏಜೆಂಟ್‌ಫೋರ್ಸ್ ವಾಯ್ಸ್ ಸ್ವಾಯತ್ತ ಬುದ್ಧಿಮತ್ತೆಯತ್ತ ಪ್ರಮುಖ ಬದಲಾವಣೆಯನ್ನು ತೋರಿಸುತ್ತದೆ. ಸೇಲ್ಸ್‌ಫೋರ್ಸ್‌ನ ವಿಶ್ವಾಸಾರ್ಹ ವೇದಿಕೆಯ ಮೇಲೆ ನಿರ್ಮಿಸಲಾದ ಈ ವ್ಯವಸ್ಥೆ, ಸಂವಾದಾತ್ಮಕ ಕೃತಕ ಬುದ್ಧಿಮತ್ತೆ, ಸಂಸ್ಥೆಯ ದತ್ತಾಂಶ ಮತ್ತು ವ್ಯವಹಾರ ಕಾರ್ಯಪ್ರವಾಹಗಳನ್ನು ಒಂದೇ ವೇದಿಕೆಯಲ್ಲಿ ಸೇರಿಸುತ್ತದೆ.

ಇದು ಸಂಸ್ಥೆಗಳಿಗೆ ಸರಳ ಧ್ವನಿ ಸಹಾಯದಿಂದ ಮುಂದೆ ಹೋಗಿ, ಕ್ರಿಯೆ ಆಧಾರಿತ ಬುದ್ಧಿವಂತ ಗ್ರಾಹಕ ಸಂವಹನವನ್ನು ಸಾಧ್ಯವಾಗಿಸುತ್ತದೆ. ಇದರಲ್ಲಿ ಒಳಗೊಂಡಿರುವ ನಿಯಂತ್ರಣ ವ್ಯವಸ್ಥೆಗಳು ಮತ್ತು ನಿರ್ದಿಷ್ಟ ಕ್ರಿಯೆಗಳ ಮೂಲಕ, ಕೃತಕ ಬುದ್ಧಿಮತ್ತೆ ಏಜೆಂಟ್‌ಗಳು ಹೇಗೆ ಕಾರ್ಯನಿರ್ವಹಿಸಬೇಕು, ಯಾವಾಗ ಕ್ರಮ ಕೈಗೊಳ್ಳಬೇಕು ಮತ್ತು ಯಾವ ಸಂದರ್ಭದಲ್ಲಿ ಮಾನವ ಮೇಲ್ವಿಚಾರಣೆ ಅಗತ್ಯವಿದೆ ಎಂಬುದನ್ನು ವ್ಯವಹಾರಗಳು ನಿರ್ಧರಿಸಬಹುದು.

## ಜನ ಹೋರಾಟಕ್ಕೆ ಸಂದ ಜಯ




ಕನಕಪುರ

ತಾಲೂಕಿನ ಉಯ್ಯಂಬಳ್ಳಿ ಹೋಬಳಿಯಲ್ಲಿ ಸರ್ಕಾರಿ ಶಾಲೆ ಮುಚ್ಚುವ ವಿಚಾರಕ್ಕೆ ವಿರೋಧವಾಗಿ ನಡೆದ ಜನ ಹೋರಾಟಕ್ಕೆ ಅಂತಿಮವಾಗಿ ಜಯ ಸಿಕ್ಕಿದೆ. ಗ್ರಾಮಸ್ಥರು, ಪೋಷಕರು ಮತ್ತು ವಿದ್ಯಾರ್ಥಿಗಳ ಒಗ್ಗಟ್ಟಿನ ಪ್ರತಿಭಟನೆಗೆ ಸ್ಪಂದಿಸಿದ ಶಿಕ್ಷಣ ಇಲಾಖೆ, ಉಯ್ಯಂಬಳ್ಳಿ ಹೋಬಳಿ ಮಟ್ಟದ ಗ್ರಾಮ ಪಂಚಾಯಿತಿ ಸರ್ಕಾರಿ ಶಾಲೆಯನ್ನು ಯಾವುದೇ ಕಾರಣಕ್ಕೂ ಮುಚ್ಚುವುದಿಲ್ಲ ಎಂದು ಭರವಸೆ ನೀಡಿದೆ.

ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತಿಗೌಡ ಅವರು ಸ್ಪಷ್ಟವಾಗಿ ಹೇಳಿರುವಂತೆ, ಒಂದೇ ಒಂದು ಮಗು ಇದ್ದರೂ ಶಾಲೆ ಮುಂದುವರಿಯಲಿದೆ. ಈ ಹೇಳಿಕೆ ಗ್ರಾಮಸ್ಥರಲ್ಲಿ ಸಂತೋಷ ಮೂಡಿಸಿದ್ದು, ಹೋರಾಟಕ್ಕೆ ಸಾರ್ಥಕತೆ ದೊರೆತಿದೆ.

ಉಯ್ಯಂಬಳ್ಳಿ ಸುತ್ತಮುತ್ತಲಿನ ಹಳ್ಳಿಗಳ ನಿವಾಸಿಗಳು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿ, ಏಕಖ ಮ್ಯಾಗ್ನೆಟ್ ಯೋಜನೆಯಡಿ ಶಾಲೆಗಳ ವಿಲೀನಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿದರು. ಹಳ್ಳಿಗಳಲ್ಲಿರುವ ಸರ್ಕಾರಿ ಶಾಲೆಗಳನ್ನು ದೂರದ ಹೆಗ್ಗನೂರು ಮ್ಯಾಗ್ನೆಟ್ ಶಾಲೆಗೆ ವಿಲೀನಗೊಳಿಸುವುದರಿಂದ ಮಕ್ಕಳ ಸುರಕ್ಷತೆ ಹಾಗೂ ಶಿಕ್ಷಣದ ಹಕ್ಕಿಗೆ ಧಕ್ಕೆಯಾಗುತ್ತದೆ ಎಂದು ಅವರು ವಾದಿಸಿದರು.

ಹೆಗ್ಗನೂರು ಪ್ರದೇಶವು ಕಾಡು ಮತ್ತು ಆನೆ ಸಂಚಾರ ಮಾರ್ಗವಾಗಿರುವುದರಿಂದ, ಅಲ್ಲಿ ಮಕ್ಕಳನ್ನು ಕಳುಹಿಸುವುದು ಅಪಾಯಕರ ಎಂದು ಪೋಷಕರು ಆತಂಕ ವ್ಯಕ್ತಪಡಿಸಿದರು. ಉಯ್ಯಂಬಳ್ಳಿಯ ಶಾಲೆಯಲ್ಲಿ ಉತ್ತಮ ಮೂಲಸೌಕರ್ಯ, ಶೌಚಾಲಯ, ಕುಡಿಯುವ ನೀರು ಸೇರಿದಂತೆ ಎಲ್ಲಾ ಸೌಲಭ್ಯಗಳಿದ್ದು, 150ಕ್ಕೂ ಹೆಚ್ಚು ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ ಎಂಬುದನ್ನೂ ಅವರು ಉಲ್ಲೇಖಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಸ್ಥಳದಲ್ಲಿರದ ಕಾರಣ ಗ್ರಾಮಸ್ಥರು ಕಚೇರಿ ಮುಂದೆ ಕೂತು ಕಾಯುವ ಮೂಲಕ ತಮ್ಮ ಸಂಕಲ್ಪವನ್ನು ತೋರಿಸಿದರು. ನಂತರ ದೂರವಾಣಿ ಮೂಲಕ ನಡೆದ ಮಾತುಕತೆಯಲ್ಲಿ ಅಧಿಕಾರಿಗಳು ಶಾಲೆ ಮುಚ್ಚುವುದಿಲ್ಲ ಎಂಬ ಭರವಸೆ ನೀಡಿದರು.

ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ನೇತೃತ್ವದಲ್ಲಿ ನಡೆದ ಈ ಹೋರಾಟಕ್ಕೆ ವಿವಿಧ ಹಳ್ಳಿಗಳ ಜನರು ಬೆಂಬಲ ಸೂಚಿಸಿದರು. ಸರ್ಕಾರದ ಮ್ಯಾಗ್ನೆಟ್ ಯೋಜನೆಯಿಂದ ಗ್ರಾಮೀಣ ಸರ್ಕಾರಿ ಶಾಲೆಗಳು ಹಾನಿಗೊಳಗಾಗಬಾರದು ಎಂದು ಹೋರಾಟಗಾರರು ಒತ್ತಾಯಿಸಿದರು.

### ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿ ಖಂಡಿಸಿ

## ಕನ್ನಡ ಪಕ್ಷ ಪ್ರತಿಭಟನೆ



ದೊಡ್ಡಬಳ್ಳಾಪುರ

ಕೇಂದ್ರ ಸರ್ಕಾರದ ಜನವಿರೋಧಿ ಬೆಲೆ ಏರಿಕೆ ನೀತಿಯನ್ನು ಖಂಡಿಸಿ ಕನ್ನಡ ಪಕ್ಷದ ದೊಡ್ಡಬಳ್ಳಾಪುರ ತಾಲ್ಲೂಕು ಘಟಕದ ವತಿಯಿಂದ ಮಂಗಳವಾರ ತಾಲ್ಲೂಕು ದಂಡಾಧಿಕಾರಿಗಳ ಕಚೇರಿ ಮುಂಭಾಗ ಸಾಂಕೇತಿಕ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಮಾತನಾಡಿದ ಕನ್ನಡ ಪಕ್ಷದ ರಾಜ್ಯ ಉಪಾಧ್ಯಕ್ಷ ಸಂಜೀವ್ ನಾಯಕ್, ಸರ್ಕಾರಿ ಸ್ವಾಮ್ಯದ ತೈಲ ಮಾರಾಟ ಕಂಪನಿಗಳು ಕಳೆದ ತಿಂಗಳಲ್ಲಿ ನಾಲ್ಕು ಬಾರಿ ಪೆಟ್ರೋಲ್ ಹಾಗೂ ಡೀಸೆಲ್ ದರವನ್ನು ಏರಿಕೆ ಮಾಡಿವೆ ಎಂದು ಆರೋಪಿಸಿದರು. ಕೇವಲ 11 ದಿನಗಳ ಅವಧಿಯಲ್ಲಿ ನಾಲ್ಕು ಬಾರಿ ದರ ಹೆಚ್ಚಳವಾಗಿರುವುದರಿಂದ ಜನಸಾಮಾನ್ಯರ ಜೀವನದ ಮೇಲೆ ಭಾರೀ ಹೊರೆ ಬಿದ್ದಿದೆ ಎಂದು ಹೇಳಿದರು.

ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಇಳಿಕೆಯಾಗಿದ್ದರೂ ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರಗಳನ್ನು ಕಡಿಮೆ ಮಾಡದಿರುವುದು ಕೇಂದ್ರ ಸರ್ಕಾರದ ಜನವಿರೋಧಿ ಧೋರಣೆಯನ್ನು ತೋರಿಸುತ್ತದೆ ಎಂದು ಅವರು ಟೀಕಿಸಿದರು. ಬೆಲೆ ಏರಿಕೆಯಿಂದ ಬಡವರು, ರೈತರು, ಕೂಲಿ ಕಾರ್ಮಿಕರು, ನೇಕಾರರು, ಶ್ರಮಿಕರು ಹಾಗೂ ಮಧ್ಯಮ ವರ್ಗದ ಜನರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅಧಿಕಾರಕ್ಕೆ ಬರುವ ಮೊದಲು ಇಂಧನ ದರ ಏರಿಕೆಯನ್ನು ತೀವ್ರವಾಗಿ ವಿರೋಧಿಸುತ್ತಿದ್ದ ಬಿಜೆಪಿ, ಇಂದು ಅದೇ ವಿಷಯದಲ್ಲಿ ಮೌನ ವಹಿಸಿರುವುದು ಜನರಿಗೆ ನಿರಾಸೆ ತಂದಿದೆ ಎಂದು ಸಂಜೀವ್ ನಾಯಕ್ ಆರೋಪಿಸಿದರು. ಕೇಂದ್ರ ಸರ್ಕಾರ ತಕ್ಷಣವೇ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಇಳಿಸಿ ಜನರ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

ಕನ್ನಡ ಪಕ್ಷದ ರಾಜ್ಯ ಕಾರ್ಯದರ್ಶಿ ಡಿ.ಪಿ. ಆಂಜನೇಯ ಮಾತನಾಡಿ, ಕಳೆದ ಹಲವು ವರ್ಷಗಳಿಂದ ಅಧಿಕಾರದಲ್ಲಿರುವ ಕೇಂದ್ರ ಸರ್ಕಾರ ಜನಸಾಮಾನ್ಯರ ಸಮಸ್ಯೆಗಳ ಬಗ್ಗೆ ನಿರ್ಲಕ್ಷ್ಯ ವಹಿಸಿದೆ ಎಂದು ಆರೋಪಿಸಿದರು. ಅಂತಾರಾಷ್ಟ್ರೀಯ ಮಟ್ಟದಲ್ಲಿ ತೈಲ ದರಗಳು ಕಡಿಮೆಯಾಗುತ್ತಿದ್ದರೂ ದೇಶದಲ್ಲಿ ಮಾತ್ರ ಬೆಲೆ ಏರಿಕೆಯಾಗುತ್ತಿರುವುದು ಖಂಡನೀಯ ಎಂದು ಹೇಳಿದರು.

ರಾಜ್ಯ ಬಿಜೆಪಿ ನಾಯಕರು ಬೆಲೆ ಏರಿಕೆ ಕುರಿತು ಮೌನ ವಹಿಸಿರುವುದು ಹಾಗೂ ಕೆಲವರು ಅದನ್ನು ಸಮರ್ಥಿಸುವ ಹೇಳಿಕೆಗಳನ್ನು ನೀಡುತ್ತಿರುವುದು ಜನವಿರೋಧಿ ನಡೆ ಎಂದು ಅವರು ಟೀಕಿಸಿದರು. ಕೇಂದ್ರ ಸರ್ಕಾರ ಬೆಲೆ ಏರಿಕೆ ನಿಯಂತ್ರಿಸಲು ಕ್ರಮ ಕೈಗೊಳ್ಳದಿದ್ದರೆ ರಾಜ್ಯದಾದ್ಯಂತ ಜನಪರ ಸಂಘಟನೆಗಳನ್ನು ಒಗ್ಗೂಡಿಸಿ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ತಾಲೂಕು ಕನ್ನಡ ಅಧ್ಯಕ್ಷ ವೆಂಕಟೇಶ್, ಜಿಲ್ಲಾಧ್ಯಕ್ಷ ಮುನಿಪಾಪಯ್ಯ, ಮುಖಂಡರಾದ ಆರ್. ರಂಗನಾಥ್, ಎಂ.ಜಿ. ಬೋರೇಗೌಡ, ವಿ. ಪರಮೇಶ್, ಜಿ. ಸುರೇಶ್, ಕೆ.ಎನ್. ಕುಮಾರ್, ನರಸಿಂಹಮೂರ್ತಿ, ಮಂಜುನಾಥ್, ಶ್ರೀನಿವಾಸ್, ರಾಜಣ್ಣ, ರಾಮಚಂದ್ರ, ಮಹೇಶ್, ಬಾಬಾ, ಶಿವರಾಜ್ ಸೇನಾ ಸಮಿತಿಯ ಮುಖಂಡ ರಮೇಶ್, ತಾಲೂಕು ರೈತ ಸಂಘದ ಅಧ್ಯಕ್ಷ ಹನುಮೇಗೌಡ, ಶಿರವಾರ ರವಿ ಸೇರಿದಂತೆ ಹಲವರು ಭಾಗವಹಿಸಿದ್ದರು.

# ತೂಬಗೆರೆ ಸರ್ಕಾರಿ ಶಾಲೆಯ ಹಳೆಯ ವಿದ್ಯಾರ್ಥಿಗಳಿಂದ ಗುರುವಂದನಾ ಕಾರ್ಯಕ್ರಮ



ದೊಡ್ಡಬಳ್ಳಾಪುರ

ತಾಲೂಕಿನ ತೂಬಗೆರೆ ಸರ್ಕಾರಿ ಪ್ರಾಥಮಿಕ ಹಿರಿಯ ಪಾಠಶಾಲೆ ಹಾಗೂ ಸರ್ಕಾರಿ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿಗಳಿಂದ ಭಾವನಾತ್ಮಕ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು.

2005–06 ಹಾಗೂ 2007–08ನೇ ಸಾಲಿನ ವಿದ್ಯಾರ್ಥಿಗಳು ಅನೇಕ ವರ್ಷಗಳ ಬಳಿಕ ಒಂದೇ ವೇದಿಕೆಯಲ್ಲಿ ಒಂದಾಗಿ, ತಮ್ಮನ್ನು ರೂಪಿಸಿದ ಗುರುಗಳನ್ನು ಮೆರವಣಿಗೆ ಮೂಲಕ ಸ್ವಾಗತಿಸಿ ಗೌರವ ಸಲ್ಲಿಸಿದರು. ಕಾರ್ಯಕ್ರಮವು ಭಾವುಕ ಕ್ಷಣಗಳಿಗೆ ಸಾಕ್ಷಿಯಾಯಿತು.

ಗುರುವಂದನಾ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಮುಖ್ಯಶಿಕ್ಷಕ ಮುನಿಕೃಷ್ಣ, ವಿದ್ಯಾರ್ಥಿ ಜೀವನದ ಸ್ಮರಣೀಯ ಕ್ಷಣಗಳನ್ನು ನೆನಪಿಸಿಕೊಂಡು, ಹಲವು ವರ್ಷಗಳ ಬಳಿಕ ಹಳೆಯ ವಿದ್ಯಾರ್ಥಿಗಳು ಒಂದಾಗಿ ಗುರುಗಳಿಗೆ ಗೌರವ ಸಲ್ಲಿಸುವುದು ಶ್ಲಾಘನೀಯ ಎಂದು ಹೇಳಿದರು.

ನಂತರ ಮಾತನಾಡಿದ ಹಳೆಯ ವಿದ್ಯಾರ್ಥಿ ವಿಕಾಸ್, “ಗುರು ಮತ್ತು ವಿದ್ಯಾರ್ಥಿಗಳ ನಡುವಿನ ಬಾಂಧವ್ಯ ಅತ್ಯಂತ ಪವಿತ್ರ. ತಂದೆ–ತಾಯಿ ನಂತರ ಗುರುಗಳ ಸ್ಥಾನ ಅತ್ಯುನ್ನತ. ಗುರುಗಳು ನಿಸ್ವಾರ್ಥ ಭಾವನೆಯಿಂದ ವಿದ್ಯಾರ್ಥಿಗಳನ್ನು ಸರಿ ದಾರಿಗೆ ನಡೆಸುತ್ತಾರೆ.

ಅದರಿಂದಲೇ ನಾವು ಜೀವನದಲ್ಲಿ ಸಾಧನೆ ಮಾಡಲು ಸಾಧ್ಯವಾಗಿದೆ” ಎಂದು ಅಭಿಪ್ರಾಯಪಟ್ಟರು. ಸುಮಾರು 230ಕ್ಕೂ ಹೆಚ್ಚು ಹಳೆಯ ವಿದ್ಯಾರ್ಥಿಗಳು ಹಾಗೂ 25 ಶಿಕ್ಷಕರು ಈ ಸಮ್ಮಿಲನದಲ್ಲಿ ಭಾಗವಹಿಸಿದ್ದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ನಿವೃತ್ತ ಮುಖ್ಯ ಶಿಕ್ಷಕರಾದ ನಾರಾಯಣಪ್ಪ, ಪಿಳ್ಳಪ್ಪ, ಬಸವರಾಜು, ಹನುಮಂತರಾಯಪ್ಪ, ರಂಗೇಗೌಡ, ಉಷಾ, ನಿರ್ಮಲ, ಈಶ್ವರಯ್ಯ, ಡಾ. ಮುನಿರಾಜು, ರಾಜೇಶ್, ಚಂದ್ರಶೇಖರ್ ಯು.ಜಿ., ಚಿದಾನಂದ ಶಾಸ್ತ್ರಿ, ಲೈಬ್ರರಿ ಮಂಜಣ್ಣ, ದೈಹಿಕ ಶಿಕ್ಷಕ ವಿಶ್ವನಾಥ ಗೌಡರು ಹಾಗೂ ಪ್ರಕಾಶ್ ಸೇರಿದಂತೆ ಅನೇಕ ಶಿಕ್ಷಕರನ್ನು ಹಳೆಯ ವಿದ್ಯಾರ್ಥಿಗಳು ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ 2005–06 ಹಾಗೂ 2007–08ನೇ ಸಾಲಿನ ಎಲ್ಲಾ ಹಳೆಯ ವಿದ್ಯಾರ್ಥಿಗಳು, ಗ್ರಾಮಸ್ಥರು, ಪೋಷಕರು ಮತ್ತು ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರುಗು ತಂದರು.

### ಶ್ರೀನಿವಾಸಪುರ: ರೈತರ ಭೂಮಿ ಕಬಳಿಕೆ ವಿರೋಧಿಸಿ

# ವಿಧಾನಸೌಧ ಮುತ್ತಿಗೆಗೆ ಕರೆ

ಶ್ರೀನಿವಾಸಪುರ



ಪಟ್ಟಣದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆಯ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ರೈತ ಮುಖಂಡರು ರಾಜ್ಯ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿ, ಫಲವತ್ತಾದ ಕೃಷಿಭೂಮಿಯನ್ನು ಕೈಗಾರಿಕೆ ಹೆಸರಿನಲ್ಲಿ ಕಸಿದುಕೊಳ್ಳುವ ಕ್ರಮವನ್ನು ಖಂಡಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ವೀರಭದ್ರಸ್ವಾಮಿ ಮಾತನಾಡಿ, ರೈತರ ಭೂಮಿಯನ್ನು ಕಬಳಿಸುವುದನ್ನು ತಡೆಯಲು ಈಗಾಗಲೇ ಅನೇಕ ಪ್ರತಿಭಟನೆಗಳು, ಅಹೋರಾತ್ರಿ ಧರಣಿಗಳು ನಡೆದರೂ ಸರ್ಕಾರ ಸ್ಪಂದಿಸಿಲ್ಲ ಎಂದು ಆರೋಪಿಸಿದರು. ಈ ಹಿನ್ನೆಲೆಯಲ್ಲಿ ಶುಕ್ರವಾರ ವಿಧಾನಸೌಧಕ್ಕೆ ಮುತ್ತಿಗೆ ಹಾಕುವ ಉದ್ದೇಶದಿಂದ ಭಾರಿ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಹೋಬಳಿ ವ್ಯಾಪ್ತಿಯ ಸುಮಾರು 13 ಹಳ್ಳಿಗಳಲ್ಲಿ 2823 ಎಕರೆ ಫಲವತ್ತಾದ ಭೂಮಿಯನ್ನು ಕೈಗಾರಿಕಾ ಉದ್ದೇಶಕ್ಕೆ ಸರ್ಕಾರ ಕಸಿದುಕೊಳ್ಳಲು ಯತ್ನಿಸುತ್ತಿದೆ ಎಂದು ಅವರು ಹೇಳಿದರು. ಈಗಾಗಲೇ ಪಡೆದಿರುವ ಭೂಮಿಯಲ್ಲಿಯೂ ಕೇವಲ 25% ಮಾತ್ರ ಬಳಕೆಯಾಗಿದ್ದು, ಉಳಿದ ಭೂಮಿ ನಿರುಪಯೋಗವಾಗಿರುವುದು ಸರ್ಕಾರದ ಉದ್ದೇಶಗಳ ಬಗ್ಗೆ ಅನುಮಾನ ಹುಟ್ಟಿಸಿದೆ ಎಂದು ಹೇಳಿದರು.

ಈ ಹಿನ್ನಲೆಯಲ್ಲಿ, ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಅವರ ನೇತೃತ್ವದಲ್ಲಿ ಕೋಲಾರ ಜಿಲ್ಲೆಯ ಆರು ತಾಲೂಕುಗಳಿಂದ ರೈತರು ಬೈಕ್ ರ್‍ಯಾಲಿ ನಡೆಸಲಿದ್ದಾರೆ. ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಭೂಮಿಯನ್ನು ರಕ್ಷಿಸಲು ಒಗ್ಗಟ್ಟಾಗಿ ಹೋರಾಟ ನಡೆಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಯಲವಕುಂಟೆ ಬೈರಾರೆಡ್ಡಿ, ತಾಲೂಕು ಅಧ್ಯಕ್ಷ ಮಾಸ್ತೇನಹಳ್ಳಿ ನಾರಾಯಣಸ್ವಾಮಿ, ವೀರಪ್ಪರೆಡ್ಡಿ, ಅಸ್ಲಾಂ ಪಾಷಾ, ದೇವರಾಜಗೌಡ, ನಾರಾಯಣರೆಡ್ಡಿ, ಸಿ.ವಿ. ಮೋಹನ್, ರೆಡ್ಡೆಪ್ಪ ರಾಜಣ್ಣ, ವೆಂಕರವಣಪ್ಪ, ಶ್ರೀಧರ್ ಹಾಗೂ ಶ್ರೀನಿವಾಸರೆಡ್ಡಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

## ಯಾದವ ಯುವ ವೇದಿಕೆಗೆ ನೂತನ ಪದಾಧಿಕಾರಿಗಳ ನೇಮಕ



ದೊಡ್ಡಬಳ್ಳಾಪುರ

ದೇವನಹಳ್ಳಿಯಲ್ಲಿರುವ ಕರ್ನಾಟಕ ಯಾದವ ಯುವ ವೇದಿಕೆಯ ಕೇಂದ್ರ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ದೊಡ್ಡಬಳ್ಳಾಪುರ ತಾಲೂಕು ಘಟಕದ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಿ ಆದೇಶ ಪತ್ರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಸಾಸಲು ಹೋಬಳಿಯ ಕರೆಕಲ್ಲಹಳ್ಳಿ ಗ್ರಾಮದ ಮನೀಶ್ ಯಾದವ್ ಎಂ ಅವರನ್ನು ತಾಲೂಕು ಅಧ್ಯಕ್ಷರಾಗಿ, ರಾಕೇಶ್ ಎನ್. ಅವರನ್ನು ತಾಲೂಕು ಪ್ರಧಾನ ಕಾರ್ಯದರ್ಶಿಯಾಗಿ, ಶಶಿಕುಮಾರ್ ಎಂ ಅವರನ್ನು ತಾಲೂಕು ಉಪಾಧ್ಯಕ್ಷರಾಗಿ ಹಾಗೂ ಗೋಪಾಲ್ ಆರ್. ಅವರನ್ನು ತಾಲೂಕು ಸಂಘಟನಾ ಕಾರ್ಯದರ್ಶಿಯಾಗಿ ಆಯ್ಕೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕ ಯಾದವ ಯುವ ವೇದಿಕೆಯ ರಾಜ್ಯಾಧ್ಯಕ್ಷ ಸುನಿಲ್ ಯಾದವ್ ಕೆ.ಸಿ., ಕಳೆದ 12 ವರ್ಷಗಳಿಂದ ವೇದಿಕೆ ಯಾದವ ಸಮುದಾಯದ ಸಂಘಟನೆ ಮತ್ತು ಸೇವಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದು, ಯುವಕರನ್ನು ಸಾಮಾಜಿಕ ಹಾಗೂ ರಾಜಕೀಯವಾಗಿ ಸಬಲಗೊಳಿಸುವ ಉದ್ದೇಶದೊಂದಿಗೆ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು. ಹಿಂದುಳಿದ ವರ್ಗಗಳ ಜನರಿಗೆ ಸರ್ಕಾರದ ಸೌಲಭ್ಯಗಳು ಪರಿಣಾಮಕಾರಿಯಾಗಿ ತಲುಪುವಂತೆ ಸೇವಾ ಕಾರ್ಯಗಳನ್ನು ಕೈಗೊಳ್ಳಬೇಕಿದ್ದು, ದೊಡ್ಡಬಳ್ಳಾಪುರದ ಹಿರಿಯರು ಹಾಗೂ ಯುವಕರನ್ನು ಒಗ್ಗೂಡಿಸಿ ಸಮುದಾಯದ ಯುವಶಕ್ತಿಯನ್ನು ಸಂಘಟಿಸುವಂತೆ ನೂತನ ಪದಾಧಿಕಾರಿಗಳಿಗೆ ಕರೆ ನೀಡಿದರು.

ಕರ್ನಾಟಕ ಯಾದವ ಯುವ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಸುಧಾಕರ್ ಯಾದವ್ ಮಾತನಾಡಿ, ದೊಡ್ಡಬಳ್ಳಾಪುರದ ಯಾದವ ಸಮುದಾಯವು ಪ್ರೀತಿ, ವಿಶ್ವಾಸ ಮತ್ತು ಸಾಮಾಜಿಕ ಬಾಂಧವ್ಯಕ್ಕೆ ಹೆಸರುವಾಸಿಯಾಗಿದೆ. ಸಮುದಾಯದ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಉನ್ನತ ಸ್ಥಾನಮಾನಗಳನ್ನು ಅಲಂಕರಿಸಬೇಕು. ಸಮುದಾಯದ ಸರ್ವಾಂಗೀಣ ಅಭಿವೃದ್ಧಿಗೆ ವೇದಿಕೆ ಸದಾ ಬೆಂಬಲವಾಗಿ ನಿಲ್ಲಲಿದೆ ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ರಾಜ್ಯ ಕಾರ್ಯಾಧ್ಯಕ್ಷ ಅನಿಲ್ ಯಾದವ್, ರಾಜ್ಯ ಉಪಾಧ್ಯಕ್ಷರಾದ ಉಮೇಶ್ ಯಾದವ್ ಹಾಗೂ ಮಂಜುನಾಥ್ ಯಾದವ್, ಚಿಕ್ಕಬಳ್ಳಾಪುರ ಯಾದವ ಸಂಘದ ಅಧ್ಯಕ್ಷ ಮೋಹನ್ ಕುಮಾರ್ ಸೇರಿದಂತೆ ಅನೇಕ ಮುಖಂಡರು ಹಾಗೂ ಸದಸ್ಯರು ಉಪಸ್ಥಿತರಿದ್ದು, ನೂತನ ಪದಾಧಿಕಾರಿಗಳಿಗೆ ಶುಭಾಶಯಗಳನ್ನು ಕೋರಿದರು.

### ಕುಣಿಗಲ್: ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ

## ತಾಲೂಕಿಗೆ ಅಭಿವೃದ್ಧಿಯ ಭರವಸೆ



ಕುಣಿಗಲ್

ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡರು ರಾಜ್ಯದ ರಾಜಕೀಯ ಬೆಳವಣಿಗೆ ಕುರಿತು ವಿಶ್ವಾಸ ವ್ಯಕ್ತಪಡಿಸಿ, ಮುಂದಿನ ದಿನಗಳಲ್ಲಿ ತಾಲೂಕಿನ ಸರ್ವಾಂಗೀಣ ಅಭಿವೃದ್ಧಿಗೆ ಹೊಸ ದಿಕ್ಕು ದೊರೆಯಲಿದೆ ಎಂದು ಅಭಿಪ್ರಾಯಪಟ್ಟರು.

ಡಿ ಕೆ ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸುತ್ತಿರುವ ಹಿನ್ನೆಲೆ, ತಾಲೂಕಿನ ಅಭಿವೃದ್ಧಿಗೆ ಹೆಚ್ಚಿನ ಪ್ರಾಮುಖ್ಯತೆ ಸಿಗಲಿದೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಣ್ಣ ಗೌಡ ತಿಳಿಸಿದರು. ಪಟ್ಟಣದ ಶಾಸಕರ ಕಚೇರಿಯಲ್ಲಿ ಮಾತನಾಡಿದ ಅವರು, ನಿರುದ್ಯೋಗ ಸಮಸ್ಯೆ ನಿವಾರಣೆಗೆ ಕೈಗಾರಿಕೆಗಳ ಸ್ಥಾಪನೆ, ನೀರಾವರಿ ಯೋಜನೆಗಳ ಪೂರ್ಣಗೊಳಿಕೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಪ್ರಗತಿ ಕಾಣಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಂಸದ ಡಿ.ಕೆ.ಸುರೇಶ್ ಅವರ ಮಾರ್ಗದರ್ಶನದಲ್ಲಿ ಶಾಸಕ ಡಾ. ಎಚ್.ಡಿ. ರಂಗನಾಥ್ ತಾಲೂಕನ್ನು ಅಭಿವೃದ್ಧಿಯ ದಾರಿಯಲ್ಲಿ ಕೊಂಡೊಯ್ಯುತ್ತಿದ್ದಾರೆ ಎಂದರು. ಈಗಾಗಲೇ ಕಸಬಾ ಮತ್ತು ಕೊತ್ತಗೆರೆ ಹೋಬಳಿಗಳ ಕೆರೆಗಳಿಗೆ ಏತ ನೀರಾವರಿ ಯೋಜನೆ ಮೂಲಕ ನೀರು ಹರಿಸುವ ಯೋಜನೆ ಘೋಷಣೆಗೊಂಡಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಯೋಜನೆಗಳಿಗೆ ಆರ್ಥಿಕ ಸಹಕಾರ ದೊರೆಯಲಿದೆ ಎಂಬ ನಿರೀಕ್ಷೆ ವ್ಯಕ್ತವಾಯಿತು.

ತಾಲೂಕು ಪ್ರಚಾರ ಸಮಿತಿ ಅಧ್ಯಕ್ಷ ಶಂಕರ್ ಮಾತನಾಡಿ, ರಾಹುಲ್ ಗಾಂಧಿ ಅವರ ಆಶಯದಂತೆ ಯುವ ಶಾಸಕರಿಗೆ ಸಚಿವ ಸಂಪುಟದಲ್ಲಿ ಆದ್ಯತೆ ನೀಡಲಾಗುತ್ತಿದ್ದು, ಶಾಸಕ ಡಾ. ಎಚ್.ಡಿ. ರಂಗನಾಥ್ ಅವರಿಗೆ ಸಚಿವ ಸ್ಥಾನ ದೊರೆತರೆ ಜಿಲ್ಲೆಯಲ್ಲಿ ಕಾಂಗ್ರೆಸ್ ಸಂಘಟನೆ ಇನ್ನಷ್ಟು ಬಲಿಷ್ಠವಾಗಲಿದೆ ಎಂದು ಹೇಳಿದರು.

ಕೆಪಿಸಿಸಿ ಸದಸ್ಯ ಬೇಗೂರು ನಾರಾಯಣ ಮಾತನಾಡಿ, ರಾಜ್ಯದಲ್ಲಿ ಐತಿಹಾಸಿಕ ಸನ್ನಿವೇಶ ನಿರ್ಮಾಣವಾಗಿದ್ದು, ಕಳೆದ ಏಳು ವರ್ಷಗಳಲ್ಲಿ ಶಾಸಕ ರಂಗನಾಥ್ ಅವರ ಆಡಳಿತದಲ್ಲಿ ತಾಲೂಕಿನ ಅಭಿವೃದ್ಧಿಗೆ ಹೆಚ್ಚಿನ ಅನುದಾನ ದೊರೆತಿದೆ. ಮುಂದಿನ ದಿನಗಳಲ್ಲಿ ಯುವಕರಿಗೆ ಉದ್ಯೋಗಾವಕಾಶ, ರಸ್ತೆ ಅಭಿವೃದ್ಧಿ ಹಾಗೂ ನೀರಾವರಿ ಯೋಜನೆಗಳ ಮೂಲಕ ರೈತರ ಆರ್ಥಿಕ ಸ್ಥಿತಿ ಬಲಪಡಿಸಲಾಗುವುದು ಎಂದು ತಿಳಿಸಿದರು.

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ವೆಂಕಟರಾಮು ಕೂಡ ಸಭೆಯಲ್ಲಿ ಮಾತನಾಡಿ, ನೂತನ ಮುಖ್ಯಮಂತ್ರಿಗಳ ಸಹಕಾರದಿಂದ ತಾಲೂಕು ಸಮಗ್ರ ಅಭಿವೃದ್ಧಿ ಕಾಣಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬೇಗೂರು ಮೂರ್ತಿ, ಗ್ಯಾಸ್ ಮೂರ್ತಿ, ಯುವ ಕಾಂಗ್ರೆಸ್ ಅಧ್ಯಕ್ಷ ಸಂತೋಷ್ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ಜಮೀರ್ ವಿರುದ್ಧ ಮಲ್ಲಿಕಾರ್ಜುನ್ ಕಿಡಿ

ದಾವಣಗೆರೆ

ದಾವಣಗೆರೆ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ವಿರುದ್ಧವೇ ಪಕ್ಷ ವಿರೋಧಿ ಚಟುವಟಿಕೆ ನಡೆಸಿದ ಆರೋಪ ಎದುರಿಸುತ್ತಿರುವ ಮಾಜಿ ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧ ಮಾಜಿ ಸಚಿವ ಎಸ್ ಎಸ್ ಮಲ್ಲಿಕಾರ್ಜುನ್ ತೀವ್ರ ಕಿಡಿಕಾರಿದ್ದಾರೆ.



ಮಾಜಿ ಸಚಿನ ಜಮೀರ್ ಮತ್ತು ಸಿರಾಜ್ ನಡುವಿನ ಆಡಿಯೋ ಸಂಭಾಷಣೆ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಲೇ, ಈ ಕುರಿತು ಕಾಂಗ್ರೆಸ್ ಪಕ್ಷದಲ್ಲೇ ಪರ–ವಿರೋಧ ಚರ್ಚೆಗಳು ನಡೆಯುತ್ತಿವೆ. ಜಮೀರ್ ಅವರದ್ದು ಎನ್ನಲಾಗಿರುವ ಆಡಿಯೋ ವೈರಲ್ ಆಗಿದ್ದು, ದಾವಣಗೆರೆ ಉಪಚುನಾವಣೆಯಲ್ಲಿ ಕುಕ್ಕರ್‌ಗೆ ವೋಟ್ ಬೀಳಬೇಕು ಎಂದು ಅವರು ಮಾತನಾಡಿರುವುದು ಇದೀಗ ಚರ್ಚೆಗೆ ಗ್ರಾಸವಾಗಿದೆ. ಆಡಿಯೋದಲ್ಲಿ ಮುಸ್ಲಿಮರೆಲ್ಲಾ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಬದಲಾಗಿ ಪಕ್ಷೇತರರಿಗೆ ವೋಟ್ ಹಾಕಬೇಕು ಎಂದು ಆಗ್ರಹಿಸುವುದು ಎಂದು ಹೇಳಿದ್ದಾರೆ ಎನ್ನ. ಒಂದು ವೇಳೆ ಮುಸ್ಲಿಮರು ವೋಟ್ ಹಾಕಿಲ್ಲ ಅಂದ್ರೂ ಓಕೆ, ಕಾಂಗ್ರೆಸ್ ವೋಟ್ ಗಳು ಮೈನಸ್ ಆಗಬೇಕು.

ಕಾಂಗ್ರೆಸ್ ಅಭ್ಯರ್ಥಿಗೆ ಹೆಚ್ಚು ವೋಟ್ ಹಾಕಬೇಡಿ. ಹೆಚ್ಚಿನ ಸಂಖ್ಯೆಯಲ್ಲಿ ಪಕ್ಷೇತರರಿಗೆ ಮತ ಹಾಕಿಸಿ. ಬಲವಂತವಾಗಿ ಮನೆಯಿಂದ ಕರೆದು ಬಂದು ವೋಟ್ ಹಾಕಿಸಬೇಡಿ ಎಂದು ಹೇಳಿರುವುದು ಆಡಿಯೋದಲ್ಲಿ ದಾಖಲಾಗಿದೆ.

ಇದೇ ವಿಚಾರವಾಗಿ ಸುದ್ದಿಗಾರರೊಂದಿಗೆ ಮಾತನಾಡಿದ ಎಸ್ ಎಸ್ ಮಲ್ಲಿಕಾರ್ಜುನ್ ಅವರು, ‘ಜಮೀರ್ ಅಹಮದ್ ಮಾತನಾಡಿದ್ದು ಆಡಿಯೋ ಮೂಲಕ ಹೊರ ಬಂದಿದೆ. ಹೈಕಮಾಂಡ್ ನಾಯಕರು ಎಲ್ಲವನ್ನೂ ನೋಡಿದ್ದಾರೆ. ಈ ಬಗ್ಗೆ ಅವರು ತೀರ್ಮಾನ ಮಾಡುತ್ತಾರೆ’ ಎಂದರು.

# 1 ಲಕ್ಷ ರೂ. ಬೆಲೆಯ ಪರಿಕರಗಳ ವಿತರಣೆ

ತುಮಕೂರು



ತಾಲ್ಲೂಕಿನಲ್ಲಿ 2024–25ನೇ ಸಾಲಿನಲ್ಲಿ ಪ್ರಾರಂಭವಾದ 7 ನೂತನ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ತುಮಕೂರು ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ವತಿಯಿಂದ ಸುಮಾರು 1 ಲಕ್ಷ ರೂ. ಬೆಲೆಯ ಪರಿಕರಗಳನ್ನು ವಿತರಿಸಲಾಯಿತು.

ನಗರದ ಹೊರವಲಯದ ಮಲ್ಲಸಂದ್ರದಲ್ಲಿರುವ ತುಮಕೂರು ಹಾಲು ಒಕ್ಕೂಟದ ಆಡಳಿತ ಮಂಡಳಿ ಕಚೇರಿ ಆವರಣದಲ್ಲಿ ತಾಲ್ಲೂಕಿನ ಬಿದರೆಕಟ್ಟೆ, ಗಳಿಗೇನಹಳ್ಳಿ, ನಾಗವಲ್ಲಿ, ಸಿದ್ದೇಬೇಗೂರು, ಶೆಟ್ಟಪ್ಪನಹಳ್ಳಿ, ಚಿಕ್ಕಹಳ್ಳಿ ಹಾಗೂ ಬಿದನಗೆರೆ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ತಲಾ 1 ಲಕ್ಷ ರೂ. ನಂತೆ 7 ಸಂಘಗಳಿಗೆ ಒಟ್ಟು 7 ಲಕ್ಷ ರೂ. ಮೌಲ್ಯದ ಪರಿಕರಗಳನ್ನು ತುಮಕೂರು ತಾಲ್ಲೂಕು ತುಮುಲ್ ನಿರ್ದೇಶಕ ನಂಜೇಗೌಡ ವಿತರಿಸಿದರು.

ನಂತರ ಮಾತನಾಡಿದ ನಿರ್ದೇಶಕ ನಂಜೇಗೌಡ ಅವರು, 2024–25ನೇ ಸಾಲಿನಲ್ಲಿ ಪ್ರಾರಂಭವಾದ ತಾಲ್ಲೂಕಿನ 7 ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಹಾಲು ಒಕ್ಕೂಟದ ವತಿಯಿಂದ ತಲಾ 1 ಲಕ್ಷ ರೂ. ನಂತೆ 7 ಲಕ್ಷ ರೂ. ಬೆಲೆಯ ಪರಿಕರಗಳನ್ನು ವಿತರಿಸಲಾಗಿದೆ. ಇದರಲ್ಲಿ ಸಂಘಕ್ಕೆ ಅಗತ್ಯ ಇರುವ ಬೀರು, ಹಾಲು ಅಳತೆಯ ಮಾಪಕ, ಅನಲೈಸರ್, ಪೀಠೋಪಕರಣಗಳು ಸೇರಿದಂತೆ ಇತರೆ ವಸ್ತುಗಳು ಸೇರಿವೆ ಎಂದರು.

ಹಾಲು ಉತ್ಪಾದಕರು ಗುಣಮಟ್ಟದ ಹಾಲನ್ನು ಸಂಘಕ್ಕೆ ಸರಬರಾಜು ಮಾಡುವ ಮೂಲಕ ಒಕ್ಕೂಟದ ಹೆಸರು ಇಡೀ ರಾಜ್ಯ ಮತ್ತು ದೇಶದಲ್ಲೇ ಬೆಳಗುವಂತಾಗಬೇಕು. ಈ ಮೂಲಕ ಹಾಲು ಉತ್ಪಾದಕರ ಸಹಕಾರ ಸಂಘಗಳು ಒಕ್ಕೂಟದಿಂದ ಹಲವಾರು ರೀತಿಯ ಸಹಾಯ ಪಡೆಯಲು ಸಾಧ್ಯವಾಗುತ್ತದೆ. ಜತೆಗೆ ಹಾಲು ಉತ್ಪಾದಕ ರೈತರು ಆರ್ಥಿಕವಾಗಿ ಸಬಲರಾಗಬಹುದಾಗಿದೆ ಎಂದು ಸಲಹೆ ನೀಡಿದರು.

ಗುಣಮಟ್ಟದ ಹಾಲು ಪೂರೈಕೆ ಹೈನುಗಾರರ ಧ್ಯೇಯವಾಗಬೇಕು. ಆಗ ಮಾತ್ರ ಇನ್ನು ಹೆಚ್ಚಿನ ರೀತಿಯಲ್ಲಿ ಸಂಘಗಳಿಗೆ ಆರ್ಥಿಕ ಸಹಾಯ ದೊರೆಯಲು ಸಾಧ್ಯವಾಗುತ್ತದೆ ಎಂದು ಅವರು ತಿಳಿಸಿದರು.

ಹೈನುಗಾರರಿಗೆ ಉತ್ತೇಜನ ನೀಡುವ ಸಲುವಾಗಿ ತುಮಕೂರು ಹಾಲು ಒಕ್ಕೂಟದ ವತಿಯಿಂದ ಪ್ರೋತ್ಸಾಹ ನೀಡಲಾಗುತ್ತಿದೆ. ಇದನ್ನು ಹಾಲು ಉತ್ಪಾದಕ ರೈತರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ತುಮುಲ್ ವ್ಯವಸ್ಥಾಪಕ ನಿರ್ದೇಶಕ ಶ್ರೀನಿವಾಸನ್ ಮಾತನಾಡಿ, ದೇಶದಲ್ಲೇ ಹೈನುಗಾರಿಕೆಯಲ್ಲಿ ಗುಜರಾತ್ ಹೊರತುಪಡಿಸಿದರೆ ಕರ್ನಾಟಕ 2ನೇ ಸ್ಥಾನದಲ್ಲಿದೆ. ರಾಜ್ಯದಲ್ಲಿ 15 ಹಾಲು ಒಕ್ಕೂಟಗಳು ಕಾರ್ಯನಿರ್ವಹಿಸುತ್ತಿವೆ. ತುಮಕೂರು ಹಾಲು ಒಕ್ಕೂಟ ರಾಜ್ಯದ ಒಕ್ಕೂಟಗಳಲ್ಲೇ ಪ್ರತಿಷ್ಠಿತ ಒಕ್ಕೂಟವಾಗಿ ಕೆಲಸ ನಿರ್ವಹಿಸುತ್ತಿದೆ ಎಂದರು.

ಜಿಲ್ಲೆಯಲ್ಲಿ 1338 ಹಾಲು ಉತ್ಪಾದಕರ ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿವೆ. ಸುಮಾರು 8.50 ಲಕ್ಷಕ್ಕೂ ಅಧಿಕ ಲೀಟರ್ ಹಾಲು ಪ್ರತಿನಿತ್ಯ ಶೇಖರಣೆಯಾಗುತ್ತಿದೆ. ರೈತರಿಂದ ಶೇಖರಿಸಿದ ಹಾಲನ್ನು ಸಂಸ್ಕರಣೆ ಮಾಡಿ ವಿವಿಧ ಪ್ರದೇಶಗಳಲ್ಲಿ ಮಾರಾಟ ಮಾಡಿ ಅದರಿಂದ ಬಂದಂತಹ ಹಣದಲ್ಲಿ ರೈತರಿಗೆ ಬಟವಾಡಿ ನೀಡಲಾಗುತ್ತಿದೆ ಎಂದರು.

ಹಾಲು ಉತ್ಪಾಕರ ಸಹಕಾರ ಸಂಘಗಳಿಗೆ ತುಮುಲ್ ವತಿಯಿಂದ ಅಗತ್ಯ ಇರುವ ಪರಿಕರಣಗಳನ್ನು ವಿತರಿಸಲಾಗಿದೆ. ಇದರ ಸದುಪಯೋಗ ಪಡೆದು ಸಂಘಗಳು ಉತ್ತಮವಾಗಿ ಕಾರ್ಯನಿರ್ವಹಿಸಬೇಕು. ಹಾಗೆಯೇ ರೈತರು ಸಹ ಗುಣಮಟ್ಟದ ಹಾಲನ್ನು ಸಂಘಗಳನ್ನು ಪೂರೈಸಬೇಕು. ಈ ಮೂಲಕ ಸಂಘಗಳು ಹಾಗೂ ರೈತರು ಆರ್ಥಿಕವಾಗಿ ಸಬಲತೆ ಹೊಂದಬಹುದಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷ ಬಿ.ಜಿ. ವೆಂಕಟೇಗೌಡ, ತುಮುಲ್ ನಿರ್ದೇಶಕ ನಂಜೇಗೌಡ, ವ್ಯವಸ್ಥಾಪಕ ನಿರ್ದೇಶಕ ಶ್ರೀನಿವಾಸನ್, ತುಮುಲ್ ಅಧಿಕಾರಿಗಳು ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

3S ಭಾರತ ಸಾರಥಿ
04/06/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ: ಅ.7ಕ್ಕೆ ಅಂತಿಮ ಪಟ್ಟಿ ಪ್ರಕಟ

ಕೋಲಾರ

ಕೋಲಾರ ಜಿಲ್ಲೆಯಲ್ಲಿ 'ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026' ಅನ್ನು ಕೈಗೊಳ್ಳಲಾಗಿದ್ದು, ಅಕ್ಟೋಬರ್ 7 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ. ಎಂ. ಆರ್. ರವಿ ತಿಳಿಸಿದರು.

ಇಂದು ಜಿಲ್ಲಾಧಿಕಾರಿಗಳ ನ್ಯಾಯಾಂಗ ಸಭಾಂಗಣದಲ್ಲಿ ನಡೆದ ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ 01/10/2026 ನ್ನು ಅರ್ಹತಾ ದಿನಾಂಕವಾಗಿ ಪರಿಗಣಿಸಿ ಕರ್ನಾಟಕ ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯು 3ನೇ ಹಂತದಲ್ಲಿ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಸಿದ್ದತೆ ಹಾಗಲೂ ಬಿಎಲ್‌ಒ ಗಳಿಗೆ ತರಬೇತಿ 20/06/2026 ರಿಂದ 29/06/2026 ರವರೆಗೆ

ಮತಗಟ್ಟೆ ಮಟ್ಟದ ಅಧಿಕಾರಿಗಳಿಂದ ಮನೆ ಮನೆ ಭೇಟಿ: 30/06/2026 ರಿಂದ 29/07/2026 ರವರೆಗೆ.

ಮತಗಟ್ಟೆಗಳ ರಾಷನಲೈಸೇಷನ್: 29/07/2026.

ಕರಡು ಮತದಾರರ ಪಟ್ಟಿಯ ಪ್ರಕಟಣೆ: 05/08/2026.

ಹಕ್ಕು ಮತ್ತು ಆಕ್ಷೇಪಣಾ ಅರ್ಜಿಗಳ ಸಲ್ಲಿಕೆ: 05/08/2026 ರಿಂದ 04/09/2026 ರವರೆಗೆ.

ವಿಲೇವಾರಿ ಹಂತ: 05/08/2026 ರಿಂದ 03/10/2026 ರವರೆಗೆ.

ಅಂತಿಮ ಮತದಾರರ ಪಟ್ಟಿಯ ಪ್ರಕಟಣೆ: 07/10/2026 ರಂದು ನಡೆಯಲಿದೆ.

ಕೋಲಾರ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳ (ಶ್ರೀನಿವಾಸಪುರ, ಮುಳಬಾಗಿಲು, ಕೆ.ಜಿ.ಎಫ್, ಬಂಗಾರಪೇಟೆ, ಕೋಲಾರ, ಮಾಲೂರು) ವ್ಯಾಪ್ತಿಯಲ್ಲಿ ಒಟ್ಟು 1538 ಮತಗಟ್ಟೆಗಳಿವೆ. ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು 12,94,717 ಮತದಾರರಿದ್ದಾರೆ. ಇದರಲ್ಲಿ 6,37,000 ಪುರುಷರು, 6,57,572 ಮಹಿಳೆಯರು ಮತ್ತು 145 ತೃತೀಯ ಲಿಂಗಿ ಮತದಾರರಿದ್ದಾರೆ. ಈ ಪರಿಷ್ಕರಣೆ ಕಾರ್ಯಕ್ಕಾಗಿ ಜಿಲ್ಲೆಯಾದ್ಯಂತ ಒಟ್ಟು 1538 ಮತಗಟ್ಟೆ ಹಂತದ ಅಧಿಕಾರಿಗಳನ್ನು (ಬಿ.ಎಲ್.ಒ) ನಿಯೋಜಿಸಲಾಗಿದೆ ಎಂದು ತಿಳಿಸಿದರು.



ಬಿ.ಎಲ್.ಒ ಗಳು ಮನೆ ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸಲಿದ್ದಾರೆ. ಯಾವ ಮತದಾರರು ಗಣತಿ ನಮೂನೆಯಲ್ಲಿ ವಿವರಗಳನ್ನು ನಮೂದಿಸಿ, ಸಹಿ ಮಾಡಿ ಬಿ.ಎಲ್.ಒ ಗಳಿಗೆ ಹಿಂದಿರುಗಿಸುವುದಿಲ್ಲವೋ, ಅಂತಹ ಮತದಾರರ ಹೆಸರನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗುವುದು. ಕನಿಷ್ಠ ಮೂರು ಬಾರಿಯಾದರೂ ಇವರು ಮನೆ ಮನೆಗೆ ಭೇಟಿ ನೀಡಲಿದ್ದಾರೆ.

ಸಾರ್ವಜನಿಕರು ವೋಟರ್ಸ್ ಪೋರ್ಟಲ್ https://voters.eci.gov.in/ Homepage ಮೂಲಕ ಮತದಾರರ ಗಣತಿ ನಮೂನೆಯನ್ನು ಆನ್‌ಲೈನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ವಿವಿರಗಳನ್ನು ಸಹಿ ಮಾಡಿ ಸಂಬಂಧ ಬಿ.ಎಲ್.ಒ ರವರಿಗೆ ಸಲ್ಲಿಸಬಹುದಾಗಿದೆ.

ನಮೂನೆ ನೀಡದ ಮತದಾರರನ್ನು ಎ.ಎಸ್.ಡಿ (ಗೈರು ಹಾಜರಿ/ಸ್ಥಳಾಂತರಗೊಂಡ/ಮರಣ) ಎಂದು ಪರಿಗಣಿಸಿ, ಅಂತಹ ಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಪ್ರಚುರಪಡಿಸಲಾಗುವುದು.

ದಿನಾಂಕ 01/10/2026 ಕ್ಕೆ 18 ವರ್ಷ ತುಂಬುವ ಯುವ ಮತದಾರರು ಹಕ್ಕು ಮತ್ತು ಆಕ್ಷೇಪಣಾ ಅವಧಿಯಲ್ಲಿ ನಮೂನೆ–06 ಅನ್ನು ದೃಢೀಕರಣದೊಂದಿಗೆ ಬಿ.ಎಲ್.ಒ ರವರಿಗೆ ಸಲ್ಲಿಸಬಹುದು.

ಸುಪ್ರೀಂ ಕೋರ್ಟ್ ನಿರ್ದೇಶನದಂತೆ, ಆಧಾರ್ ಅನ್ನು ಕೇವಲ ಗುರುತನ್ನು ಸಾಬೀತುಪಡಿಸುವ ದಾಖಲೆಯಾಗಿ ಮಾತ್ರ ಪರಿಗಣಿಸಲಾಗುವುದು; ಇದು ಪೌರತ್ವ, ವಿಳಾಸ ಅಥವಾ ಜನ್ಮ ದಿನಾಂಕದ ಪ್ರಮಾಣವಲ್ಲ ಎಂದು ಸ್ಪಷ್ಟಪಡಿಸಿದರು.

ಮತದಾರರಿಗೆ ಸಹಾಯ ಮಾಡಲು ಹಾಗೂ ಗೊಂದಲಗಳನ್ನು ಪರಿಹರಿಸಲು ಸಂಬಂಧಪಟ್ಟ ಮತಗಟ್ಟೆಗಳಲ್ಲಿ 'ವೋಟರ್ ಫೆಸಿಲಿಟೇಷನ್ ಸೆಂಟರ್' ಗಳನ್ನು ಸ್ಥಾಪಿಸಲಾಗುವುದು ಹಾಗೂ ಇದರ ಮೇಲ್ವಿಚಾರಣೆಯನ್ನು ಬಿ.ಎಲ್.ಒ ಗಳು ಮಾಡಲಿದ್ದಾರೆ.

ಇದರ ಜೊತೆಗೆ, ಜಿಲ್ಲೆಯಲ್ಲಿ ಯುವಜನರಲ್ಲಿ ಜಾಗೃತಿ ಮೂಡಿಸಲು 637 ಚುನಾವಣಾ ಸಾಕ್ಷರತಾ ಕ್ಲಬ್‌ಗಳು, 581 ಮತದಾರರ ಜಾಗೃತಿ ವೇದಿಕೆಗಳು ಹಾಗೂ 1538 ಚುನಾವ್ ಜಾಗೃತಿ ಸಮಿತಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ ಎಂದರು.

ಮಾನ್ಯತೆ ಪಡೆದ ರಾಜಕೀಯ ಪಕ್ಷಗಳಿಂದ ಈಗಾಗಲೇ ಒಟ್ಟು 1650 ಬೂತ್ ಮಟ್ಟದ ಏಜೆಂಟರನ್ನು (ಬಿ.ಎಲ್.ಎ) ನೇಮಕ ಮಾಡಲಾಗಿದ್ದು, ಪ್ರತಿಯೊಂದು ಮತಗಟ್ಟೆಗೂ ಬಿ.ಎಲ್.ಎ ಗಳನ್ನು ನೇಮಿಸುವಂತೆ ರಾಜಕೀಯ ಪಕ್ಷಗಳಿಗೆ ಕೋರಲಾಗಿದೆ. ಬಿ.ಎಲ್.ಒ ಗಳು ಮನೆ ಮನೆಗೆ ಭೇಟಿ ನೀಡುವಾಗ ಸಾರ್ವಜನಿಕರು ಅಗತ್ಯ ಮಾಹಿತಿ ನೀಡಿ, ಈ ಪರಿಷ್ಕರಣಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಜಿಲ್ಲಾಡಳಿತಕ್ಕೆ ಸಂಪೂರ್ಣ ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಇದೆ ಸಂದರ್ಭದಲ್ಲಿ ಮನವಿ ಮಾಡಿದರು.

ಅಲ್ಲದೆ ಯಾವೊಬ್ಬ ಅರ್ಹ ಮತದಾರ ಮತದಾರರ ಪಟ್ಟಿಯಿಂದ ಬಿಟ್ಟುಹೋಗದಂತೆ ಹಾಗೂ ಅನರ್ಹ ಮತದಾರರು ಮತಪಟ್ಟಿಗೆ ಸೇರ್ಪಡೆಗೊಳ್ಳದಂತೆ ನೋಡಿಕೊಳ್ಳವುದು ಸಹ ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಎಸ್.ಎಂ.ಮಂಗಳ, ಉಪವಿಭಾಗಾಧಿಕಾರಿ ಜಂಬಗಿ ರೇಣುಕಾಪ್ರಸಾದ್ ಹಾಗೂ ಮತದಾರರ ಪಟ್ಟಿಗಳ ಸಮಗ್ರ ಪರಿಷ್ಕರಣೆಯ ನೋಡಲ್ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಲೆಯಲ್ಲಿ ಸಿಲುಕಿದ್ದ ಹೆಬ್ಬಾವನ್ನು ರಕ್ಷಿಸಿದ ಗ್ರಾಮಸ್ಥರು

ದೊಡ್ಡಬಳ್ಳಾಪುರ

ದೊಡ್ಡಬೆಳವಂಗಲ ಹೋಬಳಿಯ ಹುಲುಕುಡಿ ಬೆಟ್ಟದ ತಪ್ಪಲಿನ ಮಾಡೇಶ್ವರ ಗ್ರಾಮದ ಸಮೀಪ ಹಳೆಯ ಮೀನಿನ ಬಲೆಗೆ ಸಿಲುಕಿಕೊಂಡು ಒದ್ದಾಡುತ್ತಿದ್ದ ಬೃಹತ್ ಗಾತ್ರದ ಹೆಬ್ಬಾವನ್ನು ಗ್ರಾಮಸ್ಥರು ರಕ್ಷಿಸಿರುವ ಘಟನೆ ನಡೆದಿದೆ.

ಮೀನು ಹಿಡಿಯಲು ಬಳಸಲಾಗಿದ್ದ ಹಳೆಯ ಬಲೆಯಲ್ಲಿ ಹೆಬ್ಬಾವು ಸಿಕ್ಕಿಹಾಕಿಕೊಂಡು ಹೊರಬರಲು ಹರಸಾಹಸ ಪಡುತ್ತಿತ್ತು. ತಪ್ಪಿಸಿಕೊಳ್ಳಲು ನಡೆಸಿದ ಪ್ರಯತ್ನದಲ್ಲಿ ಅದರ ಬಾಯಿಗೆ ಗಾಯವಾಗಿ ರಕ್ತಸ್ರಾವವಾಗಿರುವುದು ಕಂಡುಬಂದಿದೆ.

ಸ್ಥಳೀಯರು ಆರಂಭದಲ್ಲಿ ಹೆಬ್ಬಾವನ್ನು ಕಂಡು ಆತಂಕಗೊಂಡರೂ ಧೈರ್ಯದಿಂದ ಕಾರ್ಯಾಚರಣೆ ನಡೆಸಿ, ಬಲೆಯನ್ನು ಕತ್ತರಿಸಿ ಸುರಕ್ಷಿತವಾಗಿ ಅದನ್ನು ಬಿಡುಗಡೆ ಮಾಡಿದ್ದಾರೆ. ಬಳಿಕ ಘಟನೆ ಕುರಿತು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ.

ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಹೆಬ್ಬಾವಿನ ಆರೋಗ್ಯ ಸ್ಥಿತಿಯನ್ನು ಪರಿಶೀಲಿಸಿ, ಅಗತ್ಯ ಚಿಕಿತ್ಸೆ ನೀಡಿ ಸುರಕ್ಷಿತ ಅರಣ್ಯ ಪ್ರದೇಶಕ್ಕೆ ಸ್ಥಳಾಂತರಿಸುವ ಕ್ರಮ ಕೈಗೊಳ್ಳುವ ನಿರೀಕ್ಷೆಯಿದೆ.

ಈ ಘಟನೆ ಅರಣ್ಯ ಪ್ರದೇಶಗಳ ಸುತ್ತಮುತ್ತ ಹಳೆಯ ಮೀನಿನ ಬಲೆಗಳು, ಪ್ಲಾಸ್ಟಿಕ್ ಹಾಗೂ ಇತರೆ ತ್ಯಾಜ್ಯ ವಸ್ತುಗಳನ್ನು ಎಸೆಯುವುದರಿಂದ ವನ್ಯಜೀವಿಗಳಿಗೆ ಉಂಟಾಗುವ ಅಪಾಯವನ್ನು ಮತ್ತೊಮ್ಮೆ ಬೆಳಕಿಗೆ ತಂದಿದೆ. ಇಂತಹ ತ್ಯಾಜ್ಯಗಳು ಹೆಬ್ಬಾವು ಸೇರಿದಂತೆ ಅನೇಕ ವನ್ಯಜೀವಿಗಳ ಜೀವಕ್ಕೆ ಸಂಕಷ್ಟ ಉಂಟುಮಾಡುತ್ತಿವೆ.

ಪರಿಸರ ಹಾಗೂ ವನ್ಯಜೀವಿ ಸಂರಕ್ಷಣೆಯ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ. ಅರಣ್ಯ ಪ್ರದೇಶಗಳಲ್ಲಿ ತ್ಯಾಜ್ಯ ವಸ್ತುಗಳನ್ನು ಎಸೆಯದಂತೆ ಸಾರ್ವಜನಿಕರು ಎಚ್ಚರಿಕೆ ವಹಿಸಬೇಕು ಎಂದು ಮನವಿ ಮಾಡಿದ್ದಾರೆ.

ಪ್ರಕೃತಿ ಉಳಿದರೆ ಬದುಕು ಉಳಿಯುತ್ತದೆ. ಪ್ರಾಣಿ, ಪಕ್ಷಿ ಹಾಗೂ ಇತರೆ ಜೀವಜಂತುಗಳ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಜೀವ ವೈವಿಧ್ಯತೆಯ ರಕ್ಷಣೆ ಮೂಲಕವೇ ಪರಿಸರ ಸಮತೋಲನ ಕಾಪಾಡಲು ಸಾಧ್ಯ ಎಂಬ ಸಂದೇಶವನ್ನು ಈ ಘಟನೆ ಸಾರಿದೆ.

## ಶಿಕ್ಷಕ ಮಕ್ಕಳಲ್ಲಿ ದೇವರನ್ನು ಕಾಣಬೇಕು: ಎಸ್.ಆರ್.ಧರ್ಮೇಶ್

ಶ್ರೀನಿವಾಸಪುರ

ಸೀಗಹಳ್ಳಿ ಗ್ರಾಮದ ಸರ್ಕಾರಿ ಕಿರುಯ ಪ್ರಾಥಮಿಕ ಶಾಲೆಯಲ್ಲಿ ಏರ್ಪಡಿಸಿದ್ದ ಸಮಾರಂಭದಲ್ಲಿ, ವಯೋನಿವೃತ್ತಿ ಹೊಂದಿದ ಶಾಲೆಯ ಮುಖ್ಯ ಶಿಕ್ಷಕ ಹಾಗೂ ದಾನಿ ಎಸ್.ಆರ್.ಧರ್ಮೇಶ್ ಅವರನ್ನು ಸಾರ್ವಜನಿಕ ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಎಸ್.ಆರ್. ಧರ್ಮೇಶ್, ಶಿಕ್ಷಕ ವೃತ್ತಿ ಅತ್ಯಂತ ಶ್ರೇಷ್ಠವಾದುದು. ಉತ್ತಮ ಸಮಾಜ ನಿರ್ಮಾಣ ಕಾರ್ಯದಲ್ಲಿ ಶಿಕ್ಷಕರ ಪಾತ್ರ ಹಿರಿದು. ಶಿಕ್ಷಕ ಸಮುದಾಯ ಮಕ್ಕಳಲ್ಲಿ ದೇವರನ್ನು ಕಾಣುವ ಪರಂಪರೆಯನ್ನು ಮುಂದುವರಿಸಿಕೊಂಡು ಹೋಗಬೇಕು. ಅವರನ್ನು ತಮ್ಮ ಮಕ್ಕಳಂತೆಯೇ ಪ್ರೀತಿಸಬೇಕು ಎಂದು ಹೇಳಿದರು.

ಬದಲಾದ ಪರಿಸ್ಥಿತಿಯಲ್ಲಿ ನೈತಿಕ ಮೌಲ್ಯಗಳು ನೇಪಥ್ಯಕ್ಕೆ ಸರಿಯುತ್ತಿವೆ. ಅದು ಸಾಮಾಜಿಕ ವಿಘಟನೆಗೆ ಕಾರಣವಾಗುತ್ತಿದೆ. ಆದ್ದರಿಂದ ಎಳೆಯರನ್ನು ಸರಿದಾರಿಯಲ್ಲಿ ನಡೆಸುವ ಹೊಣೆಗಾರಿಕೆ ಶಿಕ್ಷಕರ ಮೇಲಿದೆ. ಮೂರು ದಶಕಗಳಿಗೂ ಹೆಚ್ಚು ಕಾಲದಿಂದ ಶಿಕ್ಷಕ ವೃತ್ತಿಯಲ್ಲಿ ಮಾರ್ಗದರ್ಶನ ಮಾಡಿದ ಇಲಾಖಾ ಅಧಿಕಾರಿಗಳು, ಸಹಕರಿಸಿದ ಸಹ ಶಿಕ್ಷಕರು ಹಾಗೂ ಪೋಷಕರಿಗೆ ಕೃತಜ್ಞನಾಗಿದ್ದೇನೆ. ನಿವೃತ್ತಿ ಬಳಿಕವೂ ಸರ್ಕಾರಿ ಶಾಲಾ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಕೈಲಾದ ನೆರವು ನೀಡುವುದನ್ನು ಮುಂದುವರಿಸುತ್ತೇನೆ ಎಂದು ಹೇಳಿದರು.

ಸಾರ್ವಜನಿಕ ಶಿಕ್ಷಣ ಇಲಾಖೆಯ ನಿವೃತ್ತ ಶಿಕ್ಷಣಾಧಿಕಾರಿ ಸಿ.ಆರ್. ಅಶೋಕ್ ಮಾತನಾಡಿ, ಶಿಕ್ಷಕರಾಗಿ ಎಸ್.ಆರ್.ಧರ್ಮೇಶ್ ಅವರ ನಡೆ ಮಾದರಿಯಾಗಿದೆ. ಅವರ ದಾನಗುಣ ಹಾಗೂ ಸೇವಾ ಮನೋಭಾವ ಅನುಕರಣೀಯ. ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸುವುದರ ಮೂಲಕ ಸರ್ಕಾರದ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದರು.

ಇಸಿಓಗಳಾದ ನಂಜುಂಡಗೌಡ, ಶ್ರೀನಿವಾಸ್, ರಾಧಾ, ಸಿಆರ್‌ಪಿ ಮೀನಾ ಮತ್ತಿತರರು ಎಸ್.ಆರ್.ಧರ್ಮೇಶ್ ಅವರ ಶೈಕ್ಷಣಿಕ ಸೇವೆ ಕುರಿತು ಮಾತನಾಡಿದರು.

ಮುಖ್ಯ ಶಿಕ್ಷಕ ಶ್ರೀನಿವಾಸ್, ಶಿಕ್ಷಕರಾದ ಹರಿನಾಥ್, ಅನಿತಾ, ಭದ್ರೇಗೌಡ, ಗೋವಿಂದಪ್ಪ, ನೇತ್ರಾವತಿ, ನಾರಾಯಣಸ್ವಾಮಿ, ಸುಮನ್. ರಾಮಲಕ್ಷ್ಮಮ್ಮ, ಪಿಳ್ಳಪ್ಪ, ಮೌಲಾನಾ, ಅಮ್ಮೆಜಿ ಸುಲ್ತಾನ ಮತ್ತಿತರರು ಇದ್ದರು.

## ಪೌರ ಕಾರ್ಮಿಕರಿಗೆ ಸರ್ಕಾರವು ಕಲ್ಪಿಸಿರುವ ಎಲ್ಲಾ ಸೌಲಭ್ಯಗಳನು ಕಡ್ಡಾಯವಾಗಿ ತಲುಪಿಸಿ: ಆರ್. ಚಂದ್ರಯ್ಯ



ರಾಮನಗರ

ಸರ್ಕಾರವು ಪೌರಕಾರ್ಮಿಕರು ಹಾಗೂ ಅವರ ಕುಟುಂಬದವರ ಅನುಕೂಲಕ್ಕಾಗಿ ಆರೋಗ್ಯ, ಶಿಕ್ಷಣ, ಮೂಲಭೂತ ಅಗತ್ಯಗಳು ಸೇರಿದಂತೆ ಹಲವಾರು ರೀತಿಯ ಸೌಲಭ್ಯಗಳನ್ನು ಕಲ್ಪಿಸಿಕೊಟ್ಟಿದೆ, ಅವುಗಳನ್ನು ಆದ್ಯತೆಯ ಮೇರೆಗೆ, ಲೋಪದೋಷಗಳಿಲ್ಲದಂತೆ ತಲುಪಿಸಬೇಕೆಂದು ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಜೂ. 02ರ ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಅಧಿನಿಯಮ 2013ರ ಅನುಷ್ಠಾನ ಸಂಬಂಧ ಆಯೋಜಿಸಲಾಗಿದ್ದ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪೌರ ಕಾರ್ಮಿಕರಿಗೆ ಸುರಕ್ಷತಾ ಪರಿಕರಗಳ ವಿತರಣೆ, ಅವರಿಗೆ ವಿಶ್ರಾಂತಿ ಕೊಠಡಿ, ಬೆಳಗಿನ ಉಪಹಾರ ವಿತರಣೆ ಸೇರಿದಂತೆ ವೇತನ, ಆರೋಗ್ಯ ವಿಮೆ (ಇಎಸ್‌ಐ), ಭವಿಷ್ಯ ನಿಧಿ (ಪಿಎಫ್), ಜೀವ ವಿಮೆಯಂತಹ ಎಲ್ಲಾ ಸೌಲಭ್ಯಗಳನ್ನು ನಗರ ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಹಾಗೂ ಗ್ರಾಮೀಣ ಭಾಗದಲ್ಲಿ ಗ್ರಾಮ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ಸಮರ್ಪಕವಾಗಿ ಒದಗಿಸಿಕೊಡಬೇಕು, ಅದಕ್ಕಾಗಿ ಸಂಬಂಧಿಸಿದ ಅಧಿಕಾರಿಗಳು ಪರಸ್ಪರ ಸಮನ್ವಯದೊಂದಿಗೆ ಹಾಗೂ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದರು.

ಕನಕಪುರ ನಗರಸಭೆ ವ್ಯಾಪ್ತಿಯಲ್ಲಿ ಪೌರ ಕಾರ್ಮಿಕರಿಗೆ ಬೆಳಗಿನ ಉಪಹಾರ ನೀಡುತ್ತಿಲ್ಲ. ಸರಿಯಾದ ಸಮಯಕ್ಕೆ ವೇತನ ಪಾವತಿಯಾಗುತ್ತಿಲ್ಲ. ಇಎಸ್‌ಐ, ಪಿ.ಎಫ್ ಕಟಾವಣೆಯಾಗುತ್ತಿಲ್ಲ. ವಿಶ್ರಾಂತಿ ಕೊಠಡಿ ವ್ಯವಸ್ಥೆ ನೀಡಿಲ್ಲ ಮಾಸ್ಕ್, ಗ್ಲೌಸ್, ಇತರೆ ಸಲಕರಣೆ–ಸಾಮಗ್ರಿಗಳನ್ನು ವಿತರಿಸಿರುವುದಿಲ್ಲ ಎಂದು ಸಮಿತಿ ಸದಸ್ಯರು ಸಭೆಯ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಅಪರ ಜಿಲ್ಲಾಧಿಕಾರಿಗಳು ನಗರ, ಗ್ರಾಮೀಣ ಸ್ಥಳೀಯ ಸಂಸ್ಥೆಗಳು, ಆರೋಗ್ಯ ಇಲಾಖೆ, ಕೆ.ಎಸ್.ಆರ್.ಟಿ.ಸಿ ಸೇರಿದಂತೆ ಎಲ್ಲಾ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಪೌರ ಕಾರ್ಮಿಕರಿಗೆ ನೀಡಲಾಗುವ ಎಲ್ಲಾ ಸೌಲಭ್ಯಗಳನ್ನು ತಲುಪಿಸುವಂತೆ ತಾಕೀತು ಮಾಡಿದರು.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಆಶ್ರಯ ಯೋಜನೆಯಡಿ ನಿವೇಶನ ಹಾಗೂ ವಸತಿ ಕಲ್ಪಿಸಲು ಸಂಬಂಧಿಸಿದ ಅಧಿಕಾರಿಗಳು ಕ್ರಮವಹಿಸಬೇಕು. ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರು/ ಸ್ವಚ್ಚತಾ ಕಾರ್ಮಿಕರಿಗೆ ನಿವೇಶನ, ವಸತಿ ಕಲ್ಪಿಸಲು ಸ್ಥಳ ಪರಿಶೀಲನೆ ನಡೆಸಿ ವರದಿ ನೀಡುವಂತೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪೌರಕಾರ್ಮಿಕರುಗಳಿಗೆ ವಿಶ್ರಾಂತಿ ಕೊಠಡಿ, ಬೆಳಗಿನ ಉಪಹಾರ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಈಗಾಗಲೇ ರಾಮನಗರ ನಗರಸಭೆ ವ್ಯಾಪ್ತಿಯಲ್ಲಿ ವಿಶ್ರಾಂತಿ ಗೃಹ ನಿರ್ಮಿಸಲಾಗಿರುತ್ತದೆ. ಕನಕಪುರ, ಚನ್ನಪಟ್ಟಣ, ಮಾಗಡಿ ಹಾಗೂ ಹಾರೋಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಶ್ರಾಂತಿ ಗೃಹಗಳನ್ನು ಶೀಘ್ರವಾಗಿ ನಿರ್ಮಿಸಲು ಕ್ರಮವಹಿಸಬೇಕು ಎಂದು ಸೂಚಿಸಿದರು.

ಪೌರ ಕಾರ್ಮಿಕರು/ ಸ್ವಚ್ಚತಾ ಕಾರ್ಮಿಕರಿಗೆ ಹೆಪಟೈಟಿಸ್–ಬಿ, ಟಿ.ಬಿ., ಅಸ್ತಮಾ ಹಾಗೂ ಹೃದಯಕ್ಕೆ ಸಂಬಂಧಿಸಿದ ರೋಗಗಳನ್ನು ನಿಯಂತ್ರಿಸಲು ಜಿಲ್ಲಾ ಹಾಗೂ ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳಲ್ಲಿ ಆರೋಗ್ಯ ಪರೀಕ್ಷೆ ನಡೆಸಲಾಗುತ್ತಿದ್ದು, ಇದನ್ನು ನಿಯಮಿತವಾಗಿ ಅಂದರೆ ಪ್ರತೀ ಮೂರು ತಿಂಗಳಿಗೊಮ್ಮೆ ಕಡ್ಡಾಯವಾಗಿ ನಡೆಸಬೇಕು ಹಾಗೂ ಪೌರಕಾರ್ಮಿಕರು ಕಾರ್ಯನಿರ್ವಹಿಸಲು ಅವಶ್ಯವಿರುವ ಮಾಸ್ಕ್, ಗ್ಲೌಸ್, ಇತರೆ ಸಲಕರಣೆ–ಸಾಮಗ್ರಿಗಳನ್ನು ಸಮರ್ಪಕವಾಗಿ ಒದಗಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಶೇಖರ್ ಅವರು ಮಾತನಾಡಿ, ಸುಪ್ರೀಂ ಕೋರ್ಟ್ನ ಇತ್ತೀಚಿನ ನಿರ್ದೇಶನದಂತೆ ಸ್ವಚ್ ಭಾರತ್ ಅಭಿಯಾನದಡಿ 'ಘನ ತ್ಯಾಜ್ಯ ನಿರ್ವಹಣಾ ನಿಯಮಗಳು 2026' ಅನುಷ್ಠಾನಗೊಳಿಸಲು ಪ್ರತಿಯೊಬ್ಬರು ಕಸ ವಿಂಗಡಣೆ ನಿಯಮವನ್ನು ಕಡ್ಡಾಯವಾಗಿ ಮನೆ ಹಾಗೂ ಕಚೇರಿಯಲ್ಲಿ ಪಾಲಿಸಬೇಕು ನಾಲ್ಕು ರೀತಿಯ ಕಸ ವಿಂಗಡಣೆ ಅಂದರೆ ಹಸಿ, ಒಣ, ನೈರ್ಮಲ್ಯ ಮತ್ತು ವಿಶೇಷ ಕಾಳಜಿಯ ತ್ಯಾಜ್ಯ ಎಂದು ನಾಲ್ಕು ಭಾಗಗಳಲ್ಲಿ ಕಸವನ್ನು ವಿಂಗಡಿಸಬೇಕು. ಕಸ ವಿಂಗಡಣೆ ಮಾಡದಿದ್ದಲ್ಲಿ ದಂಡ ವಿಧಿಸಲಾಗುವುದು. ಕಸ ವಿಂಗಡಣೆ ಕುರಿತು ಜಿಲ್ಲೆಯಲ್ಲಿ ಅರಿವು ಕಾರ್ಯಕ್ರಮಗಳನ್ನು ಮಾಡಲಾಗುತ್ತಿದ್ದು, ಆಟೋ ಮೈಕ್ ಪ್ರಚಾರ ಕೈಗೊಳ್ಳಲಾಗಿದೆ. ಪ್ರತಿಯೊಬ್ಬರು ನೈರ್ಮಲ್ಯ ಕಾಪಾಡುವ ಮೂಲಕ ಸ್ವಚ್ಛ ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲೆಯನ್ನಾಗಿಸಬೇಕೆಂದು ತಿಳಿಸಿದರು. ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪೌರಕಾರ್ಮಿಕರುಗಳಿಗೆ ವಿಶ್ರಾಂತಿ ಕೊಠಡಿ, ಬೆಳಗಿನ ಉಪಹಾರ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಈಗಾಗಲೇ ರಾಮನಗರ ನಗರಸಭೆ ವ್ಯಾಪ್ತಿಯಲ್ಲಿ ವಿಶ್ರಾಂತಿ ಗೃಹ ನಿರ್ಮಿಸಲಾಗಿರುತ್ತದೆ. ಕನಕಪುರ, ಚನ್ನಪಟ್ಟಣ, ಮಾಗಡಿ ಹಾಗೂ ಹಾರೋಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಶ್ರಾಂತಿ ಗೃಹಗಳನ್ನು ಶೀಘ್ರವಾಗಿ ನಿರ್ಮಿಸಲು ಕ್ರಮವಹಿಸಬೇಕು ಎಂದು ಸೂಚಿಸಿದರು.

ಪೌರ ಕಾರ್ಮಿಕರು/ ಸ್ವಚ್ಚತಾ ಕಾರ್ಮಿಕರಿಗೆ ಹೆಪಟೈಟಿಸ್–ಬಿ, ಟಿ.ಬಿ., ಅಸ್ತಮಾ ಹಾಗೂ ಹೃದಯಕ್ಕೆ ಸಂಬಂಧಿಸಿದ ರೋಗಗಳನ್ನು ನಿಯಂತ್ರಿಸಲು ಜಿಲ್ಲಾ ಹಾಗೂ ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳಲ್ಲಿ ಆರೋಗ್ಯ ಪರೀಕ್ಷೆ ನಡೆಸಲಾಗುತ್ತಿದ್ದು, ಇದನ್ನು ನಿಯಮಿತವಾಗಿ ಅಂದರೆ ಪ್ರತೀ ಮೂರು ತಿಂಗಳಿಗೊಮ್ಮೆ ಕಡ್ಡಾಯವಾಗಿ ನಡೆಸಬೇಕು ಹಾಗೂ ಪೌರಕಾರ್ಮಿಕರು ಕಾರ್ಯನಿರ್ವಹಿಸಲು ಅವಶ್ಯವಿರುವ ಮಾಸ್ಕ್, ಗ್ಲೌಸ್, ಇತರೆ ಸಲಕರಣೆ–ಸಾಮಗ್ರಿಗಳನ್ನು ಸಮರ್ಪಕವಾಗಿ ಒದಗಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಧನರಾಜ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶಿವಕುಮಾರ್, ಡಾ. ಬಿ.ಆರ್. ಅಂಬೇಡ್ಕರ್ ಅವರ ಪುನರ್ವಸತಿ ಅಧಿನಿಯಮ 2013ರ ಸಮಿತಿ ಸದಸ್ಯರುಗಳಾದ ಆರ್. ನಾಗರಾಜು, ಚಲಪತಿ, ಡಾ. ಲೋಕೇಶ್ ಹಾಗೂ ಜೀವನ್ ಮೂರ್ತಿ ಸೇರಿದಂತೆ ನಗರಸಭೆಗಳ ಪೌರಾಯುಕ್ತರು, ಪುರಸಭೆ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯಿತಿ ಅಧಿಕಾರಿ, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಬೆಳಗಾವಿ ಅಧಿವೇಶನಕ್ಕೆ ವಿರೋಧ

ಬೆಳಗಾವಿ

ಜುಲೈ ಎರಡನೇ ವಾರದಲ್ಲಿ ಬೆಳಗಾವಿಯ ಸುವರ್ಣಸೌಧದಲ್ಲಿ ಮುಂಗಾರು ಅಧಿವೇಶನ ನಡೆಸುವ ಕುರಿತು ರಾಜ್ಯ ಸರ್ಕಾರ ಚಿಂತನೆ ನಡೆಸುತ್ತಿದ್ದು, ಸರ್ಕಾರದ ಪ್ರಸ್ತಾವನೆ ಚರ್ಚೆಗೆ ಗ್ರಾಸವಾಗಿದೆ.

ಇದೂವರೆಗೆ ಚಳಿಗಾಲದ ಅಧಿವೇಶನ ಮಾತ್ರ ಬೆಳಗಾವಿಯಲ್ಲಿ ನಡೆಯುತ್ತಿದ್ದು, ಬಜೆಟ್ ಹಾಗೂ ಮುಂಗಾರು ಅಧಿವೇಶನಗಳನ್ನು ಬೆಂಗಳೂರಿನ ವಿಧಾನಸೌಧದಲ್ಲೇ ನಡೆಸಲಾಗುತ್ತಿತ್ತು. ಇದೀಗ ಮೊದಲ ಬಾರಿಗೆ ಮುಂಗಾರು ಅಧಿವೇಶನವನ್ನೂ ಬೆಳಗಾವಿಯಲ್ಲಿ ನಡೆಸುವ ಕುರಿತು ಸರ್ಕಾರ ಚಿಂತನೆ ನಡೆಯುತ್ತಿದೆ.

ಮೂಲಗಳ ಪ್ರಕಾರ, ಜುಲೈ 13ರಿಂದ ಸುಮಾರು 10 ದಿನಗಳ ಕಾಲ ಅಧಿವೇಶನ ನಡೆಸುವ ಪ್ರಸ್ತಾವನೆ ಸರ್ಕಾರದ ಮುಂದಿಟ್ಟಿದೆ ಎನ್ನಲಾಗುತ್ತಿದೆ.

ಸರ್ಕಾರದ ಪ್ರಸ್ತಾವನೆಗೆ ಸಂಬಂಧಿಸಿದಂತೆ ಜಿಲ್ಲಾಡಳಿತ ಈಗಾಗಲೇ ಪ್ರಾಥಮಿಕ ಮಟ್ಟದಲ್ಲಿ ಸಭೆ ನಡೆಸಿ ಅಗತ್ಯ ಸಿದ್ಧತೆಗಳ ಬಗ್ಗೆ ಚರ್ಚೆ ನಡೆಸಿದೆ. ಆದರೆ, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಮುಂಗಾರು ಅಧಿವೇಶನದ ಸಿದ್ಧತೆ ಕುರಿತು ಅಧಿಕೃತ ನಿರ್ದೇಶನಗಳು ಇನ್ನೂ ಬಂದಿಲ್ಲ ಎಂದು ತಿಳಿಸಿದ್ದಾರೆ.

ಈ ಪ್ರಸ್ತಾವನೆ ಚರ್ಚೆಗೆ ಕಾರಣವಾಗಿರುವ ಪ್ರಮುಖ ಅಂಶವೆಂದರೆ ವೆಚ್ಚದ ಹೊರೆ. ಹಿಂದಿನ ಅಧಿವೇಶನಗಳಿಗೆ ಸಂಬಂಧಿಸಿದಂತೆ ಸರ್ಕಾರ ಇನ್ನೂ 45 ಲಕ್ಷ ರೂಪಾಯಿಗೂ ಅಧಿಕ ಹೋಟೆಲ್ ಬಿಲ್‌ಗಳನ್ನು ಪಾವತಿಸಬೇಕಿದೆ ಎಂದು ಮೂಲಗಳು ತಿಳಿಸಿವೆ. ಅಲ್ಲದೆ, ಸಂಚಾರ ನಿರ್ವಹಣೆ, ಭದ್ರತೆ ಮತ್ತು ಪ್ರತಿಭಟನೆಗಳನ್ನು ನಿಯಂತ್ರಿಸಲು ನಿರ್ಮಿಸಿದ್ದ ತಾತ್ಕಾಲಿಕ ಮೂಲಸೌಕರ್ಯಗಳಿಗೆ ಸಂಬಂಧಿಸಿದ ಕೆಲವು ಪಾವತಿಗಳೂ ಬಾಕಿ ಉಳಿದಿವೆ ಎಂದು ತಿಳಿದುಬಂದಿದೆ. ಮಾಹಿತಿ ಹಕ್ಕು ಕಾಯ್ದೆ ಅಡಿಯಲ್ಲಿ ಲಭ್ಯವಾದ ಮಾಹಿತಿಯ ಪ್ರಕಾರ, ಇತ್ತೀಚಿನ ಅಧಿವೇಶನಗಳ ಪ್ರತಿ ಅವಧಿಗೆ ಸರ್ಕಾರವು 14 ಕೋಟಿ ರೂಪಾಯಿಯಿಂದ 28 ಕೋಟಿ ರೂಪಾಯಿವರೆಗೆ ವೆಚ್ಚ ಮಾಡಿದೆ. ಶಾಸಕರು, ಅಧಿಕಾರಿಗಳ ವಸತಿ, ಭದ್ರತೆ, ಸಾರಿಗೆ ಹಾಗೂ ತಾತ್ಕಾಲಿಕ ಆಡಳಿತಾತ್ಮಕ ವ್ಯವಸ್ಥೆಗಳಿಗಾಗಿ ಈ ಹಣ ವ್ಯಯವಾಗಿತ್ತು.

ಚಳಿಗಾಲದ ಅಧಿವೇಶನಗಳ ವೇಳೆ 6,000ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗುತ್ತಿತ್ತು. ನಗರದ ವಿವಿಧ ಭಾಗಗಳಲ್ಲಿ ನೂರಾರು ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸುವುದು, ಬ್ಯಾರಿಕೇಡ್‌ಗಳನ್ನು ನಿರ್ಮಿಸುವುದು ಸೇರಿದಂತೆ ವ್ಯಾಪಕ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿತ್ತು.

ಮತ್ತೊಂದು ಪ್ರಮುಖ ಸವಾಲು ಎಂದರೆ ರೈತ ಸಂಘಟನೆಗಳು, ಕನ್ನಡ ಪರ ಸಂಘಟನೆಗಳು, ಕಾರ್ಮಿಕ ಸಂಘಗಳು ಹಾಗೂ ವಿವಿಧ ಹೋರಾಟಗಾರರಿಂದ ನಡೆಯುವ ಪ್ರತಿಭಟನೆಗಳು. ಅಧಿವೇಶನದ ಅವಧಿಯಲ್ಲಿ ಇಂತಹ ಪ್ರತಿಭಟನೆಗಳನ್ನು ನಿರ್ವಹಿಸುವುದು ಆಡಳಿತಕ್ಕೆ ದೊಡ್ಡ ತಲೆನೋವಾಗಿ ಪರಿಣಮಿಸುತ್ತದೆ.

ಆದಾಗ್ಯೂ, ಅಧಿವೇಶನದ ವೇಳೆ ಹೋಟೆಲ್‌ಗಳು, ಸಾರಿಗೆ, ರೆಸ್ಟೋರೆಂಟ್‌ಗಳು ಸೇರಿದಂತೆ ಸ್ಥಳೀಯ ವ್ಯಾಪಾರಿಗಳಿಗೆ ಉತ್ತಮ ವ್ಯವಹಾರ ದೊರೆಯುತ್ತದೆ.

ಒಟ್ಟಾರೆ, ಬೆಳಗಾವಿಯಲ್ಲಿ ಮಳೆಗಾಲ ಅಧಿವೇಶನ ನಡೆಸುವ ಸರ್ಕಾರದ ಪ್ರಸ್ತಾವನೆ ಪ್ರಾದೇಶಿಕ ಸಮತೋಲನದ ದೃಷ್ಟಿಯಿಂದ ಮಹತ್ವದ್ದಾಗಿದ್ದರೂ, ಅದರ ವೆಚ್ಚ ಮತ್ತು ಆಡಳಿತಾತ್ಮಕ ಸವಾಲುಗಳು ಈಗ ಚರ್ಚೆಯ ಕೇಂದ್ರಬಿಂದುವಾಗಿವೆ.

## ಕಾಂಗ್ರೆಸ್ ಭವನದ ಶಂಕುಸ್ಥಾಪನೆ ಮುಂದಕ್ಕೆ: ಡಿಕೆಶಿ

ಬೆಂಗಳೂರು

ಸಚಿವರ ಆಯ್ಕೆ ಕುರಿತು ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ಹೆಸರುಗಳು ಅಧಿಕೃತವಲ್ಲ. ಬುಧವಾರ ಬೆಳಗ್ಗೆ 10 ಗಂಟೆ ಅಥವಾ ಮಧ್ಯಾಹ್ನದ ವೇಳೆಗೆ ಹೈಕಮಾಂಡ್ ನಾಯಕರು ಸಚಿವರ ಪಟ್ಟಿಯನ್ನು ಅಧಿಕೃತವಾಗಿ ಬಿಡುಗಡೆ ಮಾಡಲಿದ್ದಾರೆ ಎಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಸದಾಶಿವನಗರ ನಿವಾಸದ ಬಳಿ ಮಂಗಳವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಸಚಿವರ ಆಯ್ಕೆ ಕುರಿತು ಹೈಕಮಾಂಡ್ ನಾಯಕರು ಚರ್ಚೆ ನಡೆಸಿದ್ದು, ರಾಜ್ಯ ನಾಯಕರ ಅಭಿಪ್ರಾಯವನ್ನು ತಿಳಿಸಲಾಗಿದೆ ಎಂದು ಹೇಳಿದರು.

"ಅಂತಿಮ ತೀರ್ಮಾನವನ್ನು ಹೈಕಮಾಂಡ್ ನಾಯಕರು ಕೈಗೊಳ್ಳಲಿದ್ದಾರೆ. ದೆಹಲಿ ನಾಯಕರು ಪಟ್ಟಿ ರವಾನೆ ಮಾಡಿದ ಬಳಿಕ ಅದನ್ನು ರಾಜಭವನಕ್ಕೆ ಕಳುಹಿಸಲಾಗುತ್ತದೆ" ಎಂದು ಮಾಹಿತಿ ನೀಡಿದರು.

"ಬುಧವಾರ ಸಂಜೆ ನಡೆಯಬೇಕಿದ್ದ ಕಾಂಗ್ರೆಸ್ ಭವನ ಶಂಕುಸ್ಥಾಪನೆ ಕಾರ್ಯಕ್ರಮವನ್ನು ಬೇರೆ ದಿನ ನಡೆಸಲು ತೀರ್ಮಾನಿಸಲಾಗಿದೆ. ಆಹ್ವಾನ ಪತ್ರಿಕೆ ಪಡೆದಿರುವ ಬ್ಲಾಕ್ ಹಾಗೂ ಜಿಲ್ಲಾ ಅಧ್ಯಕ್ಷರು, ಪದಾಧಿಕಾರಿಗಳು ಮತ್ತು ಗ್ಯಾರಂಟಿ ಸಮಿತಿಯ ಸದಸ್ಯರು ಕಾಂಗ್ರೆಸ್ ಕಚೇರಿಯ ಭಾರತ ಜೋಡೋ ಭವನಕ್ಕೆ ಆಗಮಿಸಬೇಕು" ಎಂದು ತಿಳಿಸಿದರು.

"ಸಚಿವ ಸಂಪುಟ ಸಭೆ ಮುಗಿಸಿ, ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವರನ್ನು ಬೀಳ್ಕೊಟ್ಟ ಬಳಿಕ ಭಾರತ ಜೋಡೋ ಭವನದಲ್ಲಿ ಭೇಟಿ ಮಾಡುವೆ" ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

## 'ಘನತ್ಯಾಜ್ಯ ಸಮರ್ಪಕ ನಿರ್ವಹಣೆಗೆ ಸಾರ್ವಜನಿಕರ ಸಹಕಾರ ಅಗತ್ಯ'

ಬೆಂ.ಗ್ರಾ.ಜಿಲ್ಲೆ

ಘನ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಬಿಸಾಡುವ ಬದಲು ಮನೆಗಳಲ್ಲಿ ಪ್ರತ್ಯೇಕವಾಗಿ ವಿಂಗಡಿಸಿ ನಗರಸಭೆ, ಪುರಸಭೆಯ ತ್ಯಾಜ್ಯ ಸಂಗ್ರಹ ವಾಹನಗಳಿಗೆ ಹಸ್ತಾಂತರಿಸುವ ಮೂಲಕ ಘನ ತ್ಯಾಜ್ಯ ಸಮರ್ಪಕ ನಿರ್ವಹಣೆಗೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ನಗರಾಭಿವೃದ್ಧಿ ಕೋಶ ವತಿಯಿಂದ ನಗರ ಸ್ಥಳೀಯ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಆಯೋಜಿಸಿದ್ದ ಘನತ್ಯಾಜ್ಯ ನಿರ್ವಹಣಾ ನಿಯಮಗಳು–2026 ರ ಅನುಷ್ಠಾನದ ಕುರಿತ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ರಾಜ್ಯಾದ್ಯಂತ ಸರ್ಕಾರವು ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026 ಅನ್ನು ಅನುಷ್ಠಾನಗೊಳಿಸಿದ್ದು, ಪ್ರತಿಯೊಬ್ಬರೂ ತಮ್ಮ ಮನೆಯ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯದೇ ಒಣ ತ್ಯಾಜ್ಯ, ಹಸಿ ತ್ಯಾಜ್ಯ, ಅಪಾಯಕಾರಿ ತ್ಯಾಜ್ಯ ಹಾಗೂ ಕಪ್ಪು ತ್ಯಾಜ್ಯವಾಗಿ ನಾಲ್ಕು ವಿಭಾಗದಲ್ಲಿ ತ್ಯಾಜ್ಯ ವಿಂಗಡಿಸಿ, ಸ್ವಚ್ಛ ವಾಹಿನಿ ವಾಹನಕ್ಕೆ ನೀಡುವಲ್ಲಿ ಸಹಕರಿಸಬೇಕು. ಇದರಿಂದ ಸ್ವಚ್ಛ ಹಾಗೂ ಸುಂದರ ವಾತಾವರಣ ನಿರ್ಮಿಸಲು ಸಹಕಾರಿಯಾಗುತ್ತದೆ ಎಂದರು.

ನಾವು ಎಲ್ಲೆಂದರಲ್ಲಿ ಕಸ ಎಸೆಯುವುದರಿಂದ ನಮ್ಮ ಆರೋಗ್ಯದ ಮೇಲೆಯೇ ದುಷ್ಪರಿಣಾಮ ಬೀರುತ್ತದೆ ಎನ್ನುವ ಸ್ಪಷ್ಟ ಅರಿವು ಸಾರ್ವಜನಿಕರಲ್ಲಿ ಇರಬೇಕು. ಪೌರಾಡಳಿತ ಅಥವಾ ಸ್ಥಳೀಯ ಸಂಸ್ಥೆಗಳ ಸ್ವಚ್ಛ ವಾಹಿನಿ ವಾಹನ ಮನೆ ಬಾಗಿಲಿಗೆ ಬಂದಾಗ ವಿಂಗಡಿಸಿದ ಕಸವನ್ನು ಪ್ರತ್ಯೇಕವಾಗಿ ಸಂಗ್ರಹಿಸಿಕೊಡುವಂತೆ ಸಾರ್ವಜನಿಕರಿಗೆ ಅರಿವು ಮೂಡಿಸಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯ ಸ್ಥಳೀಯ ಜನಪ್ರತಿನಿಧಿಗಳು ಸರ್ಕಾರಿ ಉದ್ದೇಶಗಳಿಗೆ ಸೂಕ್ತ ಜಾಗ ಕೊಡಿಸಲು ಪ್ರಯತ್ನಿಸಬೇಕು. ಜತೆಗೆ ತಮ್ಮ ವ್ಯಾಪ್ತಿಯಲ್ಲಿ ತ್ಯಾಜ್ಯ ನಿರ್ವಹಣೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ಕೆ ಮುಂದಾಗಬೇಕು ಎಂದು ಹೇಳಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಬಿ.ಎಸ್ ರಮೇಶ್ ಮಾತನಾಡಿ, ಘನತ್ಯಾಜ್ಯ ನಿರ್ವಹಣೆ ನಿಯಮಗಳು–2026 ಅನ್ನು ಏಪ್ರಿಲ್ 1, 2026 ರಂದು ಜಾರಿಗೆ ಬಂದಿದ್ದು, ಭಾರತವನ್ನು ಸ್ವಚ್ಛ, ಆರೋಗ್ಯಕರ ಮತ್ತು ಹೆಚ್ಚು ಸುಸ್ಥಿರವಾಗಿಸುವ ಗುರಿಯನ್ನು ಹೊಂದಿವೆ.

ಹಸಿ ತ್ಯಾಜ್ಯ: ಆಹಾರದ ತುಣುಕುಗಳು, ತರಕಾರಿ ಸಿಪ್ಪೆಗಳು ಮತ್ತು ಅಡುಗೆ ತ್ಯಾಜ್ಯ.

ಒಣ ತ್ಯಾಜ್ಯ: ಕಾಗದ, ಪ್ಲಾಸ್ಟಿಕ್, ಲೋಹ ಮತ್ತು ಗಾಜು. ವಿಶೇಷ ಆರೈಕೆ ತ್ಯಾಜ್ಯ: ಬ್ಯಾಟರಿಗಳು, ಔಷಧಗಳು, ಬಲ್ಬ್‌ಗಳು ಮತ್ತು ಅಂತಹುದೇ ವಸ್ತುಗಳು ನಾಲ್ಕು–ಮಾರ್ಗಗಳಲ್ಲಿ ಬೇರ್ಪಡಿಸುವುದು ಕಡ್ಡಾಯ ಎಂದರು.

# ಸಮತೋಲನ ಗೊಬ್ಬರಗಳ ಬಳಕೆಗೆ ಕರೆ

ರಾಮನಗರ

ರೈತರು ಸಮತೋಲನ ಗೊಬ್ಬರ ಬಳಕೆಗೆ ಆದ್ಯತೆ ನೀಡಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಅಂಬಿಕಾ ಅವರು ತಿಳಿಸಿದರು.

ರಾಮನಗರದ ಉಪ ಕೃಷಿ ಕಚೇರಿಯಲ್ಲಿ ಬೆಂಗಳೂರಿನ ಜಿಕೆವಿಕೆ ಕೃಷಿ ವಿಶ್ವವಿದ್ಯಾಲಯದ ಆಶ್ರಯದಲ್ಲಿ ಹಾಗೂ ಅಖಿಲ ಭಾರತ ಸುಸಂಘಟಿತ ಖುಷ್ಕಿ ಬೆಳೆ ಪ್ರಯೋಜನೆ ಮತ್ತು ಕೇಂದ್ರ ಪುರಸ್ಕೃತ ಆತ್ಮ ಯೋಜನೆಯ ಸಹಯೋಗದಲ್ಲಿ ಸಮತೋಲನ ಗೊಬ್ಬರಗಳ ಬಳಕೆಯ ಕುರಿತು ಜಾಗೃತಿ ಮೂಡಿಸಲು ಆಯೋಜಿಸಲಾಗಿದ್ದ ವಿಶೇಷ ಆಂದೋಲನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಣ್ಣಿನ ಆರೋಗ್ಯ ಕಾಪಾಡಲು ಹಾಗೂ ಉತ್ತಮ ಉತ್ಪಾದನೆ ಪಡೆಯಲು ಸಮತೋಲನ ಗೊಬ್ಬರ ಬಳಕೆ ಅಗತ್ಯವೆಂದು ಹೇಳಿದರು.

ಪ್ರಯೋಜನೆಯ ಮುಖ್ಯಸ್ಥರಾದ ಡಾ. ಮೂಡಲಗಿರಿಯಪ್ಪ ಅವರು, ಮಣ್ಣಿನ ಪರೀಕ್ಷೆಯ ಆಧಾರದ ಮೇಲೆ ಗೊಬ್ಬರ ಬಳಕೆ ಮಾಡುವ ಮಹತ್ವವನ್ನು ತಿಳಿಸಿ, ವೈಜ್ಞಾನಿಕ ವಿಧಾನಗಳನ್ನು ಅನುಸರಿಸಿದರೆ ಉತ್ತಮ ಫಲಿತಾಂಶ ದೊರೆಯುತ್ತದೆ ಎಂದರು.

ಸಂಪನ್ಮೂಲ ವ್ಯಕ್ತಿಗಳಾದ ಡಾ. ವೆಂಕಟಗೌಡ ಅವರು, ಮಣ್ಣಿನ ಆರೋಗ್ಯ ಕಾಪಾಡಲು ಹಸಿರೆಲೆ ಗೊಬ್ಬರಗಳ ಬಳಕೆ ಅತ್ಯಂತ ಉಪಯುಕ್ತ, ಹಸಿರೆಲೆ ಗೊಬ್ಬರಗಳು ಮಣ್ಣಿಗೆ ಅಗತ್ಯವಾದ ಸಾವಯವ ದ್ರವ್ಯವನ್ನು ಹೆಚ್ಚಿಸಿ, ಮಣ್ಣಿನ ರಚನೆ ಸುಧಾರಿಸಲು ಸಹಾಯ ಮಾಡುತ್ತವೆ ಎಂದು ಹೇಳಿದರು.

ಹಸಿರೆಲೆ ಗೊಬ್ಬರ ಬೆಳೆಗಳಾದ ಅಪ್ಸೆಣಬು, ಚಂಬೆ, ಹುರಳಿ ಹಾಗೂ ಇತರ ಎಲ್ಲಾ ದ್ವಿದಳ ಧಾನ್ಯ ಬೆಳೆಗಳು ಮಣ್ಣಿನಲ್ಲಿ ನೈಸರ್ಗಿಕವಾಗಿ ನೈಟ್ರೋಜನ್ ಸ್ಥಿರೀಕರಣ ಮಾಡುವುದರಿಂದ ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸುತ್ತವೆ, ಈ ಬೆಳೆಗಳನ್ನು 40–45 ದಿನಗಳಲ್ಲಿ ಬೆಳೆಸಿ, ನಂತರ ಮಣ್ಣಿನಲ್ಲಿ ಮಿಶ್ರಣ ಮಾಡಿದರೆ ಉತ್ತಮ ಫಲಿತಾಂಶ ದೊರೆಯುತ್ತದೆ ಎಂದು ಹೇಳಿದರು.

ಹಸಿರೆಲೆ ಗೊಬ್ಬರಗಳಲ್ಲಿ ಮುಖ್ಯವಾಗಿ ನೈಟ್ರೋಜನ್ ಅಂಶ ಹೆಚ್ಚು ಇರುವುದರ ಜೊತೆಗೆ, ಕೆಲವು ಪ್ರಮಾಣದಲ್ಲಿ ಫಾಸ್ಫರಸ್ ಮತ್ತು ಪೊಟಾಶ್ ಅಂಶಗಳೂ ಲಭ್ಯವಿರುತ್ತವೆ. ಉದಾಹರಣೆಗೆ, ಅಪ್ಸೆಣಬು ಬೆಳೆ ಹೆಚ್ಚು ನೈಟ್ರೋಜನ್ ಒದಗಿಸುವುದರಿಂದ ಮುಂದಿನ ಬೆಳೆಗಳಿಗೆ ಪೋಷಕಾಂಶಗಳ ಕೊರತೆ ಆಗುವುದಿಲ್ಲ ಎಂದು ತಿಳಿಸಿದರು.

ಹಸಿರೆಲೆ ಗೊಬ್ಬರಗಳ ಬಳಕೆಯಿಂದ ಮಣ್ಣಿನ ತೇವಾಂಶ ಕಾಯ್ದುಕೊಳ್ಳಲು ಸಹಾಯವಾಗುತ್ತದೆ, ಕೀಟ ಹಾಗೂ ರೋಗಗಳ ಪ್ರಭಾವ ಕಡಿಮೆಯಾಗುತ್ತದೆ ಹಾಗೂ ರಾಸಾಯನಿಕ ಗೊಬ್ಬರಗಳ ಮೇಲಿನ ಅವಲಂಬನೆ ಕಡಿಮೆಯಾಗುತ್ತದೆ, ಹಸಿರೆಲೆ ಗೊಬ್ಬರಗಳನ್ನು ರೈತರು ತಮ್ಮ ಬೆಳೆ ಚಕ್ರದಲ್ಲಿ ಅಳವಡಿಸಿಕೊಂಡರೆ, ದೀರ್ಘಕಾಲಿಕವಾಗಿ ಮಣ್ಣಿನ ಆರೋಗ್ಯವನ್ನು ಉಳಿಸಿಕೊಳ್ಳಬಹುದು ಮತ್ತು ಉತ್ತಮ ಉತ್ಪಾದನೆ ಪಡೆಯಬಹುದು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕನಕಪುರ, ಮಾಗಡಿ ಹಾಗೂ ಚನ್ನಪಟ್ಟಣ ತಾಲೂಕುಗಳ ಸಹಾಯಕ ಕೃಷಿ ನಿರ್ದೇಶಕರು ಮತ್ತು ಜಿಲ್ಲೆಯ ಎಲ್ಲಾ ತಾಲೂಕುಗಳಿಂದ ರೈತರು ಭಾಗವಹಿಸಿದ್ದರು.

# ಇ–ಪೌತಿ ಖಾತೆ ಸೃಜಸಿ ತುಮಕೂರು ಜಿಲ್ಲೆ ರಾಜ್ಯಕ್ಕೆ ಪ್ರಥಮ

ತುಮಕೂರು

ಸರ್ಕಾರದ ನಿರ್ದೇಶನದಂತೆ ಜಾರಿಯಲ್ಲಿರುವ ಇ–ಪೌತಿ ಖಾತಾ ಆಂದೋಲನದಲ್ಲಿ ತುಮಕೂರು ಜಿಲ್ಲೆ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ಗಮನಾರ್ಹ ಸಾಧನೆ ಮಾಡಿದೆ.

ಜಿಲ್ಲೆಯಲ್ಲಿ ಇದುವರೆಗೆ ಒಟ್ಟು 80,262 ಇ–ಪೌತಿ ಖಾತೆಗಳು ಯಶಸ್ವಿಯಾಗಿ ಸೃಜಿಸಲ್ಪಟ್ಟಿದ್ದು, ಈ ಮೂಲಕ ತುಮಕೂರು ಜಿಲ್ಲೆ ರಾಜ್ಯದಲ್ಲೇ ಮೊದಲ ಸ್ಥಾನವನ್ನು ಅಲಂಕರಿಸಿದೆ.

ಈ ಮಹತ್ವದ ಸಾಧನೆಗೆ ಗ್ರಾಮ ಆಡಳಿತಾಧಿಕಾರಿಗಳು, ರಾಜಸ್ವ ನಿರೀಕ್ಷಕರು, ಶಿರಸ್ತೆದಾರರು, ಭೂಮಿ ತಂತ್ರಾಂಶದ ತಾಂತ್ರಿಕ ಸಮಾಲೋಚಕರಾದ ಬಿಲ್ವ ಪ್ರಸಾದ್ ಮತ್ತು ನಂದಕುಮಾರ್ ಸಮನ್ವಯದ ಸಹಕಾರ ಪ್ರಮುಖ ಕಾರಣವಾಗಿದೆ.

ಈ ಬಗ್ಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಜಿಲ್ಲೆಯ ಎಲ್ಲಾ ಕಂದಾಯ ಇಲಾಖೆ ಸಿಬ್ಬಂದಿಯನ್ನು ಅಭಿನಂದಿಸಿ, ಇದೇ ಉತ್ಸಾಹ ಮತ್ತು ಬದ್ಧತೆಯಿಂದ ಸಾರ್ವಜನಿಕ ಸೇವೆಯಲ್ಲಿ ಮತ್ತಷ್ಟು ಉತ್ತಮ ಸಾಧನೆ ಮಾಡಲು ಕರೆ ನೀಡಿದ್ದಾರೆ.

# ಮೇ.1ರಂದು ಕೆಜಿಎಫ್‌ನಲ್ಲಿ ಬುದ್ಧ ಜಯಂತಿ ಕಾರ್ಯಕ್ರಮ

ಕೆಜಿಎಫ್

ಕೆಜಿಎಫ್ ನಗರದ ಅಶೋಕ ದಮ್ಮಧೂತ ಬುದ್ದ ಸಂಘದ ಆಧ್ಯಾತ್ಮಕ ಮಂದಿರದಲ್ಲಿ ಮೇ.1 ರಂದು ಶುಕ್ರವಾರ ಬುದ್ದ ಜಯಂತಿಯ ಆಚರಣೆ ಕಾರ್ಯಕ್ರಮ ವೈಶಾಖ ಬುದ್ದ ಹುಣ್ಣಿಮೆಯ 2570ನೇ ಪವಿತ್ರ ಬುದ್ದ ಜಯಂತಿ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಡಾ॥ ಎಂ.ಆರ್.ರವಿ ಅವರು ಭಾಗವಹಿಸುವರು.

ಮಹಾ ಬುದ್ದ ಸಂಸ್ಥೆಯ ವತಿಯಿಂದ ವೈಶಾಖ ಬುದ್ದ ಹುಣ್ಣಿಮೆಯ 2570ನೇ ಪವಿತ್ರ ಬುದ್ದ ಜಯಂತೋತ್ಸವದ ಅಂಗವಾಗಿ ಧಮ್ಮ ಪಾದಉತ್ಸವವು ಇದೇ ಬುದ್ದ ಹುಣ್ಣಿಮೆಯ ಆಚರಣೆ ಕಾರ್ಯಕ್ರಮ ಸಂದರ್ಭದಲ್ಲಿ ವಿಶೇಷವಾದ ರೀತಿಯಲ್ಲಿ ನಡೆಯಲಿದೆ.

ಬೆಂಗಳೂರು ಮಹಾಬೋಧಿ ಸಮಾಜದ ಭಂತೇಜಿ ಧಮ್ಮಚಿತ್ತ ಮಹಾತೀರ, ಕಾರ್ಯದರ್ಶಿ ಭಂತೇಜಿಜೀನವಾಸಂ ಬಿಕ್ಕು, ಅಶೋಕ ದಮ್ಮದತ್ತ ಬೌದ್ದ ಸಮಾಜದ ಕಾರ್ಯದರ್ಶಿ ಭಂತೇಜಿ ಖೇಮಿಂಡೋ ಅವರುಗಳ ಸಾನ್ನಿಧ್ಯದಲ್ಲಿ ಹಲವಾರು ಭಂತೇಜಿಗಳು, ಉಪಾಸಕರು ಮತ್ತು ಉಪಾಸಿಕರು ಭಕ್ತಿಭಾವದಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿ ಧಾರ್ಮಿಕ ವಿಧಿವಿಧಾನಗಳನ್ನು ನಡೆಸಿಕೊಡುವರು.

ವೈಶಾಖ ಬುದ್ದ ಹುಣ್ಣಿಮೆಯ 2570ನೇ ಪವಿತ್ರ ಬುದ್ದ ಜಯಂತಿ ಹಾಗೂ ಬುದ್ದ ಹುಣ್ಣಿಮೆಯ ಆಚರಣೆ ಕಾರ್ಯಕ್ರಮದಲ್ಲಿ ಸಮಸ್ತ ನಾಗರೀಕ ಬಂಧುಗಳು, ಬುದ್ದನ ಅನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಲು ಬುದ್ದ ಸಂಘದ ಉಪಾಸಕ ಡಾ॥ ಆರ್.ಪ್ರಭುರಾಂ ಅವರು ಕೋರಿದ್ದಾರೆ.

ಮೇ.1 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ನಡೆಯುವ ಧಮ್ಮ ಪಾದ ಉತ್ಸವ ಹಾಗೂ ಬುದ್ದ ಜಯಂತಿಯ ಆಚರಣೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಜಿಲ್ಲಾಧಿಕಾರಿ ಡಾ॥ ಎಂ.ಆರ್.ರವಿ ಅವರನ್ನು ಬುದ್ದಗುರು ಕೆಮೆಂಡೋ ಬಂತೇಜಿ, ಉಪಾಸಕ ಡಾ॥ ಆರ್.ಪ್ರಭುರಾಂ ಅವರುಗಳು ಸಾಂಪ್ರದಾಯಿಕವಾಗಿ ಆಮಂತ್ರಿಸಿದರು.

# ಬಿದರಹಳ್ಳಿ ಕ್ರಾಸ್ ಲಕ್ಷ್ಮೀನರಸಿಂಹಸ್ವಾಮಿಗೆ ಏ.30ರಂದು ತಿರುಕಲ್ಯಾಣೋತ್ಸವ ಸಂಭ್ರಮ

ಕೋಲಾರ

ಕೋಲಾರ–ಬೆಂಗಳೂರು ರಸ್ತೆಯ ಬಿದರಹಳ್ಳಿ ಕ್ರಾಸ್‌ನಲ್ಲಿರುವ ಶ್ರೀಲಕ್ಷ್ಮೀನರಸಿಂಹ ಸ್ವಾಮಿ ದೇವಾಲಯದಲ್ಲಿ ಸ್ವಾಮಿಯ 10ನೇ ವರ್ಷದ ವಾರ್ಷಿಕೋತ್ಸವ ಹಾಗೂ ಜಯಂತಿ,ತಿರುಕಲ್ಯಾಣೋತ್ಸವ ಕಾರ್ಯಕ್ರಮಗಳನ್ನು ಏ.30 ರಂದು ಹಮ್ಮಿಕೊಳ್ಳಲಾಗಿದೆ ಎಂದು ದೇವಾಲಯದ ವ್ಯವಸ್ಥಾಪಕರಾದ ಸಿ.ವಿ.ಶಂಕರಮೂರ್ತಿ ತಿಳಿಸಿದ್ದಾರೆ.

ಏ.30 ರಂದು ಬೆಳಗ್ಗೆ 6–30 ಗಂಟೆಗೆ ಸುಪ್ರಭಾತ ಸೇವೆ,ವೇದ ಪಾರಾಯಣ, ಮೂಲ ದೇವರಿಗೆ ಫಲ ಪಂಚಾಮೃತ, ಅಭಿಷೇಕ, ವಿಶೇಷ ಅಲಂಕಾರವಿದೆ, ಇದೇ ಸಂದರ್ಭದಲ್ಲಿ ಗಣಹೋಮ, ನವಗ್ರಹಹೋಮ, ಮೃತ್ಯುಂಜಯ ಹೋಮ, ಲಕ್ಷ್ಮೀ ನರಸಿಂಹಸ್ವಾಮಿ ಮೂಲ ಮಂತ್ರಹೋಮ ನಡೆಯಲಿದ್ದು, ಕುರುಬೂರಿನ ಭುವನೇಶ್ವರಿ ಕನ್ನಡ ಕಲಾ ಸಂಘದಿಂದ ಭಜನೆ ಸೇವೆ ಇದೆ. ಬೆಳಗ್ಗೆ 10–30ಕ್ಕೆ ತಿರುಕಲ್ಯಾಣೋತ್ಸವ ಏರ್ಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ಅನ್ನದಾಸೋಹವನ್ನು ಕೆ.ಆರ್.ಪುರಂನ ಶೈಲಜಾ ಮತ್ತು ಶ್ರೀಮನೋಹರ್ ಕುಟುಂಬದವರು ಹಮ್ಮಿಕೊಂಡಿದ್ದು, ಹರಿದಾಸ ಸಂಘದ ಅಧ್ಯಕ್ಷ ಹರಾ ನಾಗರಾಜಚಾರ್ಯರು ಉಪಸ್ಥಿತರಿರುವರು.

# ತುಮಕೂರು ವಿವಿಯಲ್ಲಿ ರಾಜ್ಯ ಮಟ್ಟದ ಮಾಧ್ಯಮ ಉತ್ಸವ

ತುಮಕೂರು

ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ ಹಾಗೂ ವಿಶ್ವವಿದ್ಯಾನಿಲಯ ಕಲಾ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ವತಿಯಿಂದ ಮೇ 18 ಮತ್ತು 19 ರಂದು 'ಇಂಪ್ರೆಷನ್–2026' ರಾಜ್ಯಮಟ್ಟದ ಮಾಧ್ಯಮ ಉತ್ಸವವನ್ನು ಹಮ್ಮಿಕೊಳ್ಳಲಾಗಿದೆ. ಇದರ ಪೋಸ್ಟರ್ ಅನ್ನು ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಎಂ. ವೆಂಕಟೇಶ್ವರಲು ಮಂಗಳವಾರ ಅನಾವರಣಗೊಳಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಾಧ್ಯಮ ಉತ್ಸವವು ವಿದ್ಯಾರ್ಥಿಗಳ ಸೃಜನಶೀಲತೆ ಹಾಗೂ ಪ್ರತಿಭೆಯನ್ನು ಅಭಿವ್ಯಕ್ತಿಸಲು ಪರಿಣಾಮಕಾರಿ ವೇದಿಕೆಯಾಗಲಿ. ರಾಜ್ಯದ ವಿವಿಧ ಭಾಗಗಳ ವಿದ್ಯಾರ್ಥಿಗಳು ತುಮಕೂರು ವಿಶ್ವವಿದ್ಯಾನಿಲಯಕ್ಕೆ ಬಂದು ಭಾಗವಹಿಸುವುದಕ್ಕೆ ಅವಕಾಶವಾಗಲಿ ಎಂದು ಶುಭ ಹಾರೈಸಿದರು.

ಮಾಧ್ಯಮ ಹಬ್ಬವು ವಿಶ್ವವಿದ್ಯಾನಿಲಯದ ಸರ್ ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ "ಸೃಜಿಸಿ, ಸಂವಹಿಸಿ, ಆಕರ್ಷಿಸಿ – ಮಾಧ್ಯಮದ ಧ್ವನಿಯಾಗಿ" ಎಂಬ ಘೋಷವಾಕ್ಯದೊಂದಿಗೆ ನಡೆಯಲಿದೆ. ಹನ್ನೆರಡು ವಿವಿಧ ಬಗೆಯ ಏಕವ್ಯಕ್ತಿ ಮತ್ತು ಗುಂಪು ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಸ್ಪರ್ಧೆಗಳ ವಿವರ: ಏಕವ್ಯಕ್ತಿ ಸ್ಪರ್ಧೆಗಳು: ವರದಿಗಾರಿಕೆ, ಟಿವಿ ಸುದ್ದಿ ಪ್ರಸ್ತುತಿ, ರೇಡಿಯೋ ಜಾಕಿ, ಛಾಯಾಗ್ರಹಣ, ಪೋಸ್ಟರ್ ವಿನ್ಯಾಸ, ಪುಟ್ಟಕತೆ, ರೀಲ್ಸ್ ಮೇಕಿಂಗ್, ಪೀಸ್ ಟು ಕ್ಯಾಮೆರಾ. ಗುಂಪು ಸ್ಪರ್ಧೆಗಳು: ಚರ್ಚಾ ಸ್ಪರ್ಧೆ, ರಸಪ್ರಶ್ನೆ, ಜಾಹೀರಾತು ನಿರ್ಮಾಣ, ಸಮೂಹ ನೃತ್ಯ ಸ್ಪರ್ಧೆ.

ಈ ಸ್ಪರ್ಧೆ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಸೀಮಿತವಾಗಿಲ್ಲ. ಯಾವುದೇ ಪದವಿ ಅಥವಾ ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಈ ಸ್ಪರ್ಧೆಗಳಲ್ಲಿ ಭಾಗವಹಿಸಬಹುದು. ವಿಜೇತರಿಗೆ ಆಕರ್ಷಕ ನಗದು ಬಹುಮಾನ, ಸ್ಮರಣಿಕೆ ಹಾಗೂ ಪ್ರಶಸ್ತಿ ಪತ್ರಗಳನ್ನು ನೀಡಲಾಗುವುದು.

ಆಸಕ್ತ ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ವಿಭಾಗದ ಸಂಯೋಜಕರಾದ ಡಾ.ಸಿಬಂತಿ ಪದ್ಮನಾಭ ಕೆ.ವಿ 9449525854 ಅಥವಾ ವಿದ್ಯಾರ್ಥಿ ಸಂಚಾಲಕರಾದ ಪ್ರದೀಪ್ ಡಿ.ಎಸ್ 6362099062 ಇವರನ್ನು ಸಂಪರ್ಕಿಸಬಹುದು.

# 'ಮೂಲದಲ್ಲಿಯೇ ಕಸ ವಿಂಗಡಿಸಿ ಪರಿಸರ ಉಳಿಸಿ'



ಶ್ರೀನಿವಾಸಪುರ

ಪಟ್ಟಣದ ಪುರಸಭಾ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಪುರಸಭೆಯ ಪೌರಕಾರ್ಮಿಕರಿಗೆ ಕಸ ವಿಂಗಣೆ ಕುರಿತು ತಿಳುವಳಿಕೆ ನೀಡಲಾಯಿತು.

ಪುರಸಭೆ ಮುಖ್ಯಾಧಿಕಾರಿ ವಿ.ನಾಗರಾಜ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಪೌರ ಕಾರ್ಮಿಕರು ಮೂಲದಲ್ಲಿಯೇ ಹಸಿ ಕಸ, ಒಣ ಕಸ ಹಾಗೂ ಪ್ಲಾಸ್ಟಿಕ್ ತ್ಯಾಜ್ಯವನ್ನು ವಿಂಗಡಿಸಿಕೊಳ್ಳಬೇಕು. ಹಾಗೆ ಮಾಡುವುದರಿಂದ ಕಸದ ಸಂಸ್ಕರಣೆ ಸುಲಭವಾಗುತ್ತದೆ ಎಂದು ಹೇಳಿದರು.

ಪಟ್ಟಣದ ನಾಗರಿಕರು ತಮ್ಮ ಮನೆಯಲ್ಲಿನ ತ್ಯಾಜ್ಯ ವಸ್ತುಗಳನ್ನು ನಿಯಮಾನುಸಾರ ವಿಂಗಡಿಸಿ ಪೌರ ಕಾರ್ಮಿಕರಿಗೆ ನೀಡುವುದರ ಮೂಲಕ ಸಹಕರಿಸಬೇಕು. ಪಟ್ಟಣದ ಸ್ವಚ್ಛತೆಗೆ ಪೂರಕವಾಗಿ ನಡೆದುಕೊಳ್ಳಬೇಕು ಎಂದು ಹೇಳಿದರು.

ಮೇ.1 ರಂದು ಪಟ್ಟಣದಲ್ಲಿ ಸ್ವಚ್ಛತಾ ಆಂದೋಲನ ಏರ್ಪಡಿಸಲಾಗಿದೆ. ಆ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಭಾಗವಹಿಸುವುದರ ಮೂಲಕ ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ಪುರಸಭೆ ಆರೋಗ್ಯ ನಿರೀಕ್ಷಕ ವಿಜಯಕುಮಾರ್ ಮಾತನಾಡಿ, ಸ್ವಚ್ಛತೆ ನಾಗರಿಕತೆಯ ಮುಖ್ಯ ಲಕ್ಷಣ.

ಪಟ್ಟಣದ ನಾಗರಿಕರು ವೈಯಕ್ತಿಕ ಸ್ವಚ್ಛತೆಗೆ ನೀಡುವಷ್ಟೇ ಪ್ರಾಮುಖ್ಯತೆಯನ್ನು ಪಟ್ಟಣದ ಸ್ವಚ್ಛತೆಗೆ ನೀಡಬೇಕು. ಅದಕ್ಕೆ ಪೂರಕವಾಗಿ ಕಸವನ್ನು ವಿಂಗಡಿಸಿ ಪೌರ ಕಾರ್ಮಿಕರಿಗೆ ನೀಡಬೇಕು ಎಂದು ಹೇಳಿದರು.

ಕಂದಾಯ ಅಧಿಕಾರಿ ಶಂಕರ್, ಪರಿಸರ ಅಭಿಯಂತರ ಲಕ್ಷ್ಮೀಶ, ಕಿರಿಯ ಆರೋಗ್ಯ ನಿರೀಕ್ಷಕ ಟಿ.ವಿ.ಸುರೇಶ್, ಪೌರಕಾರ್ಮಿಕರ ಮೇಸ್ತ್ರೀ ಬಾಲಕೃಷ್ಣ, ಸಿಬ್ಬಂದಿ ಸಂತೋಷ್, ನಾಗರಾಜ್, ಪ್ರಕಾಶ್, ಚೇತನ್ ಇದ್ದರು.

# 'ಗೋಮಾತೆಯನ್ನು ರಾಷ್ಟ್ರೀಯ ಪ್ರಾಣಿಯಾಗಿ ಘೋಷಿಸಬೇಕು'



ಕನಕಪುರ

ರೈತರ ಜೀವನಾಡಿಯಾಗಿರುವ ಹಾಗೂ ಹಿಂದುಗಳು ಪೂಜಿಸುವ ಗೋಮಾತೆ ಅಳಿವಿನ ಅಂಚಿನಲ್ಲಿದ್ದು, ಅದರ ರಕ್ಷಣೆಗೆ ಗೋಮಾತೆಯನ್ನು ರಾಷ್ಟ್ರೀಯ ಪ್ರಾಣಿಯಾಗಿ ಘೋಷಿಸಬೇಕು ಎಂದು ಶ್ರೀರಾಮ ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗಾರ್ಜುನ್ ಗೌಡ ಒತ್ತಾಯಿಸಿದರು.

ಗೋ ರಕ್ಷಣೆ ಮತ್ತು ಗೋವಂಶ ಸಂರಕ್ಷಣೆಗಾಗಿ ರಾಷ್ಟ್ರವ್ಯಾಪಿ ನಡೆಯುತ್ತಿರುವ ಅಭಿಯಾನದ ಅಂಗವಾಗಿ, ತಾಲ್ಲೂಕು ಆಡಳಿತದ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು. ಭಾರತೀಯ ಸಂಸ್ಕೃತಿ, ಕೃಷಿ, ಆರ್ಥಿಕತೆ ಹಾಗೂ ಆರೋಗ್ಯ ವ್ಯವಸ್ಥೆಯ ಪ್ರಮುಖ ಅಂಗವಾಗಿರುವ ಗೋವುಗಳು ಇಂದು ನಿರ್ಲಕ್ಷ್ಯ ಮತ್ತು ದುರ್ಬಲ ನೀತಿಗಳಿಂದ ಸಂಕಷ್ಟಕ್ಕೀಡಾಗಿವೆ ಎಂದು ವಿಷಾದ ವ್ಯಕ್ತಪಡಿಸಿದರು.

ಗೋಮಾತೆಯ ರಕ್ಷಣೆ ಕೇವಲ ಧಾರ್ಮಿಕ ವಿಷಯವಲ್ಲ, ಅದು ರಾಷ್ಟ್ರದ ಅಸ್ತಿತ್ವ, ರೈತರ ಬದುಕು ಮತ್ತು ಪರಿಸರ ಸಮತೋಲನಕ್ಕೆ ಸಂಬಂಧಿಸಿದ ಮಹತ್ವದ ವಿಚಾರವಾಗಿದೆ. ಸರ್ಕಾರಗಳು ಮಾತಿನಲ್ಲಿ ಮಾತ್ರ ಗೋಭಕ್ತಿ ತೋರಿಸುತ್ತಿದ್ದು, ನೆಲಮಟ್ಟದಲ್ಲಿ ಗೋವಂಶದ ಸ್ಥಿತಿ ದಯನೀಯವಾಗಿದೆ ಎಂದು ಆರೋಪಿಸಿದರು.

ಗೋವನ್ನು ರಾಷ್ಟ್ರೀಯ ಪ್ರಾಣಿಯಾಗಿ ಘೋಷಿಸುವುದು ಕಾಲದ ಅವಶ್ಯಕತೆಯಾಗಿದೆ. ಇದು ಭಾವನಾತ್ಮಕ ವಿಷಯವಷ್ಟೇ ಅಲ್ಲದೆ, ದೇಶದ ಕೃಷಿ ಮತ್ತು ಆರೋಗ್ಯದ ಭವಿಷ್ಯಕ್ಕೆ ಸಂಬಂಧಿಸಿದೆ. ಸರ್ಕಾರಗಳು ಇನ್ನೂ ಮೌನವಾಗಿದ್ದರೆ ಜನರ ಆಕ್ರೋಶವನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಶ್ರೀರಾಮ ಸೇನೆಯ ವತಿಯಿಂದ ನಡೆಯುತ್ತಿರುವ ಸಹಿ ಸಂಗ್ರಹ ಅಭಿಯಾನದಡಿ, ತಾಲ್ಲೂಕಿನಲ್ಲಿ ಜನರಿಂದ ಬೆಂಬಲ ಸಂಗ್ರಹಿಸಲಾಗುತ್ತಿದೆ. 90677 77323 ಸಂಖ್ಯೆಗೆ ಮಿಸ್ ಕಾಲ್ ಮಾಡುವ ಮೂಲಕ ಜನರು ತಮ್ಮ ಬೆಂಬಲ ಸೂಚಿಸಬಹುದು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾಧ್ಯಕ್ಷ ಪರಮೇಶ್ ಗೌಡ, ವಿಭಾಗೀಯ ಅಧ್ಯಕ್ಷ ನವೀನ್, ಪ್ರ. ಕಾರ್ಯದರ್ಶಿ ಸಾಗರ್ ಹಾಗೂ ಪದಾಧಿಕಾರಿಗಳಾದ ಚೀರಣಕುಪ್ಪೆ ಕುಮಾರ್, ರಾಜೇಶ್, ರಮೇಶ್, ಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಮನವಿ ಪತ್ರವನ್ನು ತಹಶೀಲ್ದಾರ್ ಸಂಜಯ್ ಅವರ ಮೂಲಕ ರಾಜ್ಯಪಾಲರಿಗೆ ಸಲ್ಲಿಸಲಾಯಿತು.

# ಹಳೆ ವಿದ್ಯಾರ್ಥಿಗಳಿಂದ ಸಬರಮತಿ ಪ್ರೌಢಶಾಲೆಯಲ್ಲಿ ಗುರುವಂದನೆ: ಸ್ನೇಹಸಮ್ಮಿಲನ

ಕೋಲಾರ

ಅಕ್ಷರ ಕಲಿಸಿದ ಗುರುವನ್ನು ಮರೆಯದೇ 24 ವರ್ಷಗಳ ನಂತರವೂ ಸ್ಮರಿಸುವ ಕೆಲಸಕ್ಕೆ ಮುಂದಾಗಿರುವ ಹಳೆ ವಿದ್ಯಾರ್ಥಿಗಳ ಕಾರ್ಯ ಶಾಲೆಯ ಮಕ್ಕಳಿಗೆ ಆದರ್ಶವಾಗಿದೆ ಎಂದು ತಾಲ್ಲೂಕಿನ ಸುಗಟೂರು ಸಬರಮತಿ ಪ್ರೌಢಶಾಲೆ ಆಡಳಿತಾಧಿಕಾರಿ ಬಿ.ವೆಂಕಟೇಶ್ ಹರ್ಷ ವ್ಯಕ್ತಪಡಿಸಿದರು.

ಶಾಲೆಯ ಆವರಣದಲ್ಲಿ 2000–01ನೇ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಮುಗಿಸಿದ್ದ ನೂರಾರು ವಿದ್ಯಾರ್ಥಿಗಳು ಒಟ್ಟುಗೂಡಿ 'ನಮ್ಮ ಶಾಲೆ ನಮ್ಮ ಹೆಮ್ಮೆ'ಕಾರ್ಯಕ್ರಮದಡಿ ಗುರುಗಳನ್ನು ಸ್ಮರಿಸುವ ಆಯೋಜಿಸಿದ್ದ ಸ್ನೇಹಮಿಲನ ಹಾಗೂ ಗುರುವಂದನೆ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

3 ವರ್ಷಗಳ ಕಾಲ ಮಕ್ಕಳಿಗೆ ನೀಡಿದ ನೈತಿಕ ಶಿಕ್ಷಣದಿಂದಲೇ ಇಂದು ಹಳೆ ವಿದ್ಯಾರ್ಥಿಗಳು ಮತ್ತೆ ಶಾಲೆಯತ್ತ ಬಂದು ಅಕ್ಷರ ಕಲಿಸಿದ ಗುರುಗಳ ಋಣ ತೀರಿಸುವ ಕೆಲಸ ಮಾಡುತ್ತಿದ್ದಾರೆ. ಶಾಲೆಗಳನ್ನು ಮುನ್ನಡೆಸುವುದ ಕಷ್ಟದ ಕೆಲಸವಾಗಿದೆ ಇಂತಹ ಸಂದರ್ಭದಲ್ಲೂ 54 ವರ್ಷ ಶಾಲೆಯನ್ನು ಮುನ್ನಡೆಸಿದ್ದು, ಇಂದು 1800 ಮಕ್ಕಳು ಓದುತ್ತಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಶಾಲೆಯ ಕೊಠಡಿಗಳಿಗೆ ಕಿಟಕಿಗಳನ್ನು ಕಕೊಡುಗೆಯಾಗಿ ನೀಡಿದ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ನಿವೃತ್ತ ಶಿಕ್ಷಕರಾದ ಜಿ.ನಂಜುಂಡಪ್ಪ, ಎನ್.ಶ್ರೀನಿವಾಸರೆಡ್ಡಿ, ಧಾನಪ್ರಕಾಶ್ ಮತ್ತಿತರರು ಮಾತನಾಡಿ, ನಿವೃತ್ತರಾದ ನಂತರವೂ 20 ವರ್ಷಗಳ ಹಿಂದಿನ ಶಿಷ್ಯರು ಸ್ಮರಿಸಿ ಕರೆದಿರುವುದು ಅತಿ ಹೆಚ್ಚು ಸಂತಸ ಉಂಟು ಮಾಡಿದೆ ಎಂದು ತಿಳಿಸಿದರು.

ಗುರಿ ಸಾಧನೆಗೆ ಗುರು ಇರಬೇಕು ಎಂಬ ಮಾತಿದೆ ಆದರೆ ಇತ್ತೀಚಿನ ದಿನಗಳಲ್ಲಿ ಗುರುವನ್ನು ಮರೆಯುವ ಸಂಸ್ಕೃತಿ ಹೆಚ್ಚಿದೆ ಎಂದ ಅವರು, ಇಂತಹ ಪರಿಸ್ಥಿತಿಯಲ್ಲೂ ಗುರುಗಳನ್ನು ನೆನಪು ಮಾಡಿಕೊಂಡಿರುವ ಹಳೆ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಇದೇ ಸಂದರ್ಭದಲ್ಲಿ ಹಾಲಿ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದ ಅವರು, ತಂದೆ,ತಾಯಿ ದುಡಿದು, ಕೂಲಿ ಮಾಡಿ ನಿಮ್ಮನ್ನು ಶಾಲೆಗೆ ಕಳುಹಿಸಿದ್ದಾರೆ, ನೀವು ಚೆನ್ನಾಗಿ ಓದುವ ಮೂಲಕ ಅವರ ಆಶಯಗಳನ್ನು ಈಡೇರಿಸುವ ಸಂಕಲ್ಪ ಹೊಂದಿರಬೇಕು, ಗುರುಹಿರಿಯರನ್ನು ಗೌರವಿಸುವ ಸಂಸ್ಕಾರ ಬೆಳೆಸಿಕೊಳ್ಳಿ, ವಿದ್ಯೆಗೆ ವಿನಯವೇ ಆಭರಣ ಎಂಬುದನ್ನು ಮರೆಯದಿರಿ ಎಂದು ಹೇಳಿದರು.

ಹಳೆ ವಿದ್ಯಾರ್ಥಿಗಳಾದ ಶ್ಯಾಮಲ, ರಾಮಾಂಜಿ, ಕಮಲ,ಉಮಾಶಂಕರ್, ಸುಭಾಷ್‌ಚಂದ್ರಬೋಸ್, ಮತ್ತಿತರರು ಕಾರ್ಯಕ್ರಮದ ಉಸ್ತುವಾರಿ ವಹಿಸಿದ್ದು, ಸ್ಪರ್ಧಾತ್ಮಕ ಯುಗದಲ್ಲಿ ಯಾರಲ್ಲಿ ಶ್ರಮ,ಕನಸು, ಪ್ರಯತ್ನ ಇರುತ್ತದೆಯೋ ಅವರು ಮಾತ್ರ ಬೆಳೆಯುತ್ತಾರೆ, ಎಸ್ಸೆಸ್ಸೆಲ್ಸಿ ಟರ್ನಿಂಗ್ ಪಾಯಿಂಟ್ ಆಗಿದ್ದು, ಇಲ್ಲೇ ನಿಮ್ಮ ಮುಂದಿನ ಭವಿಷ್ಯದ ಹಾದಿ ನಿರ್ಧಾರವಾಗುತ್ತದೆ ಎಂದರು.

ಪ್ರಪಂಚ ಇಂದು ಗ್ಲೋಬಲ್ ವಿಲೇಜ್ ಆಗಿದೆ,ಕಂಪ್ಯೂಟರ್ ಜ್ಞಾನವಿಲ್ಲದಿದ್ದರೆ ಮುಂದಿನ ದಿನಗಳಲ್ಲಿ ಅಂತಹವರನ್ನೇ ಅನಕ್ಷರಸ್ಥರೆಂದು ಪರಿಗಣಿಸುವ ಕಾಲ ಬರಲೂಬಹುದು ಎಂದು ತಿಳಿಸಿ, ಮಕ್ಕಳು ಇಂದಿನಿಂದಲೇ ಕಂಪ್ಯೂಟರ್ ಜ್ಞಾನ ಬೆಳೆಸಿಕೊಳ್ಳಿ ಎಂದರು. ಇದೇ ಸಂದರ್ಭದಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಶಾಲೆಯ ನಾಲ್ವರು ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಯಿತು. ಕಾರ್ಯಕ್ರಮದಲ್ಲಿ ಶಿಕ್ಷಕರಾದ ಪಿ.ಎಂ.ನಾರಾಯಣ ಸ್ವಾಮಿ, ಎಸ್.ಆರ್.ಮೋಹನ್, ಎನ್.ಶ್ರೀರಾಮರೆಡ್ಡಿ, ಸಿ.ನಾರಾಯಣಸ್ವಾಮಿ, ಕೆಂಚೇಗೌಡ, ವಿಶ್ವನಾಥ್, ನಾರಾಯಣಸ್ವಾಮಿ, ನಾಗಭೂಷಣ್, ಅನಂತಪದ್ಮನಾಭ್, ಹೆಚ್.ನಾರಾಯಣಸ್ವಾಮಿ, ಆರ್.ವೆಂಕಟೇಶ್, ಸಿ.ವೆಂಕಟೇಶಪ್ಪ, ಬಾಲಕೃಷ್ಣ, ಕೆ.ವಿ.ರಾಜಣ್ಣ ಮತ್ತಿತರರಿದ್ದರು.

# ಮುಂದಿನ ಚುನಾವಣೆಯಲ್ಲಿ ಸ್ಪರ್ಧೆ ಖಚಿತ

ಗುಡಿಬಂಡೆ

ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ನಾನು ಬಾಗೇಪಲ್ಲಿ–ಗುಡಿಬಂಡೆ ವಿಧಾನಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡುವುದು ಖಚಿತ, ಸದಾ ಜನರ ಬಳಿಯಿರುವ ನಾನು ಜನರ ಬಳಿಗೆ ಹೋಗಿ ಮತ ಹಾಕುವಂತೆ ಕೇಳಿಕೊಳ್ಳುತ್ತೇನ, ಜನ ನನಗೆ ಆರ್ಶೀವಾದ ಮಾಡುತ್ತಾರೆ ಎಂದು ಮುಖಂಡ ಡಿ.ಜೆ.ನಾಗರಾಜರೆಡ್ಡಿ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಮ್ಮ ಬೆಂಬಲಿಗರೊಂದಿಗೆ ಸಭೆ ನಡೆಸಿ ಬಳಿಕ ಮಾದ್ಯಮಗಳೊಂದಿಗೆ ಮಾತನಾಡಿದ ಅವರು, ನಾನು ಕ್ಷೇತ್ರದಲ್ಲಿ ನಿರಂತರವಾಗಿ ಜನರ ಸಂಪರ್ಕದಲ್ಲಿದ್ದೇನೆ. ಜನರ ಕಷ್ಟಸುಖಗಳಲ್ಲಿ ಭಾಗಿಯಾಗುತ್ತಿದ್ದೇನೆ. ಜನರಿಗೆ ನನ್ನ ಮೇಲೆ ಒಲವು ಇದೆ. ಕಳೆದ ಚುನಾವಣೆಯಲ್ಲೂ ಸಹ ನಾನು ಅಭ್ಯರ್ಥಿಯ ಆಕಾಂಕ್ಷಿಯಾಗಿದ್ದೆ. ಆದರೆ ಕೆಲವೊಂದು ಕಾರಣಗಳಿಂದ ನಾನು ಚುನಾವಣಾ ಕಣದಿಂದ ಹಿಂದೆ ಸರಿಯಬೇಕಾಯ್ತು. ಇದೇ ರೀತಿ ಪ್ರತೀ ಚುನಾವಣೆಯಲ್ಲೂ ನಡೆಯುತ್ತಿದೆ. ಜೆಡಿಎಸ್ ಪಕ್ಷದ ನಿಷ್ಟಾವಂತ ಕಾರ್ಯಕರ್ತನಾದ ನಾನು ಪಕ್ಷಕ್ಕಾಗಿ ದುಡಿದಿದ್ದೆ, ಆದರೆ ಚುನಾವಣೆಯ ಕೊನೆಯ ಕ್ಷಣದಲ್ಲಿ ನನಗೆ ಟಿಕೆಟ್ ಕೈ ತಪ್ಪಿತ್ತು. ಆದ ಕಾರಣ ನಾನು ಚುನಾವಣೆಯಿಂದ ಹಿಂದೆ ಸರಿಯಬೇಕಾಯ್ತು. ಈ ಬಾರಿ ನಾನು ಯಾವುದೇ ಕಾರಣಕ್ಕೂ ಚುನಾವಣಾ ಕಣದಿಂದ ಹಿಂದೆ ಸರಿಯುವುದಿಲ್ಲ ಎಂದರು.



ಇನ್ನೂ ಈ ಬಾರಿ ನಾನು ಯಾವುದೇ ಪಕ್ಷದಿಂದ ಸ್ಪರ್ಧೆ ಮಾಡುವುದಿಲ್ಲ. ಬದಲಿಗೆ ಸ್ವತಂತ್ರ ಅಭ್ಯರ್ಥಿಯಾಗಿ ಚುನಾವಣಾ ಕಣದಲ್ಲಿರುತ್ತೇನೆ. ಆದರೆ ಕ್ಷೇತ್ರದಲ್ಲಿ ಕೆಲವೊಂದು ಮಾತುಗಳು ಕೇಳಿಬರುತ್ತಿದ್ದು, ಅದರಂತೆ ನಾನು ಈ ಬಾರಿ ಸಿಪಿಎಂ ಪಕ್ಷದಿಂದ ಸ್ಪರ್ಧೆ ಮಾಡುವಂತೆ ಹಲವರು ಮಾತನಾಡುತ್ತಿದ್ದಾರೆ. ಪಕ್ಷದಲ್ಲೂ ಸಹ ಈ ಕುರಿತು ಚರ್ಚೆ ನಡೆದಿದೆ ಎನ್ನಲಾಗಿದ್ದು, ಒಂದು ವೇಳೆ ಸಿಪಿಎಂ ಪಕ್ಷದಿಂದ ಅವಕಾಶ ಸಿಕ್ಕರೇ ಸ್ಪರ್ಧೆ ಮಾಡಲು ಸಿದ್ದನಿರುತ್ತೇನೆ. ಕೆಲವೊಂದು ವೈಯುಕ್ತಿಕ ಕಾರಣಗಳಿಂದ ನಾನು ಕ್ಷೇತ್ರದಲ್ಲಿ ಸರಿಯಾಗಿ ಕಾಣಿಸಿಕೊಂಡಿಲ್ಲ, ಇನ್ನೂ ಸದಾ ಕ್ಷೇತ್ರದ ಜನತೆಯ ಸಮಸ್ಯೆಗಳಿಗೆ ಸ್ಪಂಧನೆ ನೀಡುತ್ತೇನೆ ಎಂದರು.

ಇನ್ನೂ ಕ್ಷೇತ್ರದಲ್ಲಿ ಹಾಲಿ ಶಾಸಕರು ಸಾಕಷ್ಟು ಅಕ್ರಮಗಳನ್ನು ಮಾಡಿದ್ದಾರೆ. ಅವರ ವಿರುದ್ದ ನಾನು ಹೋರಾಟ ಮಾಡುತ್ತೇನೆ. ಅವರು ಯಾವುದೇ ಅಕ್ರಮಗಳನ್ನು ಮಾಡಿಲ್ಲ ಎಂದು ಸಾಬೀತು ಮಾಡಲಿ ಅಥವಾ ಒಂದೇ ವೇದಿಕೆಗೆ ಬರಲಿ ನಾನು ಚರ್ಚೆ ಮಾಡಲು ಸಿದ್ದನಿದ್ದೇನೆ. ಅವರ ವಿರುದ್ದ ಸಿಬಿಐ ತನಿಖೆ ಮಾಡಲು ನಾನು ಒತ್ತಾಯಿಸುತ್ತೇನೆ. ಕ್ಷೇತ್ರದಲ್ಲಿ ಸಾಕಷ್ಟು ಎಕರೆಗಳು ಜಮೀನನ್ನು ಅಕ್ರಮವಾಗಿ ಖರೀದಿ ಮಾಡಿದ್ದಾರೆ. ಅವರ ವಿರುದ್ದ ಅಕ್ರಮಗಳನ್ನು ಹಂತ ಹಂತವಾಗಿ ಬಯಲು ಮಾಡುತ್ತೇನೆ. ನಾನು ಸ್ವಚ್ಚ ರಾಜಕಾರಣ ಮಾಡಲು ರಾಜಕಾರಣಕ್ಕೆ ಬಂದಿದ್ದೇನೆ ಹೊರತು ಹಣ ಅಥವಾ ಆಸ್ತಿ ಸಂಪಾದನೆ ಮಾಡುವುದಕ್ಕಲ್ಲ ಎಂದರು.

ಈ ವೇಳೆ ಡಿ.ಜೆ.ನಾಗರಾಜರೆಡ್ಡಿಯವರ ಬೆಂಬಲಿಗರಾದ ಸೀತಾರಾಮಪ್ಪ, ವರ್ಲಕೊಂಡ ದೇವರಾಜು ಸೇರಿದಂತೆ ಹಲವರು ಹಾಜರಿದ್ದರು.

# ಒಂದೇ ಕುಟುಂಬದ ನಾಲ್ವರ ವಿರುದ್ಧ ಜಾಮೀನು ರಹಿತ ವಾರಂಟ್

ಬೆಂಗಳೂರು

ಸಾರ್ವಜನಿಕರಿಗೆ ಕೋಟ್ಯಂತರ ರೂಪಾಯಿ ವಂಚಿಸಿ ತಲೆಮರೆಸಿಕೊಂಡಿರುವ ಒಂದೇ ಕುಟುಂಬದ ನಾಲ್ವರು ಆರೋಪಿಗಳ ಪತ್ತೆಗಾಗಿ ಬೆಂಗಳೂರು ನಗರದ ಜಯನಗರ ಪೊಲೀಸ್ ಠಾಣೆಯು ಪ್ರಕಟಣೆ ಹೊರಡಿಸಿದೆ.

ಜಯನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಮೊಕದ್ದಮೆ ಸಂಖ್ಯೆ 182/2025, ಕಲಂ 318, 3(5) ಬಿ.ಎನ್.ಎಸ್ ಮತ್ತು ಕಲಂ 21 ಬಡ್ಸ್ ಕಾಯ್ದೆಯಡಿ ಈ ಕ್ರಮ ಕೈಗೊಳ್ಳಲಾಗಿದೆ. ಆರೋಪಿಗಳು ಸಾರ್ವಜನಿಕರಿಂದ ಹಣ ಪಡೆದು ನಂಬಿಕೆ ದ್ರೋಹ ಎಸಗಿದ್ದು, ಪ್ರಸ್ತುತ ಇವರ ವಿರುದ್ಧ ನ್ಯಾಯಾಲಯದಿಂದ ಜಾಮೀನು ರಹಿತ ವಾರಂಟ್ ಹೊರಡಿಸಲಾಗಿದೆ.

ಆರೋಪಿಗಳಾದ ಶ್ರೀಮತಿ ಸುಧಾ: ಗಂಡ ಸಿದ್ದಾಚಾರಿ (48 ವರ್ಷ), ಸಿದ್ದಾಚಾರಿ: ತಂದೆ ರಾಮಚಾರಿ (56 ವರ್ಷ), ಯಶವಂತ್: ತಂದೆ ಸಿದ್ದಚಾರಿ (28 ವರ್ಷ) ಮತ್ತು ಕುಮಾರಿ ಆರೋಪಿಗಳು ಸದ್ಯ ತಲೆಮರೆಸಿಕೊಂಡಿದ್ದು, ಇವರ ಬಗ್ಗೆ ಯಾವುದೇ ಮಾಹಿತಿ ಲಭ್ಯವಿದ್ದಲ್ಲಿ ಕೂಡಲೇ ದೂರವಾಣಿ ಸಂಖ್ಯೆ: 9480800155 ಮತ್ತು 080–22094445ಗಳಿಗೆ ಕರೆ ಮಾಡಿ ಮಾಹಿತಿ ನೀಡುವಂತೆ ಪೊಲೀಸರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಮಾಹಿತಿ ನೀಡುವವರ ವಿವರಗಳನ್ನು ಗೌಪ್ಯವಾಗಿಡಲಾಗುವುದು ಎಂದು ಜಯನಗರ ಠಾಣೆಯ ಇನ್ಸಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತನ ಹತ್ಯೆ: ತನಿಖೆ ಚುರುಕು

ಬಂಗಾರಪೇಟೆ

ತಾಲೂಕು ಗಡಿಗೆ ಹೊಂದಿಕೊಂಡಿರುವ ಆಂಧ್ರ ಪ್ರದೇಶದ ಚಿತ್ತೂರು ಜಿಲ್ಲೆಯ ವೆಂಕಟಗಿರಿ ಕೋಟೆ(ವಿಕೋಟೆ) ಯಲ್ಲಿ ವರದಿಗಾರ ಜಗನ್ಮೋಹನ್ ರೆಡ್ಡಿ ಅವರ ಭೀಕರ ಹತ್ಯೆ ಪ್ರಕರಣವು ರಾಜ್ಯಾದ್ಯಂತ ಸಂಚಲನ ಮೂಡಿಸಿದೆ.

ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ದಾಳಿ ನಡೆಸಿ ಅವರನ್ನು ನಿರ್ದಯವಾಗಿ ಕೊಂದಿರುವುದು ತಿಳಿದುಬಂದಿದ್ದು, ಈ ಘಟನೆ ಪತ್ರಕರ್ತರು ಸೇರಿದಂತೆ ಸಾರ್ವಜನಿಕರಲ್ಲಿ ಭೀತಿ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ.



ಹತ್ಯೆ ಪ್ರಕರಣದ ತನಿಖೆಯನ್ನು ಪೊಲೀಸರು ತೀವ್ರಗೊಳಿಸಿದ್ದು, ಇತ್ತೀಚೆಗೆ ಜೈಲಿನಿಂದ ಬಿಡುಗಡೆಯಾದ ರೌಡಿ ಶೀಟರ್ ಒಬ್ಬನ ಮೇಲೆ ಪ್ರಮುಖ ಅನುಮಾನ ವ್ಯಕ್ತವಾಗಿದೆ. ಆತನ ಚಲನವಲನಗಳ ಬಗ್ಗೆ ಪೊಲೀಸರು ಮಾಹಿತಿ ಸಂಗ್ರಹಿಸುತ್ತಿದ್ದು, ಪ್ರಕರಣದ ನಿಖರ ಕಾರಣವನ್ನು ಪತ್ತೆಹಚ್ಚಲು ಹಲವು ಕೋಣಗಳಲ್ಲಿ ತನಿಖೆ ನಡೆಸುತ್ತಿದ್ದಾರೆ.

ವೈಯಕ್ತಿಕ ವೈಷಮ್ಯವೇ ಅಥವಾ ವೃತ್ತಿ ಸಂಬಂಧಿತ ಕಾರಣವೇ ಎಂಬುದರ ಬಗ್ಗೆ ಇನ್ನೂ ಸ್ಪಷ್ಟತೆ ಲಭ್ಯವಾಗಿಲ್ಲ. ಈ ಘಟನೆಯನ್ನು ಖಂಡಿಸಿರುವ ಪಲ್ಲಾ ಶ್ರೀನಿವಾಸರಾವ್, ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಮಾಧ್ಯಮ ಪ್ರತಿನಿಧಿಗಳ ಮೇಲೆ ದಾಳಿ ಅಸಹ್ಯಕರ ಎಂದು ತಿಳಿಸಿದ್ದಾರೆ. ಆರೋಪಿಗಳನ್ನು ಶೀಘ್ರ ಬಂಧಿಸಿ ಕಠಿಣ ಶಿಕ್ಷೆ ನೀಡಬೇಕೆಂದು ಅವರು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಹತ್ಯೆಗೆ ಒಳಗಾದ ಜಗನ್ಮೋಹನ್ ರೆಡ್ಡಿ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥನೆ ಸಲ್ಲಿಸಲಾಗಿದ್ದು, ಕುಟುಂಬದವರಿಗೆ ಸಂತಾಪ ಸೂಚಿಸಲಾಗಿದೆ. ಪ್ರಕರಣದ ಸತ್ಯಾಂಶ ತಿಳಿಯಲು ಪೊಲೀಸರು ವ್ಯಾಪಕ ತನಿಖೆಯನ್ನು ಮುಂದುವರೆಸಿದ್ದಾರೆ.

04/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026

ತುಮಕೂರು

ಜೂನ್ 30ರಿಂದ ಆರಂಭವಾಗಲಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ಸಂದರ್ಭದಲ್ಲಿ ಮತಗಟ್ಟೆ ಅಧಿಕಾರಿಗಳು ನೀಡುವ ಗಣತಿ ನಮೂನೆ ಭರ್ತಿ ಮಾಡಿ ಸಲ್ಲಿಸಿದಲ್ಲಿ ಮಾತ್ರ ಪರಿಷ್ಕೃತ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರಲಿದೆ. ಮತದಾರರು ತಪ್ಪದೆ ನಮೂನೆ ಭರ್ತಿ ಮಾಡಿ ತಮ್ಮ ಮತಗಟ್ಟೆ ಅಧಿಕಾರಿಗಳಿಗೆ ಅವಧಿಯೊಳಗೆ ಸಲ್ಲಿಸುವಂತೆ ತಿಳಿಸಿದ್ದಾರೆ.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 (ಎಸ್‌ಐಆರ್) ಸಂಬಂಧ ನಗರದ ಕೇಂದ್ರ ಗ್ರಂಥಾಲಯದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಅವರು, ಜೂನ್ 20ರಿಂದ 29ರವರೆಗೆ ತರಬೇತಿ, ನಮೂನೆಗಳ ಮುದ್ರಣ ಇತ್ಯಾದಿ ತಯಾರಿಗಳನ್ನು ಮಾಡಿಕೊಂಡು ಜೂನ್ 30ರಿಂದ ಜುಲೈ 29ರವರೆಗೆ ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ತೆರಳಿ ಮತದಾರರ ಪಟ್ಟಿಯ ಮಾಹಿತಿಯ ಗಣತಿ ನಮೂನೆಯನ್ನು ನೀಡಲಿದ್ದಾರೆ.

2025ರ ಮತದಾರರ ಪಟ್ಟಿಯಲ್ಲಿರುವಂತೆ ಸಂಬಂಧಿಸಿದ ಮಾಹಿತಿ ಈಗಾಗಲೇ ಮುದ್ರಣವಾಗಿರುತ್ತದೆ. ಉಳಿದ ಮಾಹಿತಿಯನ್ನು ನಿಗದಿತ ಅವಧಿಯಲ್ಲಿ ಆ ಮನೆಯ ಮತದಾರರು ತುಂಬಿ ನಿರ್ದಿಷ್ಟ ದಾಖಲೆಯೊಂದಿಗೆ ಮರಳಿ ಮತಗಟ್ಟೆ ಅಧಿಕಾರಿಗೆ ನೀಡಬೇಕು. ಒಂದೊಮ್ಮೆ ಅದನ್ನು ಸಲ್ಲಿಸದಿದ್ದಲ್ಲಿ ಅವರ ಹೆಸರು ಅಂತಿಮ ಮತದಾರರ ಪಟ್ಟಿಯಿಂದ ಹೊರಗುಳಿಯಲಿದೆ ಎಂದು ಅವರು ತಿಳಿಸಿದರು.



ಮತದಾರರ ಪಟ್ಟಿ ಪರಿಷ್ಕರಣೆ ಒಂದು ನಿರಂತರ ಪ್ರಕ್ರಿಯೆ, ಅಲ್ಲಿ ಕೇವಲ ಮತದಾರರ ಹೆಸರು ಸೇರ್ಪಡೆ, ತೆಗೆಯುವುದು ಹಾಗೂ ವಿಳಾಸ ಬದಲಾವಣೆ ನಡೆಯುತ್ತದೆ.

ಯಾವೊಬ್ಬ ಮತದಾರರೂ ಮತದಾನದಿಂದ ಹೊರಗುಳಿಯಬಾರದು ಹಾಗೂ ಪ್ರತಿಯೊಬ್ಬರಿಗೂ ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆಯಲ್ಲಿ ಭಾಗವಹಿಸುವ ಅವಕಾಶ ದೊರಕಿಸುವಂತೆ ಮಾಡುವ ಉದ್ದೇಶದಿಂದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಈ ಪ್ರಕ್ರಿಯೆ ದೇಶದಲ್ಲಿ ಇದೇ ಮೊದಲಲ್ಲ ಹಾಗೂ ಕರ್ನಾಟಕದಲ್ಲಿ ಕೂಡ 2002ರಲ್ಲಿ ಸಮಗ್ರ ಪರಿಷ್ಕರಣೆ ಆಗಿದ್ದು ಈಗ 2026ರಲ್ಲಿ ಮಾಡಲಾಗುತ್ತಿದೆ. ಇದು ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳು ರಾಜ್ಯದ ಎಲ್ಲ ಜಿಲ್ಲಾ ಚುನಾವಣಾಧಿಕಾರಿಗಳಿಗೆ ತರಬೇತಿ ನೀಡಿದ್ದು, ಅದರಂತೆ ತುಮಕೂರು ಜಿಲ್ಲೆಯಲ್ಲಿ ಕೂಡ ಈ ಪ್ರಕ್ರಿಯೆ ನಡೆಯಲಿದೆ ಎಂದು ಅವರು ವಿವರಿಸಿದರು.

ಅದರಂತೆ ಅಕ್ಟೋಬರ್ 1ರಂದು ಅರ್ಹತಾ ದಿನಾಂಕ ಪ್ರಕಟಿಸಲಿದ್ದು, ಜೂನ್ 30ರಿಂದ ಜುಲೈ 29ರವರೆಗೆ ಮತಗಟ್ಟೆ ಅಧಿಕಾರಿಗಳು ಮನೆ ಮನೆ ಭೇಟಿ, ಜುಲೈ 29ರಂದು ಮತಗಟ್ಟೆಗಳ ಕ್ರಮಬದ್ಧಗೊಳಿಸುವಿಕೆ, ಆಗಸ್ಟ್ 5 ಮತದಾರರ ಪಟ್ಟಿ ಕರಡು ಪ್ರಕಟ, ಆಗಸ್ಟ್ 5ರಿಂದ ಸೆಪ್ಟೆಂಬರ್ 4ರವರೆಗೆ ಆಕ್ಷೇಪಣೆಗಳಿಗೆ ಅವಕಾಶ ಹಾಗೂ ಆಗಸ್ಟ್ 5ರಿಂದ ಅಕ್ಟೋಬರ್ 3ರವರೆಗೆ ಆಕ್ಷೇಪಣೆಗಳನ್ನು ಸರಿಪಡಿಸಿಕೊಳ್ಳಲು ಅವಕಾಶ ಹಾಗೂ ಅಂತಿಮವಾಗಿ ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ಅವರು ತಿಳಿಸಿದರು.

ತುಮಕೂರು ಜಿಲ್ಲೆಯಲ್ಲಿ ಒಟ್ಟು 2356 ಮತಗಟ್ಟೆಗಳನ್ನು ಗುರುತಿಸಲಾಗಿದ್ದು, ಎಲ್ಲೆಡೆ ಮತಗಟ್ಟೆ ಅಧಿಕಾರಿಗಳು ಇರಲಿದ್ದಾರೆ. 2025ರ ಮತದಾರರ ಪಟ್ಟಿಯಂತೆ ಜಿಲ್ಲೆಯ ಒಟ್ಟು 11 ವಿಧಾನಸಭಾ ಕ್ಷೇತ್ರಗಳಲ್ಲಿ ಪುರುಷ ಹಾಗೂ ಮಹಿಳೆಯರು ಸೇರಿ ಒಟ್ಟು 22,98,096 ಮತದಾರರಿದ್ದು, ಈ ಎಲ್ಲ ಮತದಾರರ ಗಣತಿಯೂ ಸಮಗ್ರ ಪರಿಷ್ಕರಣೆಯಲ್ಲಿ ಆಗಲಿದೆ. ಈ ಅವಧಿಯಲ್ಲಿ ಮತದಾರರ ಪಟ್ಟಿಯಲ್ಲಿದ್ದು, ಮೃತಪಟ್ಟವರ ಹೆಸರು ಕೈಬಿಡುವ, 18 ತುಂಬಿರುವ ಹೊಸ ಮತದಾರರನ್ನು ಸೇರ್ಪಡೆಗೊಳಿಸುವ ಹಾಗೂ ಸ್ಥಳಾಂತರಗೊಂಡ ಮತದಾರರು ಸೇರಿದಂತೆ ಸಂಪೂರ್ಣ ಪಟ್ಟಿಯ ಸಮಗ್ರ ಪರಿಷ್ಕರಣೆ ಈ ಹಂತದಲ್ಲಿ ಆಗಲಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಗಣತಿ ನಮೂನೆ ಸಲ್ಲಿಕೆಯ ನಂತರ ಕರಡು ಪಟ್ಟಿಯಲ್ಲಿ ಎಲ್ಲ ಮತಗಟ್ಟೆ, ಗ್ರಾಮ ಪಂಚಾಯ್ತಿ ವಾರ್ಡುಗಳು, ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳಲ್ಲಿ ಹಾಗೂ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

ಈ ಹಂತದಲ್ಲಿ ಮಾಹಿತಿ ತಪ್ಪಾಗಿದ್ದರೆ, ಬಿಟ್ಟು ಹೋಗಿದ್ದರೆ ಆಕ್ಷೇಪಣಾ ಅವಧಿಯಲ್ಲಿ ತಮ್ಮ ಆಕ್ಷೇಪಣೆಯನ್ನು ಮತದಾರರು ಸಲ್ಲಿಸಬಹುದು. ಇದಕ್ಕಾಗಿ ಎರಡು ತಿಂಗಳ ಕಾಲಾವಧಿ ಇರುವುದರಿಂದ ಯಾವ ಮತದಾರರೂ ಪಟ್ಟಿಯಿಂದ ಬಿಟ್ಟು ಹೋಗುವ ಪ್ರಶ್ನೆ ಉದ್ಭವಿಸುವುದಿಲ್ಲ ಎಂದು ಅವರು ತಿಳಿಸಿದರು.

ಹೊಸ ಮತದಾರರ ನೋಂದಣಿ ಅಥವಾ ವರ್ಗಾವಣೆ ಸಂದರ್ಭದಲ್ಲಿ ನಮೂನೆ 6/8 ತುಂಬುವುದಾದಲ್ಲಿ ನಿರ್ದಿಷ್ಟಪಡಿಸಿರುವ 12 ದಾಖಲೆಗಳಲ್ಲಿ ಒಂದನ್ನು ಘೋಷಣಾ ನಮೂನೆಯೊಂದಿಗೆ ಸ್ವಯಂ ದೃಢೀಕರಿಸಿ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ ಎಂದರು.

ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಮತದಾರರ ಭಾಗವಹಿಸುವಿಕೆ ಚಟುವಟಿಕೆಯ ಮುಖ್ಯಸ್ಥರೂ ಆದ ಬಿ.ವಿ.ಅಶ್ವಿಜ ಅವರು ಮಾತನಾಡಿ, ಮತದಾರರ ಜಾಗೃತಿ ಸಂಬಂಧಿಸಿದಂತೆ ಜಿಲ್ಲಾದ್ಯಂತ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿವೆ. ಗ್ರಾಮ ಪಂಚಾಯ್ತಿ ಮಟ್ಟದಲ್ಲಿ ಹಾಗೂ ಶಾಲಾ ಹಂತದಲ್ಲಿ ಮತದಾರರ ಜಾಗೃತಿ ಕ್ಲಬ್‌ಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ.ಎನ್.ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

## ಚಿಕಿತ್ಸೆ ಫಲಕಾರಿಯಾಗದೆ ಅಪರಿಚಿತ ಸಾವು

ತುಮಕೂರು

ಕ್ಯಾತ್ಸಂದ್ರ ಪೊಲೀಸ್ ಠಾಣೆ ವ್ಯಾಪ್ತಿ ಕ್ಯಾತ್ಸಂದ್ರ ಗಾಯತ್ರಿ ವೈನ್ಸ್ ಪಕ್ಕದ ವಿಸಿಟರ್ಸ್ ಫ್ಯಾಮಿಲಿ ರೆಸ್ಟೋರೆಂಟ್ ಮುಂಭಾಗದಲ್ಲಿ ಅಸ್ವಸ್ಥಗೊಂಡಿದ್ದ ಸುಮಾರು 45 ವರ್ಷದ ಅಪರಿಚಿತ ವ್ಯಕ್ತಿಯನ್ನು ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೇ 11ರಂದು ಮೃತಪಟ್ಟಿರುತ್ತಾನೆ.

ಮೃತನು 170 ಸೆಂ.ಮೀ. ಎತ್ತರ, ದುಂಡು ಮುಖ, ಕಪ್ಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಎಡಗೈನ ಕಣಕೈನಲ್ಲಿ ಮಮತೇಶ್ ಎಂದು ಕನ್ನಡದಲ್ಲಿ ಹಚ್ಚೆ ಇರುತ್ತದೆ.

ಮೃತನ ವಾರಸುದಾರರು ಯಾರಾದರೂ ಇದ್ದಲ್ಲಿ ಹತ್ತಿರದ ಪೊಲೀಸ್ ಠಾಣೆಯನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

## ಅತಿಥಿ ಶಿಕ್ಷಕರ ನೇಮಕಾತಿಗೆ ಅರ್ಜಿ ಆಹ್ವಾನ

ತುಮಕೂರು

ಕುಣಿಗಲ್ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧೀನದಲ್ಲಿರುವ ಇಂದಿರಾಗಾಂಧಿ ವಸತಿ/ ಮೊರಾರ್ಜಿ ದೇಸಾಯಿ ವಸತಿ/ ಡಾ: ಅಂಬೇಡ್ಕರ್ ವಸತಿ ಶಾಲೆಗಳಲ್ಲಿ ಖಾಲಿ ಇರುವ ಕನ್ನಡ, ಇಂಗ್ಲೀಷ್, ಹಿಂದಿ, ಗಣಿತ, ಕಂಪ್ಯೂಟರ್ ಸೈನ್ಸ್, ಸಮಾಜ ವಿಜ್ಞಾನ ಹಾಗೂ ವಿಜ್ಞಾನ ಶಿಕ್ಷಕ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅತಿಥಿ ಶಿಕ್ಷಕರನ್ನು 2026–27ನೇ ಸಾಲಿಗೆ ಮಾತ್ರ ತಾತ್ಕಾಲಿಕವಾಗಿ ಗೌರವಧನದ ಆಧಾರದ ಮೇಲೆ ನೇಮಿಸಿಕೊಳ್ಳಲಾಗುವುದು. ಆಸಕ್ತರು ಅರ್ಜಿ ನಮೂನೆಯನ್ನು ಸಮೀಪದ ವಸತಿ ಶಾಲೆ ಅಥವಾ ಇ–ಮೇಲ್: kreismdrs74@gmail.com ನಿಂದ ಪಡೆಯಬಹುದಾಗಿದೆ. ಭರ್ತಿ ಮಾಡಿದ ಅರ್ಜಿ ನಮೂನೆಯನ್ನು ಅಗತ್ಯ ದಾಖಲಾತಿಗಳೊಂದಿಗೆ ಜೂನ್ 5ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 7353013000ಯನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ರಾಮಲಿಂಗಾರೆಡ್ಡಿಗೆ ಡಿಸಿಎಂ ಹುದ್ದೆ ನೀಡಲು ಒತ್ತಾಯ

ತುಮಕೂರು

ಹಿರಿಯ ಕಾಂಗ್ರೆಸ್ ನಾಯಕ ರಾಮಲಿಂಗಾರೆಡ್ಡಿ ಅವರಿಗೆ ಡಿ.ಕೆ. ಶಿವಕುಮಾರ್ ನೇತೃತ್ವದ ಹೊಸ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಜಿಲ್ಲಾ ರೆಡ್ಡಿ ಜನಸಂಘ ಅಧ್ಯಕ್ಷ ಕೆ. ಶ್ರೀನಿವಾಸ ರೆಡ್ಡಿ ಕಾಂಗ್ರೆಸ್ ಹೈಕಮಾಂಡ್ ಹಾಗೂ ನಾಯಕರಿಗೆ ಒತ್ತಾಯಿಸಿದರು.

ಮಂಗಳವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸಾಂಸ್ಕೃತಿಕ ಚರಿತ್ರೆಯಲ್ಲಿ ವಿಶಿಷ್ಟತೆ ಮೆರೆಯುತ್ತಿರುವ ರೆಡ್ಡಿ ಜನಾಂಗ ರಾಜ್ಯದಲ್ಲಿ ಸುಮಾರು 60 ಲಕ್ಷ ಜನಸಂಖ್ಯೆ ಇದೆ. ಆದರೆ ಜನಸಂಖ್ಯೆಗೆ ತಕ್ಕಂತೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ದೊರೆತಿಲ್ಲ.

ಹೀಗಾಗಿ ಈ ಬಾರಿ ಸರ್ಕಾರ ರೆಡ್ಡಿ ಸಮಾಜದ ನಾಯಕರಿಗೆ ಹೆಚ್ಚು ಪ್ರಾತಿನಿಧ್ಯ ನೀಡಬೇಕು ಎಂದರು.




ರಾಜ್ಯ ರಾಜಕಾರಣದಲ್ಲಿ ಸಿಕ್ಕಿರುವ ಅವಕಾಶ ಬಳಸಿಕೊಂಡು ರೆಡ್ಡಿ ಸಮಾಜದ ನಾಯಕರು ರಾಜಕೀಯದಲ್ಲಿ ಛಾಪು ಮೂಡಿಸಿ ಗಮನ ಸೆಳೆದಿದ್ದಾರೆ.

ಪ್ರಸ್ತುತ ನಮ್ಮ ಸಮಾಜದ 24 ಶಾಸಕರಿದ್ದು ಈ ಪೈಕಿ ಹಿರಿಯ ನಾಯಕ ರಾಮಲಿಂಗಾರೆಡ್ಡಿ ಅವರಿಗೆ ಉಪ ಮುಖ್ಯಮಂತ್ರಿ ಹಾಗೂ ಇತರೆ 4–5 ಶಾಸಕರಿಗೆ ಸಚಿವ ಸ್ಥಾನ ನೀಡಬೇಕು. ಸಮಾಜದ ಮುಖಂಡರನ್ನು ಗುರುತಿಸಿ ಅವರನ್ನು ಎಂಎಲ್ಸಿ, ನಿಗಮ ಮಂಡಳಿ ಅಧ್ಯಕ್ಷ ಸ್ಥಾನಕ್ಕೆ ನೇಮಕ ಮಾಡಬೇಕು ಎಂದು ಶ್ರೀನಿವಾಸ ರೆಡ್ಡಿ ಒತ್ತಾಯಿಸಿದರು.

ರೆಡ್ಡಿ ಜನಾಂಗದ ವಿದ್ಯಾರ್ಥಿ ನಿಲಯ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ಮುಂದಿನ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿ ನಿಲಯ ಉದ್ಘಾಟನೆ ಮಾಡಿ ವಿದ್ಯಾರ್ಥಿಗಳಿಗೆ ಬಳಕೆಗೆ ಅವಕಾಶ ಮಾಡಿಕೊಡಲಾಗುವುದು ಎಂದರು.

ಸಂಘದ ಜಂಟಿ ಕಾರ್ಯದರ್ಶಿ ರಾಜಗೋಪಾಲ್, ಖಜಾಂಚಿ ಶಿವಾರೆಡ್ಡಿ, ಮುಖಂಡರಾದ ನರಸಿಂಹರೆಡ್ಡಿ, ಗೋವಿಂದರೆಡ್ಡಿ, ನಿರ್ಮಲ, ಶಶಿಕಲಾ ಮೊದಲಾದವರು ಹಾಜರಿದ್ದರು.

## ಅವಧಿ ವಿಸ್ತರಣೆ

ಕೋಲಾರ

ಮುಳಗಾಗಿಲು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸ್‌ಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಜೂನ್ 30ರ ಸಂಜೆ 5.00ರವರೆಗೆ ವಿಸ್ತರಿಸಲಾಗಿದೆ. ಎಸ್.ಎಸ್.ಎಲ್.ಸಿ ಉತ್ತೀರ್ಣ ಅಥವಾ ಪಿ.ಯು.ಸಿ ಉತ್ತೀರ್ಣ/ಅನುತ್ತೀರ್ಣ ವಿದ್ಯಾರ್ಥಿಗಳು ಪ್ರವೇಶ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ವಿದ್ಯುತ್ ವಿಭಾಗದ ಪ್ರಾಚಾರ್ಯರಾದ ಕವಿತ.ಬಿ ಮೊ.ಸಂ. 9632117987, ಯಾಂತ್ರಿಕ ವಿಭಾಗದ ವಿಭಾಗಾಧಿಕಾರಿ ಎಂ.ಬಸವರಾಜು ಮೊ.ಸಂ. 9448329578, ರಿಜಿಸ್ಟ್ರಾರ್ ಎಂ. ನಾಗವೇಣಿ ಮೊ.ಸಂ.7349567820, ಶಿಕ್ಷಕ ಎನ್. ಮುನಿರಾಜು ಮೊ.ಸಂ.9113815209 ಮತ್ತು ಪ್ರ.ದ.ಸ ರಾಕೇಶ್ ಮೊ.ಸಂ.9880665668 ಯನ್ನು ಸಂಪರ್ಕಿಸಬಹುದೆಂದು ಸರ್ಕಾರಿ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಾಯಧನಕ್ಕೆ ಅರ್ಜಿ ಆಹ್ವಾನ

ತುಮಕೂರು

ಪಶುಪಾಲನಾ ಹಾಗೂ ಪಶುವೈದ್ಯಕೀಯ ಸೇವಾ ಇಲಾಖೆಯು ಜಿಲ್ಲೆಯ ಚಿಕ್ಕನಾಯಕನಹಳ್ಳಿ, ತಿಪಟೂರು ಹಾಗೂ ಗುಬ್ಬಿ ತಾಲ್ಲೂಕಿನ ಗಣಿಬಾಧಿತ ಗ್ರಾಮದ ಫಲಾನುಭವಿಗಳಿಗೆ ಒಂದು ಮಿಶ್ರತಳಿ ಹಾಲು ಕರೆಯುವ ಹಸು/ಎಮ್ಮೆ ಸಾಕಾಣಿಕೆಗಾಗಿ ಸಹಾಯಧನ ನೀಡಲು ಅರ್ಹರಿಂದ ಅರ್ಜಿ ಆಹ್ವಾನಿಸಿದೆ.

ಗಣಿಬಾಧಿತ/ಪ್ರಭಾವಕ್ಕೊಳಗಾದ ಚಿಕ್ಕನಾಯಕನಹಳ್ಳಿ, ತಿಪಟೂರು ಹಾಗೂ ಗುಬ್ಬಿ ತಾಲ್ಲೂಕಿನ 5ಕಿಮೀ. ವ್ಯಾಪ್ತಿಯಲ್ಲಿರುವ ಗ್ರಾಮಗಳಲ್ಲಿ ಫಲಾನುಭವಿಗಳು ಸಹಾಯಧನ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಅರ್ಹರಿಗೆ ಬ್ಯಾಂಕಿನ ಮೂಲಕ ಘಟಕ ವೆಚ್ಚ 60,000 ರೂ.ಗಳ ಸಹಾಯಧನವನ್ನು ನೀಡಲಾಗುವುದು. ಘಟಕ ವೆಚ್ಚದ ಪೈಕಿ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದ ಫಲಾನುಭವಿಗಳಿಗೆ ಶೇ.90ರಂತೆ ಮತ್ತು ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಶೇ.50ರಂತೆ ನೀಡಲಾಗುವುದು.

ನಿಯಮಾನುಸಾರ ಅಂಗವಿಕಲರಿಗೆ, ಅಲ್ಪಸಂಖ್ಯಾತರಿಗೆ ಆದ್ಯತೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಸಂಬಂಧಪಟ್ಟ ಗಣಿಬಾಧಿತ ಪ್ರದೇಶದ ವ್ಯಾಪ್ತಿಗೆ ಬರುವ ಪಶುವೈದ್ಯ ಸಂಸ್ಥೆಯವರನ್ನು ಸಂಪರ್ಕಿಸಬಹುದಾಗಿದೆ.

ಭರ್ತಿ ಮಾಡಿದ ಅರ್ಜಿಯನ್ನು ದ್ವಿಪ್ರತಿಯಲ್ಲಿ ಜೂನ್ 13ರೊಳಗಾಗಿ ಸಲ್ಲಿಸಬಹುದಾಗಿದ್ದು, ಅರ್ಜಿಯೊಂದಿಗೆ ಆಧಾರ್ ಕಾರ್ಡ್, ಕುಟುಂಬ ಪಡಿತರ ಚೀಟಿಯ ಪ್ರತಿ, ಜಾತಿ ಪ್ರಮಾಣ ಪತ್ರ(ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಅಲ್ಪಸಂಖ್ಯಾತರಾಗಿದ್ದಲ್ಲಿ), ಗ್ರಾಮ ಪಂಚಾಯಿತಿಯಿಂದ ನೀಡಿದ ವಾಸಸ್ಥಳದ ದೃಢೀಕರಣ ಪತ್ರ, ಬ್ಯಾಂಕ್ ಉಳಿತಾಯ ಖಾತೆಯ ಪಾಸ್ ಪುಸ್ತಕದ ದೃಢೀಕೃತ ಪ್ರತಿ, ವಿಕಲಚೇತನರಾಗಿದ್ದಲ್ಲಿ ಪ್ರಮಾಣ ಪತ್ರದ ಪ್ರತಿಯನ್ನು ಲಗತ್ತಿಸಬೇಕು. ಅರ್ಜಿದಾರರು ಕಡ್ಡಾಯವಾಗಿ ಗಣಿಬಾಧಿತ/ಪ್ರಭಾವಕ್ಕೊಳಗಾದ 5 ಕಿಮೀ. ವ್ಯಾಪ್ತಿಯಲ್ಲಿರುವ ಗ್ರಾಮದವರಾಗಿರಬೇಕು ಹಾಗೂ ಘಟಕದ ಸದಸ್ಯರಾಗಿರಬೇಕು, ನಲ್ಲಿ ಕಡ್ಡಾಯವಾಗಿ ನೋಂದಾಯಿಸಿರಬೇಕು ಎಂದು ಪ್ರಕಟಣೆ ತಿಳಿಸಿದೆ.

## ದುಶ್ಚಟಗಳಿಂದ ದೂರವಿದ್ದು ಆರೋಗ್ಯ ಕಾಪಾಡಿಕೊಳ್ಳಿ: ನ್ಯಾಯಾಧೀಶ ಟಿ.ಪಿ.ರಾಮಲಿಂಗೇಗೌಡ

ಚಿಕ್ಕಬಳ್ಳಾಪುರ

ಯುವಕರು ದುಶ್ಚಟಗಳಿಗೆ ಬಲಿಯಾಗದಂತೆ ತಮ್ಮನ್ನು ತಾವು ಕಾಪಾಡಿಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಟಿ.ಪಿ.ರಾಮಲಿಂಗೇಗೌಡ ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಾಗಾರ್ಜುನ ಪದವಿ ಪೂರ್ವ ಕಾಲೇಜು ಹಾಗೂ ತಂಬಾಕು ನಿಯಂತ್ರಣ ಕೋಶದ ಸಂಯುಕ್ತಾಶ್ರಯದಲ್ಲಿ ಬೀಡಗಾನಹಳ್ಳಿಯ ನಾಗಾರ್ಜುನ ಪದವಿ ಪೂರ್ವ ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಿದ್ದ “ವಿಶ್ವ ತಂಬಾಕು ರಹಿತ ದಿನ” ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹದಿಹರೆಯದ ವಯಸ್ಸಿನಲ್ಲಿ ದುಶ್ಚಟಗಳ ಪ್ರಭಾವಕ್ಕೆ ಒಳಗಾಗುವ ಸಾಧ್ಯತೆ ಹೆಚ್ಚಿರುವುದರಿಂದ ವಿದ್ಯಾರ್ಥಿಗಳು ಹೆಚ್ಚು ಜಾಗರೂಕರಾಗಿರಬೇಕು ಎಂದು ಸಲಹೆ ನೀಡಿದರು. “ಎಷ್ಟೇ ಕಠಿಣ ಕಾನೂನುಗಳಿದ್ದರೂ ವಿಶ್ವದಾದ್ಯಂತ ಲಕ್ಷಾಂತರ ಮಂದಿ ತಂಬಾಕು ಸೇವನೆಯಿಂದ ಸಾವನ್ನಪ್ಪುತ್ತಿದ್ದಾರೆ. ಆದ್ದರಿಂದ ನಮ್ಮ ಆರೋಗ್ಯವನ್ನು ನಾವುಲೇ ಕಾಪಾಡಿಕೊಳ್ಳಬೇಕು” ಎಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ. ಶಿಲ್ಪ ಅವರು ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿ, ಸಾಮಾಜಿಕ ಜಾಲತಾಣಗಳಲ್ಲಿನ ಪ್ರಭಾವಕ್ಕೆ ಒಳಗಾಗಿ ಅನೇಕ ಯುವಕರು ತಮ್ಮ ಭವಿಷ್ಯವನ್ನು ಹಾಳುಮಾಡಿಕೊಳ್ಳುತ್ತಿದ್ದಾರೆ ಎಂದು ವಿಷಾದ ವ್ಯಕ್ತಪಡಿಸಿದರು.

ಮಾದಕ ವ್ಯಸನಗಳು ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಾರಕವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಸಂಯಮ ಮತ್ತು ಸ್ಥಿರ ಮನಸ್ಸನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ಸುತ್ತಮುತ್ತ ನಡೆಯುವ ಕಾನೂನುಬಾಹಿರ ಚಟುವಟಿಕೆಗಳ ಬಗ್ಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಮಾಹಿತಿ ನೀಡುವ ಮೂಲಕ ಸಮಾಜದ ಸ್ವಾಸ್ಥ್ಯ ಕಾಪಾಡಲು ಸಹಕರಿಸಬೇಕು ಎಂದು ಮನವಿ ಮಾಡಿದರು.



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಅವರು ತಂಬಾಕಿನ ಇತಿಹಾಸ ಹಾಗೂ ಅದರ ದುಷ್ಪರಿಣಾಮಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಗನ್ನಾಥ್ ರಾಯ್, ವಕೀಲರ ಸಂಘದ ಅಧ್ಯಕ್ಷ ಕೆ.ವಿ. ಅಭಿಲಾಷ್, ನಾಗಾರ್ಜುನ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿ ಕಾಲೇಜಿನ ಪ್ರಾಂಶುಪಾಲ ತಿಪ್ಪೇಸ್ವಾಮಿ ಸೇರಿದಂತೆ ಹಲವರು ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು, ವೈದ್ಯಾಧಿಕಾರಿಗಳು, ನಾಗಾರ್ಜುನ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ತೋಟಗಾರಿಕೆ ಬೆಳೆಗಳಿಗೆ ಸಹಾಯಧನ

ಬೆಂ.ಗ್ರಾ.ಜಿಲ್ಲೆ

ತೋಟಗಾರಿಕೆ ಇಲಾಖೆ ವತಿಯಿಂದ ಸಮಗ್ರ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ತೋಟಗಾರಿಕೆ ಬೆಳೆಗಳು ಸೇರಿದಂತೆ ಘಟಕಗಳ ನಿರ್ಮಾಣಕ್ಕೆ ಸಹಾಯಧನ ನೀಡಲಾಗುತ್ತಿದ್ದು, ಆಸಕ್ತ ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಯೋಜನೆಯಡಿ ಪ್ರದೇಶ ವಿಸ್ತರಣೆ ಕಾರ್ಯಕ್ರಮ (ದ್ರಾಕ್ಷಿ, ಬಾಳೆ,ದಾಳಿಂಬೆ, ಸೀಬೆ, ಹೈಬ್ರಿಡ್ ತರಕಾರಿ, ಮಾವು, ಕಾಳು ಮೆಣಸು ಮತ್ತು ಹೂ ಬೆಳೆ), ರೋಗ ಮತ್ತು ಕೀಟ ನಿಯಂತ್ರಣ, ತೋಟಗಾರಿಕೆಯಲ್ಲಿ ಯಾಂತ್ರೀಕರಣ, ಪ್ಲಾಸ್ಟಿಕ್ ಹೊದಿಕೆ, ಫ್ರೀ ಕೂಲಿಂಗ್ ಯೂನಿಟ್, ನೆರಳು ಮನೆ ಘಟಕ, ಹಸಿರು ಮನೆ ನಿರ್ಮಾಣ ಮತ್ತು ಬೆಳೆ ಪದ್ಧತಿ, ವೈಯಕ್ತಿಕ ಕೃಷಿ ಹೊಂಡ, ಟ್ಯಾಂಕ್ ಹೌಸ್, ಸೋಲಾರ್, ಪವರ್ ಕೋಲ್ಡ್ ರೂಮ್ ಹಾಗೂ ಕಡಿಮೆ ವೆಚ್ಚದ ಅಣಬೆ ಉತ್ಪಾದನಾ ಘಟಕಗಳಿಗೆ ಫಲಾನುಭವಿಗಳು ಸಹಾಯಧನವನ್ನು ಪಡೆಯಬಹುದಾಗಿದೆ.

ಈ ಘಟಕಗಳನ್ನು ಮಾರ್ಗಸೂಚಿಯ ಅನ್ವಯ ನಿರ್ಮಿಸ್ಕೊಂಡು ಸಹಾಯಧನ ಪಡೆಯಲು ಇಚ್ಛಿಸುವ ಆಸಕ್ತ ರೈತರು ಅರ್ಜಿ ಸಮೇತ ಅಗತ್ಯವಾದ ದಾಖಲೆಗಳನ್ನು ಸಂಬಂಧಪಟ್ಟ ತಾಲೂಕುಗಳ ಹಿರಿಯ ತೋಟಗಾರಿಕೆ ನಿರ್ದೇಶಕರ ಕಚೇರಿಯಲ್ಲಿ ಸಲ್ಲಿಸಬೇಕು.

ಸರ್ಕಾರ ನಿಗದಿಪಡಿಸಿದ ಮಾರ್ಗಸೂಚಿ ಹಾಗೂ ಲಭ್ಯವಿರುವ ಅನುದಾನದ ಮೇರೆಗೆ ಜೇಷ್ಠತಾವಾರು ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು. ಜಿಲ್ಲೆಯ ರೈತರು ಯೋಜನೆ ಸದುಪಯೋಗ ಪಡೆದುಕೊಂಡು ಜೂನ್ 30ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ ದೇವನಹಳ್ಳಿ–94804 61234, ಹೊಸಕೋಟೆ–98802 10892, ದೊಡ್ಡಬಳ್ಳಾಪುರ–94821 29648, ನೆಲಮಂಗಲ–99025 81832 ಅನ್ನು ಸಂಪರ್ಕಿಸಬಹುದು ಎಂದು ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಕ್ಟೋರಿಯಾ ಆಸ್ಪತ್ರೆಯಲ್ಲಿ ತಿಗಣೆ ಕಾಟ..!

ಬೆಂಗಳೂರು

*ನಗರದ ಪ್ರಮುಖ ಸರ್ಕಾರಿ ಆಸ್ಪತ್ರೆಗಳಲ್ಲೊಂದಾದ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ತಿಗಣೆ ಕಾಟದ ಆರೋಪ ಕೇಳಿಬಂದಿದ್ದು, ರೋಗಿಗಳು ಹಾಗೂ ಸಹಾಯಕರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.*

*ಆಸ್ಪತ್ರೆಯ ಮೂರನೇ ಮಹಡಿಯ ಸರ್ಜಿಕಲ್–ಗ್ಯಾಸ್ಟ್ರೋ ವಾರ್ಡ್‌ನಲ್ಲಿ ತಿಗಣೆ ಕಾಟ ಹೆಚ್ಚಾಗಿದ್ದು, ರೋಗಿಗಳ ಆರೈಕೆಗಾಗಿ ರಾತ್ರಿ ತಂಗುವ ಸಂಬಂಧಿಕರು ನಿದ್ರೆಯಿಲ್ಲದೆ ಕಾಲ ಕಳೆಯಬೇಕಾದ ಪರಿಸ್ಥಿತಿ ಎದುರಾಗಿದೆ.*

*ರೋಗಿಯೊಬ್ಬರ ಸಹಾಯಕರು ಹಂಚಿಕೊಂಡಿರುವ ವಿಡಿಯೊದಲ್ಲಿ ಹಾಸಿಗೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ತಿಗಣೆಗಳಿರುವ ದೃಶ್ಯಗಳು ಕಂಡು ಬಂದಿದ್ದು, ತಕ್ಷಣ ಕ್ರಮ ಕೈಗೊಳ್ಳುವಂತೆ ಆಸ್ಪತ್ರೆ ಆಡಳಿತ ಮಂಡಳಿಯನ್ನು ಒತ್ತಾಯಿಸಿದ್ದಾರೆ.*

*ರೋಗಿಗಳು ಹಾಗೂ ಅವರ ಕುಟುಂಬ ಸದಸ್ಯರಿಗೆ ಸುರಕ್ಷಿತ ಮತ್ತು ಸ್ವಚ್ಛ ವಾತಾವರಣ ಕಲ್ಪಿಸಲು ಪರಿಣಾಮಕಾರಿ ಕೀಟ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕೆಂದು ಮನವಿ ಮಾಡಿದ್ದಾರೆ.*

## 5ರಂದು ವಿಶ್ವ ಪರಿಸರ ದಿನ

ರಾಮನಗರ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಂಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಧರೆ ಫೌಂಡೇಷನ್, ಜಿಲ್ಲಾ ವಕೀಲರ ಸಂಘ ಹಾಗೂ ಅರಣ್ಯ ಇಲಾಖೆಯ ಸಹಯೋಗದಲ್ಲಿ ವಿಶ್ವ ಪರಿಸರ ದಿನ–2026ಅನ್ನು ಜೂ. 5ರ ಶುಕ್ರವಾರ ಬೆಳಿಗ್ಗೆ 9.30ಕ್ಕೆ ರಾಮನಗರದ ಬಸವನಪುರದ ರಣಹದ್ದು ವನ್ಯಜೀವಿ ಧಾಮದ ಶ್ರೀ ರಾಮದೇವರ ಬೆಟ್ಟದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಎಂ.ಎಚ್. ಅಣ್ಣಯ್ಯನವರ ಅವರು ಉದ್ಘಾಟಿಸುವರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಕೆ. ಕೆಂಪಯ್ಯ ಅವರು ಅಧ್ಯಕ್ಷತೆ ವಹಿಸುವರು.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ನ್ಯಾ. ಪಂಚಾಕ್ಷರಿ ಎಂ., ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ನ್ಯಾ. ಎಸ್.ಎ. ಹಿದಾಯಿತುಲ್ಲಾ ಶರೀಫ್, ಮಾಲಿನ್ಯ ನಿಯಂತ್ರಣ ಮಂಡಳಿಯ ಹಿರಿಯ ಪರಿಸರ ಅಧಿಕಾರಿ ಮಂಜುನಾಥ, ಮಾತೃ ಫೌಂಡೇಶನ್ (ರಿ) ಅಧ್ಯಕ್ಷರು ಹಾಗೂ ವಕೀಲರಾದ ಆರ್. ಚಂದ್ರಕುಮಾರ್, ಸಾಲುಮರದ ನಿಂಗಣ್ಣ ಹಾಗೂ ಬಿ.ಟಿ. ರಾಜೇಂದ್ರ ಮತ್ತು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್. ಅವರು ಭಾಗವಹಿಸುವರು.

## ಧ್ಯಾನದಿಂದ ಏಕಾಗ್ರತೆ, ಜ್ಞಾಪಕಶಕ್ತಿ ವೃದ್ಧಿ: ರಾಜಯೋಗಿನಿ ಬಿ.ಕೆ.ಶಿವಮಣಿ

ಚಿಕ್ಕಬಳ್ಳಾಪುರ

ಧ್ಯಾನ ಮತ್ತು ಸರಳ ಯೋಗಾಭ್ಯಾಸದಿಂದ ಮನಸ್ಸಿನ ಏಕಾಗ್ರತೆ ಹಾಗೂ ಜ್ಞಾಪಕಶಕ್ತಿ ವೃದ್ಧಿಯಾಗುತ್ತದೆ. ಪ್ರತಿಯೊಬ್ಬರೂ ಧ್ಯಾನವನ್ನು ಜೀವನದ ಭಾಗವನ್ನಾಗಿಸಿಕೊಂಡರೆ ಜೀವನವನ್ನು ಸುಂದರಮಯವಾಗಿಸಿಕೊಳ್ಳಬಹುದು ಎಂದು ಮೋಟಿವೇಷನ್ ಸ್ಪೀಕರ್ ರಾಜಯೋಗಿನಿ ಬಿ.ಕೆ. ಶಿವಮಣಿ ಹೇಳಿದರು.

ಜಿಲ್ಲೆಯ ಗೌರಿಬಿದನೂರಿನ ಬ್ರಹ್ಮಾ ಕುಮಾರೀಸ್ ಈಶ್ವರೀಯ ವಿಶ್ವ ವಿದ್ಯಾಲಯದ “ವಿಶ್ವ ಪ್ರಕಾಶ ಭವನ”ದಲ್ಲಿ ಆಯೋಜಿಸಿದ್ದ “ಭಗವದ್ಗೀತೆಯ ಸಾರ” ಹಾಗೂ “ಶರಣರ ಶಿವಯೋಗ ಪ್ರವಚನ ಮಾಲೆ” ಕಾರ್ಯಕ್ರಮದಲ್ಲಿ ಮುಖ್ಯ ಪ್ರವಚನಕಾರರಾಗಿ ಮಾತನಾಡಿದ ಅವರು, ಭಗವದ್ಗೀತೆಯ ಸಾರ ಮಾನವನನ್ನು ಚಿಂತೆಯಿಂದ ಮುಕ್ತಗೊಳಿಸುವ ಸಂದೇಶವನ್ನು ನೀಡುತ್ತದೆ ಎಂದು ತಿಳಿಸಿದರು.

“ಯಾರ ಬಗ್ಗೆ ನಾವು ಚಿಂತಿಸುತ್ತೇವೋ ಅವರು ನಮ್ಮ ಚಿಂತೆಗೆ ಯೋಗ್ಯರಾಗಿರುವುದಿಲ್ಲ. ಇತರರು ನಮ್ಮ ಬಗ್ಗೆ ನೋವುಂಟು ಮಾಡುವ ರೀತಿಯಲ್ಲಿ ಮಾತನಾಡಿದರೂ ಅದನ್ನು ನಾವು ಸ್ವೀಕರಿಸದಿದ್ದರೆ ದುಃಖವಾಗುವುದಿಲ್ಲ. ಆದರೆ, ನಾವು ಆ ವಿಚಾರವನ್ನೇ ದಿನಪೂರ್ತಿ ಯೋಚಿಸಿ ನಮ್ಮ ಆರೋಗ್ಯ ಮತ್ತು ಮನಶಾಂತಿಯನ್ನು ಕಳೆದುಕೊಳ್ಳುತ್ತೇವೆ,” ಎಂದು ಹೇಳಿದರು.

ಭವಿಷ್ಯದ ಚಿಂತೆಯಲ್ಲಿ ವರ್ತಮಾನದ ಸಂತೋಷವನ್ನು ಕಳೆದುಕೊಳ್ಳಬಾರದು. ಮನಸ್ಸನ್ನು ಧ್ಯಾನದ ಮೂಲಕ ಶಕ್ತಿಶಾಲಿಯನ್ನಾಗಿ ಮಾಡಿಕೊಳ್ಳಬೇಕು. ಧ್ಯಾನದಿಂದ ಏಕಾಗ್ರತೆ ಹೆಚ್ಚುವುದರ ಜೊತೆಗೆ ಮನಸ್ಸಿಗೆ ಶಾಂತಿ ಹಾಗೂ ಆತ್ಮವಿಶ್ವಾಸ ದೊರೆಯುತ್ತದೆ ಎಂದು ಅವರು ತಿಳಿಸಿದರು.



ಸ್ಥಳೀಯ ಕೇಂದ್ರದ ಸಂಚಾಲಕರಾದ ರಾಜಯೋಗಿನಿ ಬಿ.ಕೆ. ಪದ್ಮಾ ಬೆಹಂಜಿ ಮಾತನಾಡಿ, “ಶರಣರ ಶಿವಯೋಗ ಪ್ರವಚನ ಮಾಲೆ” ಕಾರ್ಯಕ್ರಮವು ವಚನ ಸಾಹಿತ್ಯ, ಶಿವಶರಣರ ತತ್ವಗಳು ಹಾಗೂ ಬಸವಾದಿ ಶರಣರ ಅನುಭಾವಗಳನ್ನು ಜನಸಾಮಾನ್ಯರಿಗೆ ಪರಿಚಯಿಸುವ ಉದ್ದೇಶ ಹೊಂದಿದೆ ಎಂದರು.

ಆಧ್ಯಾತ್ಮಿಕತೆ, ಲಿಂಗಪೂಜೆ, ಭಕ್ತಿ ಮಾರ್ಗ ಮತ್ತು ಜೀವನ ಮೌಲ್ಯಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ಪ್ರಜಾಪಿತಾ ಬ್ರಹ್ಮಾ ಕುಮಾರೀಸ್ ಈಶ್ವರೀಯ ವಿಶ್ವ ವಿದ್ಯಾಲಯ ಮಾಡುತ್ತಿದೆ ಎಂದು ಹೇಳಿದರು.

ಬಿ.ಕೆ. ಸಹೋದರಿ ರತ್ನ ಅಕ್ಕ ಮಾತನಾಡಿ, ಲಿಂಗಾಂಗ ಸಮರಸ ಮತ್ತು ಶಿವಯೋಗದ ಸಾಧನಾ ಮಾರ್ಗವನ್ನು ಅರಿತುಕೊಳ್ಳುವುದು ಅಗತ್ಯವಾಗಿದೆ. ಶರಣರ ತತ್ವಗಳನ್ನು ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಆತ್ಮಶಾಂತಿ ಮತ್ತು ಸಾರ್ಥಕ ಜೀವನ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಸಂಘ–ಸಂಸ್ಥೆಗಳ ಪ್ರಮುಖರು, ಬ್ರಹ್ಮಾ ಕುಮಾರೀಸ್ ಕೇಂದ್ರದ ಸಹೋದರ–ಸಹೋದರಿಯರು ಹಾಗೂ ಭಕ್ತರು ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy